ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೩೩

**ಪಟ್ಟಿ – ೩೨**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತಮೂರನೇ ಅಧಿವೇಶನ**

**(ಮುಂದುವರೆದ ಉಪವೇಶನ)**

**ಗುರುವಾರ, ದಿನಾಂಕ: ೨೩ನೇ ನವೆಂಬರ್, ೨೦೧೭**

---

## ಸಮೂಹ – IV

೧. ಮುಖ್ಯ ಮಂತ್ರಿಗಳು.

೨. ಗೃಹ ಸಚಿವರು.

೩. ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು.

೪. ನಗರಾಭಿವೃದ್ಧಿ ಹಾಗೂ ಹಜ್ ಸಚಿವರು.

೫. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು.

೬. ಅಬಕಾರಿ ಸಚಿವರು.

---

## ಬೆಳಗಾವಿ ಜಿಲ್ಲೆಯಲ್ಲಿ ಮಳೆಯಿಂದ ಆದ ಹಾನಿ ಬಗ್ಗೆ

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೦೩ (೪೪೩೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯಲ್ಲಿ ಇತ್ತೀಚೆಗೆ ಆದ ಮಳೆಯಿಂದಾಗಿ ಹಾನಿಗೊಳಗಾದ ಬೆಳೆಯ ಮೊತ್ತ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಹಾನಿಗೊಳಗಾದ ಬೆಳೆಗಳ ಬಗ್ಗೆ ಸರ್ವೆ ಕಾರ್ಯ ಪೂರ್ಣಗೊಂಡಿದೆಯೇ;

(ಇ) ಬೆಳೆ ಹಾನಿಯಾದ ರೈತರಿಗೆ ಸೂಕ್ತ ಪರಿಹಾರ ನೀಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ತಾಲ್ಲೂಕುವಾರು ವಿವರ ನೀಡುವುದು)

## ಚರಂಡಿಗಳ ಹೂಳೆತ್ತುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೪೧೦೪ (೪೬೩೧) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ೯ನೇ ವಾರ್ಡ್‌ನ ಮುನೇಶ್ವರ ಬಡಾವಣೆಯ ೫೦ ಅಡಿ ಮುಖ್ಯ ರಸ್ತೆ ಹಾಗೂ ಅಡ್ಡ ರಸ್ತೆಗಳ ಚರಂಡಿಗಳು ಪೂರ್ಣವಾಗಿ ಹೂಳು ತುಂಬಿ ಮಳೆ ನೀರು ಕಳೆದ ೩/೪ ತಿಂಗಳಿನಿಂದ ಚರಂಡಿಗಳಲ್ಲಿ ಹೋಗದೆ ರಸ್ತೆಯಲ್ಲೇ ಹರಿದು ಸದರಿ ರಸ್ತೆ ಪದೇ ಪದೇ ಹಾಳಾಗುತ್ತಿರುವುದು ಹಾಗೂ

ಸದರಿ ನೀರು ತಗ್ಗು ಪ್ರದೇಶದ ಮನೆಗಳಿಗೆ ನುಗ್ಗುತ್ತಿದ್ದರೂ ಜಂಟಿ ಆಯುಕ್ತರು ಹಾಗೂ ಅಭಿಯಂತರರು ಹೂಳೆತ್ತುವ ಕ್ರಮ ಕೈಗೊಳ್ಳಲು ಸರ್ಕಾರಲ್ಲಿನ ಹಣದ ಕೊರತೆ ಕಾರಣವೇ; ಇಲ್ಲದಿದ್ದಲ್ಲಿ ವಿಳಂಬಕ್ಕೆ ಕಾರಣ ಯಾರು; (ಪೂರ್ಣ ವಿವರ ನೀಡುವುದು)

(ಆ) ಸದರಿ ಮುಖ್ಯ ರಸ್ತೆಯ ಒಳಚರಂಡಿಗೆ ಅಡ್ಡ ರಸ್ತೆಗಳ ಒಳಚರಂಡಿಗಳಿಂದ ಮಣ್ಣು ಬಾರದಂತೆ ಮಾಡಲು ನಗರ ಪಾಲಿಕೆ ಕೈಗೊಳ್ಳುವ ಕ್ರಮಗಳೇನು; ಇನ್ನು ಎಷ್ಟು ದಿನಗಳಲ್ಲಿ ಸದರಿ ಮುಖ್ಯ ರಸ್ತೆ ಹಾಗೂ ಅಡ್ಡ ರಸ್ತೆಗಳ ಚರಂಡಿಗಳ ಹೂಳನ್ನು ತೆಗೆಯಲಾಗುವುದು;

(ಇ) ಮೇಲ್ಕಂಡ ವಾರ್ಡಿನ ಇಂತಹ ಕಾಮಗಾರಿಗೆ ಈ ಸಾಲಿನ ಮಳೆಗಾಲದಲ್ಲಿ ಸರ್ಕಾರ ಈವರೆವಿಗೂ ಬಿಡುಗಡೆ ಮಾಡಿರುವ ಹಾಗೂ ಖರ್ಚಾದ ಹಣವೆಷ್ಟು; (ಕಾಮಗಾರಿಗಳವಾರು ಪೂರ್ಣ ವಿವರ ಒದಗಿಸುವುದು)

## ಮ್ಯಾನ್ ಹೋಲ್‌ಗಳನ್ನು ಸರಿಪಡಿಸುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೪೧೧೦೫ (೪೬೩೦) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ೬ನೇ ವಾರ್ಡ್‌ನ ಮುನೇಶ್ವರ ಬಡಾವಣೆಯ ಹೊಸ ಬಸ್ ನಿಲ್ದಾಣದ ೫೦ ಅಡಿ ಮತ್ತು ೮೦ ಅಡಿ ರಸ್ತೆ ಕೂಡುವ ಜಾಗ ಮತ್ತು ಸದರಿ ಸರ್ಕಲ್‌ನ ಹಿಂದು ಮುಂದಿನ ಸ್ಯಾನಿಟರಿ ಲೈನ್ ಹಾಗೂ ಮ್ಯಾನ್ ಹೋಲ್‌ಗಳನ್ನು ರಕ್ಕಸಿ ಹಳ್ಳದ ಕಾಮಗಾರಿಗಾಗಿ, ಕಳೆದ ೬ ತಿಂಗಳಿಂದ ಬಂದ್ ಮಾಡಿದ್ದರಿಂದಾಗಿ ಸದರಿ ಬಡಾವಣೆಯ ಸ್ಯಾನಿಟರಿ ಲೈನ್‌ಗಳು ಹಾಗೂ

ಮ್ಯಾನ್‌ಹೋಲ್‌ಗಳು ಪದೇ ಪದೇ ಬ್ಲಾಕ್ ಆಗಿ ಸ್ಯಾನಿಟರಿ ನೀರು ಚರಂಡಿಯಲ್ಲಿ ಹಾಗೂ ಕೆಲವು ಮನೆಗಳಿಗೆ ಹರಿಯುತ್ತಿದ್ದರೂ ಸಹ ಈವರೆವಿಗೂ ಅವುಗಳನ್ನು ವೈಜ್ಞಾನಿಕವಾಗಿ ನಿರ್ಮಿಸದಿರಲು ಕಾರಣವೇನು; ಕೂಡಲೇ ನಿರ್ಮಿಸಲು ಕೈಗೊಳ್ಳುವ ಕ್ರಮವೇನು:

(ಆ) ಮೇಲ್ಕಂಡ ಸ್ಥಳದಲ್ಲಿನ ೨/೩ ಮ್ಯಾನ್ ಹೋಲ್‌ಗಳಿಗೆ ಜಲಮಂಡಳಿಯಿಂದ ತಾತ್ಕಾಲಿಕವಾಗಿ ಪೈಪುಗಳನ್ನು ಪೂರ್ಣ ಕೆಳಭಾಗಕ್ಕೆ ಅಳವಡಿಸದೆ ಮ್ಯಾನ್ ಹೋಲ್‌ನ ಅರ್ಧ ಮೇಲ್ಭಾಗಕ್ಕೆ ಅಳವಡಿಸಿರುವುದೇ ಈ ಸಮಸ್ಯೆಗೆ ಕಾರಣವಾಗಿದ್ದು ಇದನ್ನು ಕೂಡಲೇ ಸರಿಪಡಿಸಲು ಜಲಮಂಡಳಿಯ ಹಿರಿಯ ಅಧಿಕಾರಿಗಳು ಕೈಗೊಳ್ಳುವ ಕ್ರಮವೇನು;

(ಇ) ಸದರಿ ೨/೩ ಮ್ಯಾನ್ ಹೋಲ್‌ಗಳು ಕಳೆದ ೪/೫ ತಿಂಗಳಿನಿಂದ ಬ್ಲಾಕ್ ಆಗುವುದು ಹಾಗೂ ರಸ್ತೆಯಲ್ಲೇ ಸ್ಯಾನಿಟರಿ ನೀರು ಹರಿಯುವುದನ್ನು ತಡೆಗಟ್ಟಲು ಮ್ಯಾನ್ ಹೋಲ್‌ಗಳನ್ನು ಇನ್ನೂ ಹೆಚ್ಚಿನ ಆಳಕ್ಕೆ ನಿರ್ಮಿಸಿ, ಸದರಿ ಜಾಗಗಳಲ್ಲಿ ದೊಡ್ಡ ಪೈಪ್‌ಗಳನ್ನು, ರಕ್ಕಸಿ ಹಳ್ಳದ ತುಂಬಾ ತಗ್ಗು ಪ್ರದೇಶದವರೆಗೂ ಅಳವಡಿಸಿ ಮುಖ್ಯ ಲೈನ್‌ಗೆ ವೈಜ್ಞಾನಿಕವಾಗಿ ಅಳವಡಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸರ್ಕಾರದಿಂದ ಕೂಡಲೇ ನೀಡುವ ನಿರ್ದೇಶನಗಳೇನು:

(ಈ) ಈ ಸಮಸ್ಯೆಯ ತಾತ್ಕಾಲಿಕ ಪರಿಹಾರಕ್ಕಾಗಿ ಈವರೆವಿಗೂ ಜಲಮಂಡಳಿ ಅಧಿಕಾರಿಗಳು ಖರ್ಚು ಮಾಡಿರುವ ಹಣ ಎಷ್ಟು; (ವಿವರ ನೀಡುವುದು)

(ಉ) ಈ ಸಮಸ್ಯೆಯನ್ನು ಈವರಿವಿಗೂ ಕ್ರಮಬದ್ಧವಾಗಿ ನಿವಾರಿಸದ ಅಧಿಕಾರಿಗಳು ಯಾರು? (ವಿವರ ನೀಡುವುದು)

## ರಾಜ್ಯ ಸರ್ಕಾರಿ ನೌಕರರ ವೇತನ ತಾರತಮ್ಯ ಸರಿಪಡಿಸುವ ಕುರಿತು ಮತ್ತು ಮಧ್ಯಂತರ ಪರಿಹಾರ ಘೋಷಿಸುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೪೧೦೬ (೪೭೦೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯ ಸರ್ಕಾರಿ ನೌಕರರಿಗೂ ಮತ್ತು ಕೇಂದ್ರ ಸರ್ಕಾರಿ ನೌಕರರ ಸಮಾನ ಹುದ್ದೆಯಲ್ಲಿ ವೇತನ ತಾರತಮ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ರಾಜ್ಯ ಸರ್ಕಾರಿ ನೌಕರರಿಗೆ ವೇತನ ತಾರತಮ್ಯದಿಂದ ಆಗುತ್ತಿರುವ ಅನ್ಯಾಯ ಸರಿಪಡಿಸುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

ಇ) ರಾಜ್ಯ ಸರ್ಕಾರಿ ನೌಕರರ ಬೇಡಿಕೆಯಾದ ನಂತರ ವೇತನ ಆಯೋಗ ಯಾವಾಗ ರಚಿಸಲಾಯಿತು; ಅದರ ಅವಧಿ ಎಷ್ಟು; ಅವಧಿ ಮುಂದುವರಿಸಲು ಕಾರಣಗಳೇನು;

ಈ) ಅವಧಿ ಮುಂದುವರಿಸಿರುವುದರಿಂದ ಸರ್ಕಾರಿ ನೌಕರರಿಗೆ ಮಧ್ಯಂತರ ಪರಿಹಾರ ನೀಡಲಾಗುವುದೇ; ಈ ಕುರಿತು ಸರ್ಕಾರದ ನಿಲುವೇನು;

ಉ) ಮಧ್ಯಂತರ ಪರಿಹಾರ ಮತ್ತು ವೇತನ ಪರಿಷ್ಕರಣೆ ಇನ್ನಿತರ ಬೇಡಿಕೆಗಳನ್ನು ಈಡೇರಿಸುವ ಬಗ್ಗೆ ಸರ್ಕಾರದ ನಿಲುವೇನು; ಈ ಬಗ್ಗೆ ಸರ್ಕಾರ ಯಾವ ಕ್ರಮ ಯಾವ ಸಮಯದ ಒಳಗೆ ಕೈಗೊಳ್ಳಲಿದೆ?

## ಎನ್‌ಪಿಎಸ್ ರದ್ದುಪಡಿಸಿ ಹಳೆ ಪಿಂಚಣಿ ಯೋಜನೆ ಜಾರಿಗೆ ತರುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೪೧೦೭ (೪೭೦೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನೂತನ ಪಿಂಚಣಿ ಯೋಜನೆ (ಎನ್.ಪಿ.ಎಸ್.)ಗೆ ಒಳಪಡುವ ರಾಜ್ಯ ಸರ್ಕಾರಿ ನೌಕರರ ಸಂಖ್ಯೆ ಎಷ್ಟು; (ಇಲಾಖಾವಾರು–ಜಿಲ್ಲಾವಾರು ವಿವರ ನೀಡುವುದು)

(ಆ) ಯೋಜನೆ ಜಾರಿಯಾದ ನಂತರ ಮೃತಪಟ್ಟ ಮತ್ತು ಶಾಶ್ವತ ವಿಕಲಚೇತನರಾದ ನೂತನ ಪಿಂಚಣಿ ಯೋಜನೆ (ಎನ್.ಪಿ.ಎಸ್.)ಗೆ ಒಳಪಡುವ ರಾಜ್ಯ ಸರ್ಕಾರ ನೌಕರರ ಸಂಖ್ಯೆ ಎಷ್ಟು; ಸದರಿ ಸರ್ಕಾರಿ ನೌಕರರಿಗೆ ಇದುವರೆಗೆ ಯಾವ ರೀತಿಯ ಮರಣ ಉಪದಾನ ಮತ್ತು ಪಿಂಚಣಿಗಳನ್ನು ವಿತರಿಸಲಾಗಿದೆ; (ಪರಿಹಾರ ಒದಗಿಸಿದ ಮತ್ತು ಬಾಕಿಯಿರುವ ಪ್ರಕರಣಗಳ ಸಂಖ್ಯೆ ಎಷ್ಟು)

(ಇ) ನೂತನ ಪಿಂಚಣಿ ಯೋಜನೆ (ಎನ್.ಪಿ.ಎಸ್.)ಗೆ ಒಳಪಡುವ ರಾಜ್ಯ ಸರ್ಕಾರಿ ನೌಕರರು ಎನ್.ಪಿ.ಎಸ್. ರದ್ದುಪಡಿಸಿ ಹಳೆ ಪಿಂಚಣಿ ವ್ಯವಸ್ಥೆಯನ್ನೇ ಮುಂದುವರಿಸುವಂತೆ ಪ್ರತಿಭಟನೆ ಮೂಲಕ ಮನವಿ ಸಲ್ಲಿಸುತ್ತಿದ್ದು ಈ ಸಂಬಂಧ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ;

(ಈ) ಎನ್.ಪಿ.ಎಸ್. ರದ್ದುಪಡಿಸಿ ಹಳೆ ಪಿಂಚಣಿ ವ್ಯವಸ್ಥೆಯನ್ನೇ ಮುಂದುವರಿಸಿ ನೌಕರರ ಹಿತ ಕಾಪಾಡಲು ಮತ್ತು ಈ ಸಂಬಂಧದ ಸರ್ಕಾರಿ ನೌಕರರ ಗೊಂದಲ ನಿವಾರಿಸುವ ಬಗ್ಗೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು?

## ಹೈದ್ರಾಬಾದ್–ಕರ್ನಾಟಕ ಭಾಗದ ಆಯವ್ಯಯದ ವಿವಿಧ ಯೋಜನೆಗಳ ಅನುದಾನದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೪೧೧೮ (೪೭೬೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್–ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಹಾಗೂ ಹರಪನಹಳ್ಳಿ ತಾಲ್ಲೂಕಿನಲ್ಲಿ ಆಯವ್ಯಯದ ವಿವಿಧ ಯೋಜನೆಯಡಿ ಕಳೆದ ೩ ವರ್ಷಗಳಿಂದ ಒದಗಿಸಲಾದ ಅನುದಾನವೆಷ್ಟು; ಹಾಗೂ ಬಿಡುಗಡೆಯಾದ ಮತ್ತು ಖರ್ಚಾಗಿರುವ ಅನುದಾನವೆಷ್ಟು ; (ವಾರ್ಷಿಕವಾರು ಹಾಗೂ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಜಿಲ್ಲೆಗಳಲ್ಲಿ ಆಯವ್ಯಯದ ಇತರೆ ಯೋಜನೇಯತರಡಿಯಲ್ಲಿ ಕಳೆದ ೩ ವರ್ಷಗಳಿಂದ ಒದಗಿಸಲಾಗಿರುವ ಅನುದಾನ, ಬಿಡುಗಡೆಯಾದ ಮತ್ತು ಖರ್ಚಾಗಿರುವ ಮೊತ್ತವೆಷ್ಟು? (ವಾರ್ಷಿಕವಾರು ಹಾಗೂ ಜಿಲ್ಲಾವಾರು ಮಾಹಿತಿ ನೀಡುವುದು)

## ಶಾಲಾ– ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೪೧೧೯ (೪೭೫೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರ ಅಧಿಕಾರಕ್ಕೆ ಬಂದ ನಂತರ ಶಾಲಾ–ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಕುರಿತು ಸಂಪುಟ ಉಪ ಸಮಿತಿ ರಚಿಸಲಾಗಿದೆಯೇ; (ಕಾರ್ಮಿಕ, ಸಮಾಜ ಕಲ್ಯಾಣ, ಸಾರ್ವಜನಿಕ ಶಿಕ್ಷಣ ಇಲಾಖೆ, ಉನ್ನತ ಶಿಕ್ಷಣ ಇಲಾಖೆಯನ್ನು ಒಳಗೊಂಡಂತೆ) ಸಮಿತಿಯ ಸಂಪೂರ್ಣ ವಿವರ ನೀಡುವುದು;

(ಆ) ಈ ಉಪ ಸಮಿತಿ ಎಷ್ಟು ಬಾರಿ ಸಭೆ ಸೇರಿ ಏನೇನು ಕ್ರಮ ಕೈಗೊಂಡಿದೆ; ಕೋರಿರುವ ಮಾಹಿತಿಯ ವಿವರ ನೀಡುವುದು;

(ಇ) ಈ ಸಮಿತಿಯು ಕೈಗೊಂಡಿರುವ ನಿರ್ಣಯಗಳೇನು;

(ಈ) ಶಿಕ್ಷಣ ಸಂಸ್ಥೆಗಳನ್ನು ಅನುದಾನಕ್ಕೆ ಒಳಪಡಿಸುವ ಕುರಿತು ಸರ್ಕಾರದ ನೀಲುವೇನು?

## ರಾಜ್ಯ ಸರ್ಕಾರಿ ನೌಕರರ ಬಡ್ತಿ ಮೀಸಲಾತಿ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೪೧೧೦ (೪೭೫೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರಿ ನೌಕರರಲ್ಲಿರುವ ಪರಿಶಿಷ್ಟರ ಬಡ್ತಿ ಮೀಸಲು ಕುರಿತಂತೆ ಬಿ.ಕೆ. ಪವಿತ್ರ ರವರು ಸರ್ವೋಚ್ಚ ನ್ಯಾಯಾಲಯದ ಮೊರೆ ಹೋಗಿದ್ದು ನಿಜವೇ; (ವಿವರ ನೀಡುವುದು)

(ಆ) ಈ ಸಂಬಂಧ ಸುಪ್ರೀಂ ಕೋರ್ಟ್ ತೀರ್ಪು ನೀಡಿದೆಯೇ; ನೀಡಿದ್ದಲ್ಲಿ ತೀರ್ಪಿನಲ್ಲಿರುವ ಪ್ರಮುಖ ಅಂಶಗಳು ಯಾವುವು; (ಪ್ರತಿ ಆದೇಶಗಳನ್ನು ಒದಗಿಸುವುದು)

(ಇ) ನ್ಯಾಯಾಲಯದ ಆದೇಶವನ್ನು ಪ್ರಶ್ನಿಸಿ ಎಸ್.ಎಲ್.ಪಿ.ಯನ್ನು ಸಲ್ಲಿಸಲು ಕಾರಣವೇನು;

(ಈ) ಸರ್ವೋಚ್ಚ ನ್ಯಾಯಾಲಯವು ನೀಡಿದ್ದ ಆದೇಶವನ್ನು ಪ್ರಶ್ನಿಸಿ, ರಾಜ್ಯ ಸರ್ಕಾರವು ಸಲ್ಲಿಸಿದ್ದ ಎಸ್.ಎಲ್.ಪಿ.ಯನ್ನು ನ್ಯಾಯಾಲಯವು ವಜಾಗೊಳಿಸಿರುವುದು ನಿಜವೇ; ನಿಜವಾಗಿದ್ದಲ್ಲಿ ವಿವರ ನೀಡುವುದು;

(ಉ) ಪ್ರಸ್ತುತ ಈ ಸಂಬಂಧ ಸರ್ಕಾರದ ನಿಲುವೇನು; ಮುಂದೆ ಈ ಕುರಿತು ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿರುವ ವಾಣಿಜ್ಯ ಮಳಿಗೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೧೧ (೪೬೬೯) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಇರುವ ವಾಣಿಜ್ಯ ಸಂಕೀರ್ಣಗಳು ಎಷ್ಟು; (ಪೂರ್ಣ ವಿವರ ನೀಡುವುದು)

(ಆ) ಸದರಿ ಮಳಿಗೆಗಳನ್ನು ಎಷ್ಟು ವರ್ಷಗಳ ಅವಧಿಗೆ ಭೋಗ್ಯದ ಆಧರದ ಮೇಲೆ ನೀಡಲಾಗಿದೆ;(ಪೂರ್ಣ ವಿವರ ನೀಡುವುದು)

(ಇ) ಸದರಿ ಸಂಕೀರ್ಣಗಳಿಂದ ಬರುವ ವಾರ್ಷಿಕ ಆದಾಯ ಎಷ್ಟು; ಸದರಿ ಆದಾಯವನ್ನು ಎಷ್ಟೆಷ್ಟು, ಯಾವ ಯಾವ ಖಾತೆಗಳಿಗೆ ಜಮಾ ಮಾಡಲಾಗಿದೆ;

ಈ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ದೈನಂದಿನ ಆಡಳಿತ ವ್ಯವಹಾರಗಳಿಗೆ ಎಷ್ಟು ಖಾತೆಗಳನ್ನು ತೆರೆಯಲಾಗಿದೆ; (ಪೂರ್ಣ ವಿವರ ನೀಡುವುದು)

ಉ) ಸದರಿ ಖಾತೆಗಳಲ್ಲಿ ಎಷ್ಟು ಹಣ ಜಮಾ ಮಾಡಲಾಗಿದೆ? (ವಿವರ ನೀಡುವುದು)

## ವಿವಿಧ ಇಲಾಖೆಗಳು ಬ್ಯಾಂಕ್‌ಗಳಿಂದ ಪಡೆದ ಸಾಲದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೧೨ (೪೬೭೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ನಾಲ್ಕು ವರ್ಷಗಳಲ್ಲಿ ಯಾವ ಯಾವ ಇಲಾಖೆಗಳು ವಿವಿಧ ಬ್ಯಾಂಕ್‌ಗಳಿಂದ ಸಾಲ ಪಡೆದಿವೆ; ಪಡೆದಿದ್ದಲ್ಲಿ, ಇದರ ಬಡ್ಡಿದರ ಎಷ್ಟು; (ಪೂರ್ಣ ವಿವರ ನೀಡುವುದು)

(ಆ) ಸಾಲ ಪಡೆದ ಹಣವನ್ನು ಸದರಿ ಇಲಾಖೆಗಳಿಂದ ಯಾವ ಯಾವ ಕಾಮಗಾರಿಗಳಿಗೆ ಬಳಸಲಾಗುತ್ತಿದೆ;

(ಇ) ಸದರಿ ಸಾಲವನ್ನು ಯಾವಾಗ ಮತ್ತು ಹೇಗೆ ಮರುಪಾವತಿ ಮಾಡಲಾಗುವುದು?

## ರಾಜ್ಯದಲ್ಲಿ ನಡೆದ ಕೋಮು ಗಲಭೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೧೩ (೪೬೭೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ನಾಲ್ಕು ವರ್ಷಗಳಲ್ಲಿ ನಡೆದ ಕೋಮು ಗಲಭೆಗಳೆಷ್ಟು;

(ಆ) ಸದರಿ ಕೋಮು ಗಲಭೆಗಳಲ್ಲಿ ಮೃತರ ಸಂಖ್ಯೆ ಎಷ್ಟು; (ಪೂರ್ಣ ವಿವರ ನೀಡುವುದು)

(ಇ) ಸದರಿ ಗಲಭೆಗಳಲ್ಲಿ ಮೃತಪಟ್ಟ ಎಷ್ಟು ಕುಟುಂಬಗಳಿಗೆ ಪರಿಹಾರ ನೀಡಲಾಗಿದೆ? (ಪೂರ್ಣ ವಿವರ ನೀಡುವುದು)

## ವಾರ್ತಾ ಭವನಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೧೪ (೪೬೭೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇರುವ ವಾರ್ತಾ ಭವನಗಳ ಸಂಖ್ಯೆ ಎಷ್ಟು; ಅವುಗಳ ನಿರ್ವಹಣೆ ಜವಾಬ್ದಾರಿ ಯಾರ ಮೇಲಿದೆ; (ವಿವರ ನೀಡುವುದು)

(ಆ) ಸದರಿ ವಾರ್ತಾ ಭವನಗಳಿಗೆ ಕಳೆದ ನಾಲ್ಕು ವರ್ಷಗಳಿಂದ ದುರಸ್ಥಿ ಕಾಮಗಾರಿಗೆ ಆಗಿರುವ ಖರ್ಚು ಎಷ್ಟು; (ವಿವರ ನೀಡುವುದು)

(ಇ) ಕಳೆದ ೪ ವರ್ಷಗಳಲ್ಲಿ ಇಲಾಖೆಯ ವತಿಯಿಂದ ನಡೆಸಲಾದ ಕಾರ್ಯಕ್ರಮಗಳ ತಾಲ್ಲೂಕುವಾರು ವಿವರ ನೀಡುವುದು?

## ಕರ್ನಾಟಕ ನಗರ ನೀರು ಸರಬರಾಜು ಇಲಾಖೆಯಡಿಯಲ್ಲಿ ಕಾಮಗಾರಿಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೧೫ (೪೬೭೩) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕರ್ನಾಟಕ ನಗರ ನೀರು ಸರಬರಾಜು ಇಲಾಖೆಯ ವತಿಯಿಂದ ಕಳೆದ ನಾಲ್ಕು ವರ್ಷಗಳಿಂದ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ; (ಜಿಲ್ಲಾವಾರು ಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಕಾಮಗಾರಿಗಳಿಗೆ ಬಿಡುಗಡೆ ಮಾಡಲಾದ ಹಣ ಎಷ್ಟು;

(ಇ) ಸದರಿ ಕಾಮಗಾರಿಗಳಲ್ಲಿ ಪೂರ್ಣಗೊಂಡ ಕಾಮಗಾರಿಗಳು ಎಷ್ಟು; ಬಾಕಿ ಇರುವ ಕಾಮಗಾರಿಗಳು ಎಷ್ಟು? (ಜಿಲ್ಲಾವಾರು ವಿವರ ನೀಡುವುದು)

## ವಿಜಯಪುರ ನಗರದ ಮಟನ್ ಮಳಿಗೆಗಳ ಸ್ಥಳಾಂತರದ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೧೬ (೪೬೨೭) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ನಗರದಲ್ಲಿ ಕಾಯಿಪಲ್ಲೆ ಮಾರುಕಟ್ಟೆ ಸಹಿತ ಬೇಕಾಬಿಟ್ಟಿಯಾಗಿ ಅನೇಕ ಕಡೆ ಮಟನ್ ಮಳಿಗೆಗಳು ತಲೆಯೆತ್ತಿರುವುದರಿಂದ ಸಾರ್ವಜನಿಕರಿಗೆ ತೀವ್ರ ಸಮಸ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಮಟನ್ ಮಳಿಗೆಗಳಿಗೆ ಅನುಮತಿ ನೀಡಲು ಸರ್ಕಾರದ ಮಾನದಂಡಗಳೇನು; ಇವುಗಳನ್ನು ಸ್ಥಾಪಿಸಲು ಅನುಮತಿ ಕೊಡುವ ಅಧಿಕಾರ ಯಾವ ಇಲಾಖೆಯ ಯಾವ ಅಧಿಕಾರಿಯ ವ್ಯಾಪ್ತಿಗೆ ಬರುತ್ತದೆ; (ವಿವರ ನೀಡುವುದು)

(ಇ) ಈಗಾಗಲೇ ವಿಜಯಪುರ ಮಹಾ ನಗರದಲ್ಲಿ ಪಾಲಿಕೆ ವತಿಯಿಂದ ದೊಡ್ಡ ಮಟನ್ ಮಾರ್ಕೆಟ್ ತೆರೆದಿದ್ದು ಇಂತಹ ಸಣ್ಣ ಪುಟ್ಟ ಮಟನ್ ಮಳಿಗೆಗಳನ್ನು ಈ ಮಾರ್ಕೆಟಿಗೆ ಸ್ಥಳಾಂತರಗೊಳಿಸಲು ವಿಳಂಬವಾಗುತ್ತಿರುವುದಕ್ಕೆ ಕಾರಣವೇನು; ಯಾವ ಕಾಲಮಿತಿಯೊಳಗೆ ಸ್ಥಳಾಂತರಗೊಳಿಸಲಾಗುವುದು? (ವಿವರವಾದ ಮಾಹಿತಿ ನೀಡುವುದು)

## ಆಡಳಿತ ಇಲಾಖೆಗಳು

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೪೧೧೭ (೪೭೬೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದಲ್ಲಿ ಇರುವ ಆಡಳಿತ ಇಲಾಖೆಗಳು ಎಷ್ಟು; ಯಾವುವು; (ವಿವರವಾದ ಮಾಹಿತಿ ನೀಡುವುದು)

(ಆ) ಈ ಆಡಳಿತ ಇಲಾಖೆಗಳ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಇಲಾಖೆಗಳು, ಸಾರ್ವಜನಿಕ ನಿಗಮಗಳು, ಮಂಡಳಿಗಳು, ಸಾರ್ವಜನಿಕ ಉದ್ಯಮಗಳು, ಪ್ರಾಧಿಕಾರಿಗಳು, ಸೊಸೈಟಿಗಳು, ಅಧೀನ ಸಂಸ್ಥೆಗಳು ಯಾವುವು; ಎಷ್ಟಿವೆ; ಯಾವ ವಿಳಾಸದಲ್ಲಿ ಕೆಲಸ ನಿರ್ವಹಿಸುತ್ತಿವೆ; ಆಡಳಿತ ಇಲಾಖಾವಾರು ಸಂಪೂರ್ಣ ವಿವರವಾದ ಮಾಹಿತಿ ನೀಡುವುದು;

(ಇ) ಆಡಳಿತ ಇಲಾಖೆಗಳು ಅಧೀನ ಇಲಾಖೆ/ನಿಗಮಗಳ ಸಂಬಂಧ ಯಾವ ಯಾವ ಅಧಿಕಾರಗಳನ್ನು ಹೊಂದಿವೆ;

(ಈ) ಆಡಳಿತ ಇಲಾಖೆಗಳು ಸಾರ್ವಜನಿಕ ನಿಗಮಗಳ ಸಂಬಂಧ ಹೊಂದಿರುವ ಹಣಕಾಸಿನ ಅಧಿಕಾರಗಳು ಯಾವುವು? (ವಿವರ ನೀಡುವುದು)

## ಕಳಸಾ–ಬಂಡೂರಿ ಹೋರಾಟದ ರೈತರ ವಿರುದ್ಧ ಹಾಕಿದ ಮೊಕದ್ದಮೆಗಳ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೪೧೧೮ (೪೬೬೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಾದಾಯಿ ಕಳಸಾ ಬಂಡೂರಿ ಯೋಜನೆಗಾಗಿ ನವಲಗುಂದದಲ್ಲಿ ಹೋರಾಟ ಮಾಡುವ ಸಂದರ್ಭದಲ್ಲಿ ನವಲಗುಂದ, ಇಬ್ರಾಹಿಂಪುರ, ಯಮನೂರು, ಅಳಗವಾಡಿ ಮುಂತಾದ ಕಡೆ ನಡೆದ ಹೋರಾಟದಲ್ಲಿ ಲಾಠಿ ಚಾರ್ಜ್ ಮಾಡಿದ್ದು ನಿಜವೇ; ನಿಜವಿದ್ದಲ್ಲಿ ಕಾರಣಗಳೇನು;

(ಆ) ಇದರಲ್ಲಿ ಎಷ್ಟು ಜನ ರೈತರನ್ನು ವಿನಾಕಾರಣ ಬಂಧಿಸಿ ಜೈಲಿಗೆ ಕಳುಹಿಸಲಾಗಿತ್ತು; ಹಾಗಿದ್ದಲ್ಲಿ, ರೈತರ ಮೇಲೆ ಯಾವ ಕಲಂಗಳನ್ವಯ ಮೊಕದ್ದಮೆ ಹಾಕಲಾಗಿದೆ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಲಾಠಿ ಚಾರ್ಜ್ ಮಾಡಲು ಆದೇಶ ಮಾಡಿದವರು ಯಾರು; ಅವರು ಯಾವ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ; ಯಾವ ಕಾನೂನು ಪ್ರಕಾರ ಲಾಠಿ ಚಾರ್ಜ್‌ಗೆ ಆದೇಶ ಮಾಡಲಾಗಿದೆ;

(ಈ) ಸದರಿ ವಿಷಯದಲ್ಲಿ ಸರ್ಕಾರ ವಿಚಾರಣೆ ಮಾಡಲು ಯಾರ ನೇತೃತ್ವದಲ್ಲಿ ಎಷ್ಟು ಸಮಿತಿಗಳನ್ನು ಮಾಡಲಾಗಿದೆ; ಅದರ ನೇತೃತ್ವ ವಹಿಸಿದ ಅಧಿಕಾರಿಗಳು ಮತ್ತು ಇನ್ನಿತರರು ಯಾರು;

(ಉ) ವರದಿಯ ಮುಖ್ಯಾಂಶಗಳೇನು; ಕಾನೂನು ಬಾಹಿರವಾಗಿ ಲಾಠಿ ಚಾರ್ಜ್ ಮಾಡಲು ಆದೇಶಿಸಿದ ಅಧಿಕಾರಿಯ ಮೇಲೆ ಸರ್ಕಾರ ಏನು ಕ್ರಮಕೈಗೊಂಡಿದೆ?

## ಹುಬ್ಬಳ್ಳಿಯ ಇಂದಿರಾ ಗ್ಲಾಸ್‌ಹೌಸ್ ಅವ್ಯವಸ್ಥೆಯ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೪೧೧೯ (೪೬೬೧) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು  ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹುಬ್ಬಳ್ಳಿ ಇಂದಿರಾ ಗಾಜಿನ ಮನೆಯಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ನಿಜವೇ; ಇದ್ದಲ್ಲಿ, ಅವುಗಳನ್ನು ಪರಿಹರಿಸಲು ಇಲಾಖೆಯು ತೆಗೆದುಕೊಂಡಿರುವ ಕ್ರಮಗಳೇನು;

(ಆ) ಸದರಿ ಇಂದಿರಾ ಗಾಜಿನ ಮನೆಯಲ್ಲಿ ಅಕ್ರಮ ಚಟುವಟಿಕೆಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರಿಂದಾಗಿ ಮಕ್ಕಳು ಮಹಿಳೆಯರು ಇಲ್ಲಿಗೆ ಭೇಟಿ ನೀಡಲು ಅಂಜುವ ಸ್ಥಿತಿ ನಿರ್ಮಾಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಇಂದಿರಾ ಗಾಜಿನ ಮನೆಯ ನವೀಕರಣ ಕಾರ್ಯವನ್ನು ಯಾವಾಗ ಕೈಗೊಳ್ಳಲಾಗಿತ್ತು; ಗುತ್ತಿಗೆದಾರರ ಹೆಸರು, ಖರ್ಚಾದ ಹಣವೆಷ್ಟು; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಇಂದಿರಾ ಗಾಜಿನ ಮನೆಯಲ್ಲಿರುವ ಪುಟಾಣಿ ರೈಲಿನ ಓಡಾಟ ನಿಲ್ಲಿಸಿ ಎರಡು ವರ್ಷ ಕಳೆದಿದ್ದು, ಮತ್ಸ್ಯಕೊಳ ಪಾಳು ಬಿದ್ದಿದ್ದು, ಕಾರಂಜಿಯಲ್ಲಿ ನೀರು ಚಿಮ್ಮದೇ ಹಾಳು ಬಿದ್ದಿದ್ದು, ಪ್ರತಿಕೃತಿಗಳ ಅಂಗಾಂಗಳು ಹಾಳಾಗಿದ್ದು ಮತ್ತು ವಿರೂಪಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಬಿ.ಎಂ.ಆರ್.ಸಿ.ಎಲ್. ನೌಕರರು

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೪೧೨೦ (೪೭೨೭) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮೆಟ್ರೋ ರೈಲು ನಿಗಮ (BMRCL)ದಲ್ಲಿ ಹಾಲಿ ಕೆಲಸ ನಿರ್ವಸುತ್ತಿರುವ ಖಾಯಂ ಉದ್ಯೋಗಿಗಳು ಎಷ್ಟು; ಉದ್ಯೋಗಿ ಹೆಸರು, ಹುದ್ದೆ, ವೃಂದವಾರು ಜೇಷ್ಠತಾ ಪಟ್ಟಿಯೊಡನೆ ವಿವರವಾದ ಮಾಹಿತಿ ನೀಡುವುದು;

(ಆ) ಸದರಿ ನೌಕರರ ಮುಂಬಡ್ತಿ ಆಂತರಿಕ ಸ್ಪರ್ಧಾತ್ಮಕ ಪರೀಕ್ಷೆ ಇಟ್ಟಿರುವುದು ಕೆ.ಸಿ.ಎಸ್.ಆರ್. ನಿಯಮಗಳಿಗೆ ಸರಿಹೊಂದುತ್ತದೆಯೇ; ವಿವರವಾದ ಮಾಹಿತಿ ಕೊಡುವುದು;

(ಇ) BMRCL ಸಂಸ್ಥೆಯು ನೇಮಕಾತಿಗೆ ಕರ್ನಾಟಕ ಸರ್ಕಾರದ ಮೀಸಲಾತಿ ನಿಯಮಗಳನ್ನು ಮಾತ್ರ ಪಾಲಿಸಿ ಮುಂಬಡ್ತಿಗೆ ನಿಯಮಗಳನ್ನು ಪಾಲಿಸದಿರಲು ಕಾರಣಗಳೇನು;

(ಈ) ಸರ್ಕಾರ ಹಾಗೂ ಸರ್ಕಾರದ ಇತರೆ ನಿಗಮಗಳು ಮುಂಬಡ್ತಿಗೆ ಜೇಷ್ಠತೆಯನ್ನು ಪಾಲಿಸುವಾಗ ಬಿ.ಎಂ.ಆರ್.ಸಿ.ಎಲ್. ಸಂಸ್ಥೆಯವರು ಪರೀಕ್ಷೆ ಇಟ್ಟು pick and choose ಮಾರ್ಗ ಅನುಸರಿಸುತ್ತಿರುವುದು ಎಷ್ಟರ ಮಟ್ಟಿಗೆ ಸರಿ;

(ಉ) ಈ ತಾರತಮ್ಯವನ್ನು ಸರ್ಕಾರ ಯಾವ ಕಾಲಮಿತಿಯೊಳಗೆ ಬಗೆಹರಿಸುವುದು?

## ಫಾರಂ ಹೌಸ್ (Farm House) ಕಟ್ಟಲು ಅನುಮತಿ ನೀಡುವ ವಿಚಾರ.

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) –**

೪೧೨೧ (೪೬೮೪) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಫಾರಂ ಹೌಸ್ (Farm House) ಕಟ್ಟಲು ವಿನ್ಯಾಸ ಮಂಜೂರಾತಿ ಹಾಗೂ ಅನುಮತಿ ಪಡೆಯಲು ಇರುವ ನಿಯಮಗಳೇನು; (ವಿವರ ಒದಗಿಸುವುದು)

(ಆ) ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹಾಗೂ ಗ್ರಾಮ ಪಂಚಾಯತಿಗಳಲ್ಲಿ ಅನುಮತಿಗೆ ಅವಕಾಶವಿದೆಯೇ; ಹಾಗಿದ್ದಲ್ಲಿ, ಯಾವ ನಿಯಮಗಳಲ್ಲಿ ಅವಕಾಶ ಕಲ್ಪಿಸಲಾಗಿದೆ; (ವಿವರ ನೀಡುವುದು)

(ಇ) ಫಾರಂ ಹೌಸ್ (Farm House) ಕಟ್ಟಿದ ನಂತರ ಅಗತ್ಯ ಮೂಲಭೌತ ಸೌಲಭ್ಯ ಕಲ್ಪಿಸಿಕೊಳ್ಳಲು ನಿರಾಕ್ಷೇಪಣಾ ಪತ್ರ / ಅನುಮತಿಯನ್ನು ಯಾವ ಪ್ರಾಧಿಕಾರದಿಂದ ಪಡೆಯಬೇಕಾಗಿದೆ? (ವಿವರ ಒದಗಿಸುವುದು)

## ನಿಗದಿತ ಕಾಲಾವಧಿಯೊಳಗೆ ಕಡತಗಳ ವಿಲೇವಾರಿ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೪೧೨೨ (೪೭೨೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ವಿವಿಧ ಇಲಾಖೆಗಳಿಂದ ಆರ್ಥಿಕ ಇಲಾಖೆಗೆ ಬಂದಿರುವ ಕಡತಗಳನ್ನು ನಿಗದಿತ ಕಾಲಾವಧಿಯೊಳಗೆ ವಿಲೇವಾರಿ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

## ಗುಪ್ತದಳವನ್ನು ಬಲಿಷ್ಠಗೊಳಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೪೧೨೩ (೪೭೨೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ರಾಜ್ಯದಲ್ಲಿ ನಡೆಯುತ್ತಿರುವ ಕಾನೂನು ಬಾಹಿರ ವಿವಿಧ ಚಟುವಟಿಕೆಗಳ ಮಾಹಿತಿ ನೀಡಲು ಗುಪ್ತದಳ ಉತ್ತಮವಾಗಿ ಕಾರ್ಯ ನಿರ್ವಹಿಸುವಂತಾಗಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

## ಜಿಲ್ಲಾ ಮಟ್ಟದ ಪತ್ರಿಕಾ ವರದಿಗಾರರ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೪೧೨೪ (೪೭೩೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಜಿಲ್ಲಾ ಮಟ್ಟದ ಪತ್ರಿಕಾ ವರದಿಗಾರರಿಗೆ ಗ್ರಾಮಾಂತರ ಪ್ರದೇಶಗಳಲ್ಲಿ ಸಂಚಾರ ಮಾಡಲು ಉಚಿತ ಬಸ್‌ಪಾಸ್ ನೀಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

## ನೂತನವಾಗಿ ಪೊಲೀಸ್ ಠಾಣೆಗಳು ಪ್ರಾರಂಭಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೪೧೨೫ (೪೭೩೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ನೂತನವಾಗಿ ಪೊಲೀಸ್ ಠಾಣೆಗಳನ್ನು ಪ್ರಾರಂಭಿಸಲು ಪ್ರಸ್ತಾವನೆಗಳು ಸರ್ಕಾರಕ್ಕೆ ಬಂದಿದೆಯೆ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ಮಾನ್ವಿ ತಾಲ್ಲೂಕಿನಲ್ಲಿ ಗ್ರಾಮಾಂತರ ಪೊಲೀಸ್ ಠಾಣೆ ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ರಾಯಚೂರು, ಮಾನ್ವಿ ಯೋಜನಾ ಪ್ರಾಧಿಕಾರಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೪೧೨೬ (೪೭೩೨) ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ೨೦೧೩–೧೪ರಿಂದ ಇಲ್ಲಿಯವರೆಗೆ ಎಷ್ಟು ಬಡಾವಣೆಗಳನ್ನು (Layout) ಅಭಿವೃದ್ಧಿ ಮಾಡಲಾಗಿದೆ; ಇದರ ಒಟ್ಟು ವಿಸ್ತೀರ್ಣ ಎಷ್ಟು; ಇದರಿಂದ ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಬಂದಿರುವ ಆದಾಯ ಎಷ್ಟು;

(ಆ) ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಗರದಲ್ಲಿ ಮೂಲಭೂತ ಸೌಲಭ್ಯಗಳನ್ನು ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

(ಇ) 'ಅಮೃತ ಯೋಜನೆ' ಅಡಿಯಲ್ಲಿ ರಾಯಚೂರು ನಗರದಲ್ಲಿ ತೆಗೆದುಕೊಂಡ ಕಾಮಗಾರಿಗಳೇನು; ಈ ಕಾಮಗಾರಿಗೆ ಮುಂಜೂರಾತಿಗಿರುವ ಅನುದಾನ ಎಷ್ಟು; ಈ ಕಾಮಗಾರಿಯನ್ನು ಕಾಲಮಿತಿ ಅವಧಿಯಲ್ಲಿ ಕಾರ್ಯರೂಪಕ್ಕೆ ತರಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ಮಾನ್ವಿ ತಾಲ್ಲೂಕಿನ ಯೋಜನಾ ಪ್ರಾಧಿಕಾರದಿಂದ ೨೦೧೩–೧೪ರಿಂದ ಇಲ್ಲಿಯವರೆಗೆ ತೆಗೆದುಕೊಂಡ ಬಡಾವಣೆಗಳು ಎಷ್ಟು; ಇದರ ಒಟ್ಟು ವಿಸ್ತೀರ್ಣ ಎಷ್ಟು; ಇದರಿಂದ ಮಾನ್ವಿ ಯೋಜನಾ ಪ್ರಾಧಿಕಾರಕ್ಕೆ ಬಂದಿರುವ ಆದಾಯ ಎಷ್ಟು?

## ಎನ್.ಆರ್.ಐ ಫೋರಂ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೪೧೨೭ (೪೭೬೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) N.R.I ಫೋರಂನ್ನು ಯಾವಾಗ ಸ್ಥಾಪಿಸಲಾಯಿತು; ಇದಕ್ಕೆ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ಯಾರು; ಇದರ ಧ್ಯೇಯೋದ್ದೇಶಗಳು ಮತ್ತು ನಿಯಮ ನಿಬಂಧನೆಗಳು ಏನು; ( ವಿವರವಾದ ಮಾಹಿತಿ ನೀಡುವುದು)

(ಆ) ಈ ಫೋರಂ ಇಲ್ಲಿಯವರೆಗೆ ಯಾವ ಯಾವ ಕಾರ್ಯಕ್ರಮ ಹಮ್ಮಿಕೊಂಡಿದೆ; ಇವುಗಳಿಗೆ ಖರ್ಚು ಮಾಡಿರುವ ಹಣವೆಷ್ಟು; ವಿವರವಾದ ಮಾಹಿತಿ ನೀಡುವುದು;

(ಇ) ಕಳೆದ ೫ ವರ್ಷಗಳಿಂದ ಈ ಫೋರಂಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; ಬಿಡುಗಡೆಯಾದ ಹಣವನ್ನು ಯಾವ ಯಾವ ಕಾರ್ಯಕ್ರಮ/ಕಾಮಗಾರಿಗಳಿಗೆ ಬಳಸಲಾಗಿದೆ; (ವಿವರವಾದ ಮಾಹಿತಿ ನೀಡುವುದು)

(ಈ) ಕರ್ನಾಟಕದ ಎಷ್ಟು ಜನರು ಹೊರ ದೇಶಗಳಲ್ಲಿ ವಾಸವಾಗಿದ್ದಾರೆ; (ದೇಶವಾರು ಮತ್ತು ಸಂಖ್ಯೆವಾರು ಮಾಹಿತಿ ನೀಡುವುದು)

## ಬಿ.ಡಿ.ಎ ನಿವೇಶನಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೪೧೨೮ (೪೭೨೪) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (B.D.A)ದ ನಿವೇಶನ/ಮನೆ ಹಂಚಿಕೆ ನಿಯಮಗಳು ಏನಿವೆ; ವಿವರವಾಗಿ ಹೊಸ ಮತ್ತು ಹಳೆ ಬಡಾವಣೆಗಳಲ್ಲಿ ಎಷ್ಟು ಶೇಕಡಾವಾರು, ಯಾವ ಯಾವ ಕೆಟಗರಿಗಳಿಗೆ ಕಾಯ್ದಿರಿಸಬೇಕಾಗಿರುತ್ತದೆ; (ವಿವರವಾದ ಮಾಹಿತಿ ಒದಗಿಸುವುದು)

(ಆ) 'ಜಿ' ಕೆಟಗರಿ ನಿವೇಶನ ಅಂದರೇನು; ಹಾಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ (B.D.A)ದಲ್ಲಿ ಲಭ್ಯವಿರುವ 'ಜಿ' ಕೆಟಗರಿ ನಿವೇಶನ ಎಷ್ಟು; ಬಡಾವಣೆವಾರು ವಿವರವಾದ ಮಾಹಿತಿ ಕೊಡುವುದು;

(ಇ) 'ಜಿ' ಕೆಟಗರಿ ನಿವೇಶನಗಳನ್ನು ಹಂಚಿಕೆ ಮಾಡುವ ಅಧಿಕಾರ ಯಾರಿಗಿದೆ; ಈ ನಿವೇಶನಗಳನ್ನು ಯಾರು ಯಾರಿಗೆ ಮಂಜೂರು ಮಾಡಬಹುದಾಗಿರುತ್ತದೆ;

(ಈ) ಇಲ್ಲಿಯವರೆಗೆ 'ಜಿ' ಕೆಟಗರಿ ಕೋಟಾದಡಿ ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ; ಪಡೆದವರ ಹೆಸರು, ನಿವೇಶನ ಸಂಖ್ಯೆ ಮತ್ತು ವಿಸ್ತೀರ್ಣ, ಬಡಾವಣೆ ಹೆಸರು, ಹಂಚಿಕೆ ಮಾಡಿರುವ ವರ್ಷ ಒಳಗೊಂಡಂತೆ ವಿವರವಾದ ಮಾಹಿತಿ ಕೊಡುವುದು;

(ಉ) ಯಾವ ಕಾಲಮಿತಿಯೊಳಗೆ ನಿವೇಶನ ಹೊಂದಿರದ ಶಾಸಕರಿಗೆ 'ಜಿ' ಕೆಟಗರಿಯಲ್ಲಿ ನಿವೇಶನಗಳನ್ನು ನೀಡಲಾಗುವುದು?

## ಚಾಲೆಂಜ್ ಫಂಡ್

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೪೧೨೯ (೪೭೬೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಲೆಂಜ್ ಫಂಡ್ ಎಂದರೇನು; ಈ ಯೋಜನೆಯನ್ನು ಯಾವಾಗ ಜಾರಿಗೊಳಿಸಲಾಯಿತು; ಇದರ ರೂಪರೇಷೆಗಳೇನು;

(ಆ) ಕಳೆದ ೩ ವರ್ಷಗಳಿಂದ ಈ ಯೋಜನೆಗೆ ಎಷ್ಟು ಹಣವನ್ನು ಮೀಸಲಿಡಲಾಗಿದೆ; ಇದರಲ್ಲಿ ಎಷ್ಟು ವಿನಿಯೋಗಿಸಲಾಗಿದೆ;

(ಇ) ಕಳೆದ ೩ ವರ್ಷಗಳಲ್ಲಿ ಈ ಯೋಜನೆಯಡಿ ಎಷ್ಟು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ; ಇವುಗಳಿಗೆ ಬಿಡುಗಡೆಗೊಳಿಸಿದ ಮೊತ್ತ ಎಷ್ಟು; ಈ ಕಾರ್ಯಕ್ರಮಗಳನ್ನು ಯಾರ ಸಹಯೋಗದೊಂದಿಗೆ ಕಾರ್ಯಗತಗೊಳಿಸಲಾಗಿದೆ; ಪೂರ್ಣಗೊಂಡಿರುವವು ಎಷ್ಟು; ಹಾಲಿ ಚಾಲ್ತಿಯಲ್ಲಿರುವವು ಎಷ್ಟು; (ವರ್ಷಾವಾರು, ಕಾರ್ಯಕ್ರಮವಾರು ವಿವರ ನೀಡುವುದು)

(ಈ) ಈ ಯೋಜನೆಯಡಿ ಖಾಸಗಿ ವ್ಯಕ್ತಿಗಳು ಮತ್ತು ಸಂಘ ಸಂಸ್ಥೆಗಳು ಪ್ರಯೋಗಾತ್ಮಕ ಯೋಜನೆಗಳನ್ನು ಅನುಷ್ಠಾನಗೊಳಿಸುವ ಸಂಬಂಧ ಪ್ರಸ್ತಾವನೆಯನ್ನು ಸಲ್ಲಿಸಬಹುದೇ; ವಿವರವಾದ ಮಾಹಿತಿ ನೀಡುವುದು?

## ಬೆಂಗಳೂರು ಮೆಟ್ರೋ ರೈಲು ನಿಗಮದ O.R.M ಸಭೆ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೪೧೩೦ (೪೭೨೫) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮೆಟ್ರೋ ರೈಲು ನಿಗಮ(BMRCL) ದಲ್ಲಿ ಕೆಲಸ ನಿರ್ವಹಿಸುತ್ತಿರುವ ನೌಕರರು ಎಷ್ಟು ಪಾಳಿ (Shift)ಗಳಲ್ಲಿ ಕೆಲಸ ನಿರ್ವಹಿಸುತ್ತಿದ್ದಾರೆ; (ವಿವರವಾದ ಮಾಹಿತಿ ಕೊಡುವುದು)

(ಆ) O.R.M. ಸಭೆ ಅಂದರೇನು, ತಿಂಗಳಿಗೆ ಇಂತಹ ಎಷ್ಟು ಸಭೆಗಳನ್ನು ನಡೆಸಲಾಗುತ್ತಿದೆ; ಯಾವ ಪಾಳಿಯ ನೌಕರರು ಈ ಸಭೆಗೆ ಹಾಜರಾಗಬೇಕು;

(ಇ) ನೌಕರರ ಕರ್ತವ್ಯ ಅವಧಿ ಮುಗಿದ ಮೇಲೆ ಅವರನ್ನು O.R.M. ಸಭೆಗೆ ಹಾಜರಾಗಲು ಹೇಳುವುದು ಮತ್ತು ಅವರ ಮೇಲೆ ಕ್ರಮ ಕೈಗೊಳ್ಳುವುದು ಯಾವ ನಿಯಮಗಳಲ್ಲಿ ಇದೆ; (ವಿವರವಾದ ಮಾಹಿತಿ ಕೊಡುವುದು)

(ಈ) ಇಲ್ಲಿಯವರೆಗೂ ಎಷ್ಟು O.R.M. ಸಭೆಗಳು ನಡೆದಿವೆ; ಇದಕ್ಕೆ ಗೈರು ಹಾಜರಾದವರು ಎಷ್ಟು ಜನ; ಅದರಲ್ಲಿ ಎಷ್ಟು ಜನರಿಗೆ ಶೋಕಾಸ್ ನೋಟಿಸ್ ನೀಡಲಾಗಿದೆ; ಎಷ್ಟು ಜನರಿಗೆ ವಿನಾಯಿತಿ ನೀಡಲಾಗಿದೆ, ವಿನಾಯಿತಿಗೆ ಸಿಬ್ಬಂದಿ ನೀಡಿರುವ ದಾಖಲೆಗಳು ಏನು; (ವಿವರವಾಗಿ ಪ್ರತಿಯೊಂದು ಸಭೆಯ ಮಾಹಿತಿ ಕೊಡುವುದು)

(ಉ) ಶೋಕಾಸ್ ನೋಟಿಸ್ ನೀಡಿದ ಎಷ್ಟು ಜನರಿಗೆ ಯಾವ ಯಾವ ಶಿಕ್ಷೆ (Punishment) ನೀಡಲಾಗಿದೆ; ಎಷ್ಟು ಜನರಿಗೆ ಶಿಕ್ಷೆ ನೀಡಲಾಗಿರುವುದಿಲ್ಲ; ಇದಕ್ಕೆ ಕಾರಣಗಳೇನು; (ದಾಖಲೆ ಸಮೇತ ವಿವರವಾದ ಮಾಹಿತಿ ನೀಡುವುದು)

## ವಾಹನ ಸಂಚಾರಕ್ಕೆ ಅಡಚಣೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೩೧ (೪೬೮೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ರಸ್ತೆಗಳ ಎರಡೂ ಕಡೆಗಳಲ್ಲಿ ಬೀದಿ ಬದಿ ವ್ಯಾಪಾರಿಗಳು ಮತ್ತು ತಳ್ಳುಗಾಡಿಗಳು ನಿಲ್ಲಲು ಅವಕಾಶ ಮಾಡಿಕೊಟ್ಟಿರುವುದರಿಂದ ವಾಹನಗಳ ಸಂಚಾರಕ್ಕೆ ಅಡಚಣೆಯಾಗುತ್ತಿದ್ದು, ಸಂಚಾರಿ ಪೊಲೀಸರು ಕ್ರಮ ಕೈಗೊಳ್ಳದಿರಲು ಕಾರಣವೇನು;

(ಆ) ಪೊಲೀಸರು ಎಷ್ಟು ಕಡೆಗಳಲ್ಲಿ ಯಾವ ರೀತಿಯ ಕ್ರಮ ಕೈಗೊಂಡಿದ್ದಾರೆ ಎಂಬ ವಿವರವನ್ನು ನೀಡುವುದು;

(ಇ) ಅದೇ ರೀತಿ ಸಿಗ್ನಲ್ ಜಂಪ್ ಮಾಡುವ ಪ್ರಕರಣಗಳು ಸಾಮಾನ್ಯವಾಗಿದ್ದು, ಇದರ ಬಗ್ಗೆ ಕಠಿಣ ಕ್ರಮ ಕೈಗೊಳ್ಳದಿರಲು ಕಾರಣವೇನು; ಕಳೆದ ಎರಡು ವರ್ಷಗಳಲ್ಲಿ ಎಷ್ಟು ಜನರ ಮೇಲೆ ಕ್ರಮ ಕೈಗೊಳ್ಳಲಾಗಿದೆ ಎಷ್ಟು ದಂಡ ವಸೂಲು ಮಾಡಲಾಗಿದೆ?

## ಸ್ವಾತಂತ್ರ್ಯ ಹೋರಾಟಗಾರರ ಗೌರವಧನ ಮಂಜೂರು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೩೨ (೪೬೮೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಜನ ಸ್ವಾತಂತ್ರ್ಯ ಹೋರಾಟಗಾರರು ಗೌರವಧನ ಮಂಜೂರಾತಿಗಾಗಿ ಸರ್ಕಾರಕ್ಕೆ ಅರ್ಜಿ ಸಲ್ಲಿಸಿದ್ದಾರೆ; ಎಷ್ಟು ಜನರಿಗೆ ಮಂಜೂರಾಗಿದೆ; ಎಷ್ಟು ಬಾಕಿ ಇದೆ; (ಕಳೆದ ೨ ವರ್ಷಗಳ ಮಾಹಿತಿ ನೀಡುವುದು)

(ಆ) ದೇಶಕ್ಕಾಗಿ ನಿಸ್ವಾರ್ಥವಾಗಿ ಹೋರಾಡಿರುವ ಈ ಸ್ವಾತಂತ್ರ್ಯ ಹೋರಾಟಗಾರರಿಗೆ ಕೂಡಲೇ ಗೌರವಧನ ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗುವುದೇ;

(ಇ) ಅನೇಕರು ೭೦–೮೦ ವರ್ಷಕ್ಕಿಂತ ಹೆಚ್ಚು ವಯಸ್ಸಾಗಿರುವವರು ಇರುವುದರಿಂದ ಜೀವಿತಾವಧಿ ಕಡಿಮೆಯಿದ್ದು ಸಮರೋಪಾದಿಯಲ್ಲಿ ಕ್ರಮ ಕೈಗೊಂಡು ಅರ್ಜಿ ವಿಲೇವಾರಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ಒದಗಿಸುವುದು)

## ಮಹಾನಗರಗಳ ಕುಡಿಯುವ ನೀರಿನ ಸಮಸ್ಯೆ ನಿವಾರಣೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೩೩ (೪೬೮೨) ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಮಹಾನಗರಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣವಾಗುತ್ತಿರುವುದರಿಂದ ಇದನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಆ) ಮಹಾನಗರ ಮತ್ತು ನಗರಗಳ ಎಲ್ಲಾ ಬಡಾವಣೆಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಿ ಸಾರ್ವಜಕರಿಗೆ ಅನುಕೂಲ ಮಾಡಿಕೊಡಲು ಕ್ರಮ ಜರುಗಿಸಲಾಗುವುದೇ;

(ಇ) ಕುಡಿಯುವ ನೀರಿನ ಬವಣೆ ತಪ್ಪಿಸಲು ಬೇರೆ ಯಾವ ರೀತಿಯ ಕಾರ್ಯಕ್ರಮಗಳನ್ನು ಹಾಕಿಕೊಳ್ಳಲು ಸರ್ಕಾರ ತೀರ್ಮಾನ ಮಾಡಿದೆ? (ವಿವರ ನೀಡುವುದು)

## ಅಂಗಾಂಗ ದಾನಿಗಳ ಡಾಟಾ–ಬೇಸ್ ಸೃಷ್ಠಿ ಮಾಡುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ (ಶಿಕ್ಷಕರ ಕ್ಷೇತ್ರ) –**

೪೧೩೪ (೪೬೮೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿವಿಧ ಅಪಘಾತಗಳಲ್ಲಿ ವಾರ್ಷಿಕ ಅಸುನೀಗುತ್ತಿರುವವರ ಸಂಖ್ಯೆ ಎಷ್ಟು; ಕಳೆದ ಒಂದು ವರ್ಷದ ವಿವರ ನೀಡುವುದು;

(ಆ) ಈ ರೀತಿ ರಸ್ತೆ ಅಪಘಾತದಲ್ಲಿ ಅಸುನೀಗಿರುವವರ ಅಂಗಾಂಗ ದಾನಕ್ಕೆ ಒಪ್ಪಿಗೆ ನೀಡಿದ್ದಲ್ಲಿ, ಮಾಹಿತಿಯನ್ನು ಸಂಗ್ರಹಿಸುವ ವ್ಯವಸ್ಥೆ ಸರ್ಕಾರದಲ್ಲಿದೆಯೇ; (ವಿವರ ನೀಡುವುದು)

(ಇ) ಅಂಗಾಂಗ ದಾನ ಮಾಡಲು ಒಪ್ಪಿಗೆ ನೀಡುವ ವ್ಯಕ್ತಿಗಳ ವಿವರಗಳನ್ನು ಆಧಾರ್ ಕಾರ್ಡ್ ಹಾಗೂ ವಾಹನ ಪರವಾನಗಿ ಜೋಡಿಸಿದ್ದಲ್ಲಿ ಹಾಗೂ ಇದಕ್ಕೆ ಪೂರಕವಾದ ಡಾಟಾ–ಬೇಸ್ ಸೃಷ್ಠಿ ಮಾಡಿದ್ದಲ್ಲಿ ಅಂಗಾಂಗ ದಾನಿಗಳ ಅಪೇಕ್ಷೆ ನೆರವೇರಿಸಲು ಸಾಧ್ಯವಾಗುವುದರಿಂದ ಸರ್ಕಾರ ಈ ಕುರಿತಾಗಿ ಯೋಜನೆ ಹಮ್ಮಿಕೊಳ್ಳಲಾಗುವುದೇ?

## ಸ್ವಚ್ಛ ಭಾರತ ಯೋಜನೆ ಅನುದಾನದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೪೧೩೫ (೪೬೯೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸ್ವಚ್ಛ ಭಾರತ ಯೋಜನೆಯಡಿ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬಿಡುಗಡೆಯಾದ ಅನುದಾನದ ವಿವರ ನೀಡುವುದು;

(ಆ) ಬಿಡುಗಡೆಯಾದ ಅನುದಾನವನ್ನು ಯಾವ ಯಾವ ಉದ್ದೇಶಗಳಿಗೆ ವೆಚ್ಚ ಮಾಡಲಾಗಿದೆ; (ವಿವರ ನೀಡುವುದು)

(ಇ) ಬಿಡುಗಡೆಯಾದ ಅನುದಾನವನ್ನು ವೆಚ್ಚ ಮಾಡದೇ ಇದ್ದಲ್ಲಿ, ಕಾರಣಗಳೇನು? (ವಿವರ ನೀಡುವುದು)

## ವಿದ್ಯುತ್ ಪೋಲಾಗುತ್ತಿರುವುದನ್ನು ನಿಯಂತ್ರಿಸುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೪೧೩೬ (೪೬೯೩) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ನಗರಸಭೆ, ಪುರಸಭೆಗಳಂತಹ ಸ್ಥಳೀಯ ಸಂಸ್ಥೆಗಳ ವಿದ್ಯುತ್ ದೀಪಗಳು ಸೂರ್ಯೋದಯುವಾದ ನಂತರವು ಉರಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ವಿದ್ಯುಚ್ಛಕ್ತಿಯ ಸಮಸ್ಯೆಯನ್ನು ಎದುರಿಸುತ್ತಿರುವ ನಮ್ಮ ರಾಜ್ಯದಲ್ಲಿ ಈ ರೀತಿ ವಿದ್ಯುತ್ ಪೋಲಾಗುತ್ತಿರುವುದನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡ ಕ್ರಮವೇನು;

(ಇ) ತಂತ್ರಜ್ಞಾನದ ಈ ದಿನಗಳಲ್ಲಿ ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ವಿದ್ಯುತ್ ದೀಪಗಳ ಸಮಯವನ್ನು ನಿಯಂತ್ರಿಸುವ ಸಲಕರಣೆಗಳು ಇದ್ದಾಗ್ಯೂ ಸರ್ಕಾರ ಇದರ ಉಪಯೋಗವನ್ನು ಪಡೆಯದಿರಲು ಕಾರಣಗಳೇನು?

## ಬೆಂಗಳೂರಿನಲ್ಲಿ ನಮ್ಮ ಮೆಟ್ರೋ ಯೋಜನೆ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೪೧೩೭ (೪೬೮೬) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನಲ್ಲಿ ನಮ್ಮ ಮೆಟ್ರೋ ಯೋಜನೆ ಪ್ರಾರಂಭವಾಗಿದ್ದು ಯಾವಾಗ;

(ಆ) ಈ ಯೋಜನೆಗೆ ಮಾಡಲಾದ ವೆಚ್ಚವೆಷ್ಟು; ಈ ವೆಚ್ಚದಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಅನುದಾನವೆಷ್ಟು;

(ಇ) ಇದುವರೆವಿಗೂ ಎಷ್ಟು ಕಿ.ಮೀ ಮೆಟ್ರೋ ಮಾರ್ಗವನ್ನು ನಿರ್ಮಿಸಲಾಗಿದೆ; ಇದರಲ್ಲಿ ಎಷ್ಟು ಮೆಟ್ರೋ ರೈಲುಗಳು ಸಂಚರಿಸುತ್ತಿವೆ:

(ಈ) ಮೆಟ್ರೋ ರೈಲಿಗೆ ಪ್ರಯಾಣಿಕರ ಸಂಖ್ಯೆ ಹೆಚ್ಚಾಗುತ್ತಿದ್ದು, ಪ್ರಯಾಣಿಕರ ಸಂಖ್ಯೆ ದಟ್ಟಣೆಗೆ ಮೆಟ್ರೋ ರೈಲುಗಳ ಬೋಗಿಗಳನ್ನು ಹೆಚ್ಚಿಸುವ ಯೋಜನೆ ಸರ್ಕಾರದ ಮುಂದಿದೆಯೇ;

(ಉ) ರೈಲು, ಕೆ.ಎಸ್.ಆರ್.ಟಿ.ಸಿ ಹಾಗೂ ಬಿ.ಎಂ.ಟಿ.ಸಿ.ಗಳಲ್ಲಿ ಹಿರಿಯ ನಾಗರಿಕರಿಗೆ ಮತ್ತು ಅಂಗವಿಕಲರಿಗೆ, ಸಣ್ಣ ಮಕ್ಕಳಿಗೆ ರಿಯಾಯಿತಿ ನೀಡುವಂತೆ ಮೆಟ್ರೋ ರೈಲಿನಲ್ಲಿ ರಿಯಾಯಿತಿ ಟಿಕೆಟ್/ಪಾಸುಗಳನ್ನು ವಿತರಿಸುವ ಯೋಜನೆ ಇದೆಯೇ?

## ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಕಸ ವಿಲೇವಾರಿ, ಕುಡಿಯುವ ನೀರು ಮತ್ತು ಅನಧಿಕೃತ ಕಟ್ಟಡಗಳ ಸಮಸ್ಯೆ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) –**

೪೧೩೮ (೪೭೧೫) ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ನಗರದಲ್ಲಿ ಪ್ರತಿದಿನ ಎಷ್ಟೆಷ್ಟು ಟನ್ ಕಸ ವಿಲೇವಾರಿ ಮಾಡಲಾಗುತ್ತಿದೆ; ಇದಕ್ಕಾಗಿ ಗುತ್ತಿಗೆದಾರರಿಗೆ ಕಸ ವಿಲೇವಾರಿಗಾಗಿ ದಿನ ಒಂದಕ್ಕೆ ಪಾವತಿಸುತ್ತಿರುವ ಹಣವೆಷ್ಟು; ಈವರೆವಿಗೆ ಪಾವತಿಸಿದ ಒಟ್ಟು ಹಣವೆಷ್ಟು; (ವಿವರ ಒದಗಿಸುವುದು)

(ಆ) ನಗರದ ಪ್ರತಿ ಕುಟುಂಬದಿಂದ ಕಸದ ಸೆಸ್ ಆಗಿ ಎಷ್ಟು ಹಣ ವಸೂಲು ಮಾಡಲಾಗುತ್ತಿದೆ; ಒಟ್ಟು ಆದಾಯ ಮತ್ತು ಖರ್ಚು ಎಷ್ಟು;

(ಇ) ನಗರದಲ್ಲಿ ಕುಡಿಯುವ ನೀರಿಗೆ ವರ್ಷ ಒಂದಕ್ಕೆ ತಗಲುವ ವೆಚ್ಚ ಎಷ್ಟು; ನೀರು ಬಳಕೆದಾರರಿಂದ ಬರುತ್ತಿರುವ ಆದಾಯವೆಷ್ಟು; (ವಿವರ ಒದಗಿಸುವುದು)

(ಈ) ನಗರದಲ್ಲಿ ಎಷ್ಟು ಮನೆಗಳಿಗೆ ಅನಧಿಕೃತವಾಗಿ ನೀರು ಸರಬರಾಜು ಆಗುತ್ತಿರುವುದನ್ನು ಪತ್ತೆ ಹಚ್ಚಲಾಗಿದೆ; ಇದನ್ನು ತಡೆಯಲು ಇಲಾಖೆ ಕೈಗೊಂಡಿರುವ ಕ್ರಮಗಳೇನು; (ವಿವರ ಒದಗಿಸುವುದು)

(ಉ) ನಗರದಲ್ಲಿರುವ ಒಟ್ಟು ಎಷ್ಟು ಅನಧಿಕೃತ ಕಟ್ಟಡಗಳಿವೆ; ಮನೆ ನಂಬರ್ ನೀಡದಿರುವ ಕಟ್ಟಡಗಳ ಮೇಲೆ ಇಲಾಖೆ ಕೈಗೊಂಡ ಕ್ರಮಗಳೇನು? (ವಿವರ ಒದಗಿಸುವುದು)

## ಪೊಲೀಸ್ ವ್ಯವಸ್ಥೆ ಬಲಪಡಿಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) –**

ಳ೧೩೯ (ಳ೭೧ಳ) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಪೊಲೀಸ್ ಸಂಖ್ಯೆ ಎಷ್ಟು; ಜನಸಂಖ್ಯೆಗೆ ಅನುಗುಣವಾಗಿ ಪೊಲೀಸ್ ಸಿಬ್ಬಂದಿ ನೇಮಕ ಮಾಡಲಾಗುತ್ತಿದೆಯೇ; ಜಿಲ್ಲಾವಾರು ಪೊಲೀಸರ ಸಂಖ್ಯೆ ಎಷ್ಟು; (ವಿವರ ಒದಗಿಸುವುದು)

(ಆ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಪೊಲೀಸ್ ವ್ಯವಸ್ಥೆಯನ್ನು ಬಲಪಡಿಸಲು ಯಾವ ಯಾವ ಕ್ರಮಕೈಗೊಳ್ಳಲಾಗಿದೆ; (ವಿವರ ಒದಗಿಸುವುದು)

(ಇ) ಪಾಸ್ ಪೋರ್ಟ್ Verification Certificate ಪಡೆಯಲು ವಿಳಂಬವಾಗುತ್ತಿದ್ದು, ಈ ಬಗ್ಗೆ ಪ್ರತ್ಯೇಕ Cell ಅಳವಡಿಸಿ ಶೀಘ್ರವಾಗಿ ಸರ್ಟಿಫಿಕೇಟ್ ಸಿಗುವಂತೆ ಮಾಡಲು ಇಲಾಖೆಯ ಮುಂದೆ ಯಾವುದಾದರು ಪ್ರಸ್ತಾವನೆ ಇದೆಯೇ;

(ಈ) ಮಾದಕ ದ್ರವ್ಯ, ಆರ್ಥಿಕ ಅಪರಾಧಗಳನ್ನು ನಿರ್ವಹಿಸುತ್ತಿರುವ ವಿಭಾಗವನ್ನು ಬಲಪಡಿಸಲು ಇಲಾಖೆ ಕೈಗೊಂಡಿರುವ ಕ್ರಮಗಳೇನು? (ಪೂರ್ಣ ವಿವರ ಒದಗಿಸುವುದು)

## ನಗರ ಪ್ರದೇಶದಲ್ಲಿ ಅಳವಡಿಸಿರುವ ಅನಧಿಕೃತ ಜಾಹೀರಾತು ಫಲಕ ಮತ್ತು ಬೀದಿ ವ್ಯಾಪಾರಸ್ಥರ ಸಮಸ್ಯೆ ಕುರಿತು

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) –**

೪೧೪೦ (೪೭೧೧) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರ ಪ್ರದೇಶದ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಅಳವಡಿಸಿರುವ ಜಾಹೀರಾತು ಫಲಕಗಳು ಎಷ್ಟು; ಯಾವ ಯಾವ ಸಂಸ್ಥೆಗಳು ಅನಧಿಕೃತ ಜಾಹೀರಾತು ಅಳವಡಿಸಿದ್ದಾರೆ; (ವಿವರ ಒದಗಿಸುವುದು)

(ಆ) ನಗರದಲ್ಲಿ ಅನಧಿಕೃತ ಬೋರ್ಡ್ ಅಳವಡಿಸಿದವರ ಮೇಲೆ ಇಲಾಖೆ ಕೈಗೊಂಡಿರುವ ಕ್ರಮಗಳೇನು; (ವಿವರ ಒದಗಿಸುವುದು)

(ಇ) ಎಷ್ಟು ಬೀದಿ ಬದಿ ವ್ಯಾಪಾರಸ್ಥರುಗಳನ್ನು ಗುರುತಿಸಲಾಗಿದೆ; ಎಲ್ಲರಿಗೂ ಗುರುತಿನ ಚೀಟಿ ನೀಡಲಾಗಿದೆಯೇ; ಯಾವ ಯಾವ ವಸ್ತುಗಳ ಮಾರಾಟಕ್ಕೆ ಬೀದಿ ಬದಿ ವ್ಯಾಪಾರಸ್ಥರನ್ನು ಗುರುತಿಸಲಾಗಿದೆ; (ವಿವರ ಒದಗಿಸುವುದು)

(ಈ) ಎಷ್ಟು ಮಂದಿ ಬೀದಿ ಬದಿ ವ್ಯಾಪಾರಸ್ಥರಿಗೆ ಕೆಲಸ ನಿರ್ವಹಿಸಲು ಮಂಗಳೂರು ಮಹಾನಗರ ಪಾಲಿಕೆಯಿಂದ ವ್ಯವಸ್ಥೆ ಮಾಡಲಾಗಿದೆ; ಈ ವ್ಯವಸ್ಥೆಯನ್ನು ಸರಿಯಾಗಿ ನಿರ್ವಹಿಸದೆ ವಿಫಲವಾಗಲು ಕಾರಣಗಳೇನು? (ವಿವರ ಒದಗಿಸುವುದು)

## ವೈನ್ ಶಾಪ್‌ಗಳನ್ನು ಬಂದ್ ಮಾಡಿದ್ದರ ಹಿನ್ನಲೆಯಲ್ಲಿ ಸರ್ಕಾರದ ಬೊಕ್ಕಸಕ್ಕೆ ಉಂಟಾಗಿರುವ ನಷ್ಟದ ಬಗ್ಗೆ

**ಶ್ರೀ ಐವನ್ ಡಿ’ ಸೋಜಾ (ನಾಮನಿರ್ದೇಶನ ಹೊಂದಿದವರು) –**

೪೧೪೧ (೪೭೧೨) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಸುಪ್ರೀಂ ಕೋರ್ಟ್ ಆದೇಶದನ್ವಯ ಬಂದ್ ಮಾಡಿದ ವೈನ್ ಶಾಪ್/ಬಾರ್‌ಗಳ ಸಂಖ್ಯೆಗಳೆಷ್ಟು; ಇದರಿಂದ ಸರ್ಕಾರಕ್ಕೆ ಉಂಟಾದ ಆದಾಯದ ನಷ್ಟವೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಅನಧಿಕೃತವಾಗಿ ಸಾರಾಯಿ ಮಾರಾಟ ಮಾಡುತ್ತಿರುವುದು ಮತ್ತು ಗೂಡಂಗಡಿಗಳಲ್ಲಿ ಸಾರಾಯಿ ಮಾರಾಟ ಮಾಡುವ ಬಗ್ಗೆ ಯಾರ್‍ಯಾರ ಮೇಲೆ ಎಷ್ಟು ಕೇಸುಗಳು ದಾಖಲಾಗಿವೆ; (ಜಿಲ್ಲಾವಾರು ವಿವರ ಒದಗಿಸುವುದು)

(ಇ) ರಾಜ್ಯದಲ್ಲಿ ವಿಶೇಷ ಕಾರ್ಯಕ್ರಮಗಳಲ್ಲಿ ೨೦೧೪–೧೫, ೨೦೧೫–೧೬, ೨೦೧೬–೧೭ ಮತ್ತು ೨೦೧೭–೧೮ನೇ ಸಾಲುಗಳಲ್ಲಿ ಸಾರಾಯಿ ಮಾರಾಟ ಮಾಡಲು ನೀಡಿದ ಪರವಾನಗಿಗಳೆಷ್ಟು; (ಜಿಲ್ಲಾವಾರು ವಿವರ ಒದಗಿಸುವುದು)

(ಈ) ಅಬಕಾರಿ ಇಲಾಖೆಯಲ್ಲಿ ಎಂ.ಎಸ್.ಐ.ಎಲ್ ವತಿಯಿಂದ ಎಷ್ಟು ಮದ್ಯ ಮಾರಾಟ ಮಳಿಗೆ ಕೇಂದ್ರಗಳನ್ನು ತೆರೆಯಲಾಗಿದೆ; ಇದರಿಂದ ಇಲಾಖೆಗೆ ಬರುತ್ತಿರುವ ಆದಾಯ ಎಷ್ಟು? (ಜಿಲ್ಲಾವಾರು ವಿವರ ಒದಗಿಸುವುದು)

## ಮಂಗಳೂರು ಮಹಾನಗರ ಪಾಲಿಕೆಯ ಪೌರಕಾರ್ಮಿಕರ ಸಮಸ್ಯೆ ನಿವಾರಿಸುವ ಕುರಿತು

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) –**

೪೧೪೨ (೪೭೧೩) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಪೌರ ಕಾರ್ಮಿಕರ ಸಂಖ್ಯೆ ಎಷ್ಟು; ಎಲ್ಲಾ ಪೌರ ಕಾರ್ಮಿಕರಿಗೆ ವಸತಿ ಸೌಲಭ್ಯ ಒದಗಿಸಲಾಗಿದೆಯೇ; (ವಿವರ ಒದಗಿಸುವುದು)

(ಆ) ಮಂಗಳೂರಿನಲ್ಲಿ ಪೌರ ಕಾರ್ಮಿಕರಿಗಾಗಿ ನಿರ್ಮಿಸುತ್ತಿರುವ ವಸತಿ ಯೋಜನೆಯನ್ನು ಯಾವಾಗ ಪೂರ್ಣಗೊಳಿಸಲಾಗುವುದು; ಎಷ್ಟು ಮಂದಿ ಪೌರ ಕಾರ್ಮಿಕರಿಗೆ ವಸತಿ ಸೌಲಭ್ಯ ಒದಗಿಸಲಾಗಿದೆ; (ವಿವರ ಒದಗಿಸುವುದು)

(ಇ) ಪೌರ ಕಾರ್ಮಿಕರ ವೇತನವೆಷ್ಟು; ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರ ಸಂಖ್ಯೆ ಎಷ್ಟು? (ವಿವರ ಒದಗಿಸುವುದು)

## ರಾಜ್ಯದಲ್ಲಿರುವ ಬಹುಮಹಡಿ ಕಟ್ಟಡಗಳಲ್ಲಿನ ಸುರಕ್ಷತಾ ಕ್ರಮದ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೪೩ (೪೭೦೪) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಸಾವಿರಾರು ಬಹುಮಹಡಿ ಕಟ್ಟಡಗಳು ಅಸುರಕ್ಷಿತವಾಗಿದ್ದು, ಅಗ್ನಿಶಾಮಕ ಇಲಾಖೆಯಿಂದ ನಿರಾಕ್ಷೇಪಣೆ ಪಡೆಯದಿರುವುದು ನಿಜವೆ;

(ಆ) ರಾಜ್ಯದಲ್ಲಿರುವ ಬಹುಮಹಡಿ ಕಟ್ಟಡಗಳೆಷ್ಟು; ಸುರಕ್ಷತಾ ಕ್ರಮದ ನಿರಾಕ್ಷೇಪಣಾ ಪತ್ರ ಪಡೆಯದ ಕಟ್ಟಡಗಳೆಷ್ಟು;

(ಇ) ಕಟ್ಟಡಗಳ ಸುರಕ್ಷತಾ ಮತ್ತು ಅಗ್ನಿಶಾಮಕ ಸುರಕ್ಷತಾ ಕ್ರಮಗಳೇನು; ಈ ಕುರಿತು ನಿಯಮಗಳೇನು;

(ಈ) ಬಹುಮಹಡಿ ಕಟ್ಟಡಗಳಲ್ಲಿನ ಸುರಕ್ಷತೆ ಖಾತ್ರಿಗೆ ಸರ್ಕಾರ ಯಾವ ಯಾವ ಕ್ರಮ ಕೈಗೊಳ್ಳಲಿದೆ; ಇದುವರೆಗೆ ಸುರಕ್ಷತಾ ಕ್ರಮದ ನಿರಾಕ್ಷೇಪಣೆ ಪತ್ರ ಪಡೆಯದ ಬಹುಮಹಡಿಗಳಿಗೆ ಸಂಬಂಧಿಸಿದಂತೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? (ಸಂಪೂರ್ಣ ವಿವರ ನೀಡುವುದು)

## ಪೌರ ಕಾರ್ಮಿಕರನ್ನು ಖಾಯಂಗೊಳಿಸುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೪೪ (೪೭೪೨) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ಸ್ಥಳೀಯ ಸಂಸ್ಥೆಗಳಲ್ಲಿ/ಮಹಾನಗರ ಪಾಲಿಕೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಇದುವರೆಗೆ ಎಷ್ಟು ಪೌರ ಕಾರ್ಮಿಕರನ್ನು ಖಾಯಂಗೊಳಿಸಲಾಗಿದೆ; ಎಷ್ಟು ಪೌರ ಕಾರ್ಮಿಕರನ್ನು ಖಾಯಂಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆ;

(ಇ) ಪೌರ ಕಾರ್ಮಿಕರಿಗೆ ಪ್ರಸ್ತುತ ನೀಡಲಾಗುತ್ತಿರುವ ವೇತನ ಮತ್ತು ಇತರೆ ಸವಲತ್ತುಗಳೇನು;

(ಈ) ಎಷ್ಟು ಪೌರ ಕಾರ್ಮಿಕರನ್ನು ವಿದೇಶ ಅಧ್ಯಯಾನ ಪ್ರವಾಸಕ್ಕೆ ಕಳುಹಿಸಲಾಗಿದೆ; ಇನ್ನು ಎಷ್ಟು ಮಂದಿಯನ್ನು ಪ್ರವಾಸಕ್ಕೆ ಕಳುಹಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆ:

(ಉ) ಪೌರ ಕಾರ್ಮಿಕರನ್ನು ಖಾಯಂಗೊಳಿಸುವಂತೆ, ಅನೇಕ ವರ್ಷಗಳಿಂದ ಪೌರಾಡಳಿತ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಗ್ರೂಪ್ 'ಡಿ' ಮತ್ತಿತರ ನೌಕರರನ್ನು ಖಾಯಂಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ; ತಾತ್ಕಾಲಿಕ ನೌಕರರನ್ನು ಖಾಯಂಗೊಳಿಸಿ, ಜೀವನ ಭದ್ರತೆ ಒದಗಿಸುವ ಬಗ್ಗೆ ಸರ್ಕಾರದ ನಿಲುವೇನು; ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

## ಸ್ವಯಂ ಘೋಷಿತ ಆಸ್ತಿ ತೆರಿಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೪೧೪೫ (೪೭೦೦) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಸ್ವಯಂ ಘೋಷಿತ ಆಸ್ತಿ ತೆರಿಗೆ ಪದ್ಧತಿ ಅಡಿಯಲ್ಲಿ ತಪ್ಪು ಲೆಕ್ಕ ನೀಡಿ ಆಸ್ತಿ ತೆರಿಗೆ ವಂಚಿಸುತ್ತಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಪ್ರಮುಖವಾಗಿ ಮಾಲ್‌ಗಳು, ಟೆಕ್‌ಪಾರ್ಕ್‌ಗಳು ಹಾಗೂ ಬೃಹತ್ ವಾಣಿಜ್ಯ ಮತ್ತು ವಸತಿ ಸಮುಚ್ಛಯ ಕಟ್ಟಡಗಳು ಆಸ್ತಿ ತೆರಿಗೆ ವಂಚಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಅಂತಹವುಗಳ ವಿವರ ನೀಡುವುದು ಮತ್ತು ಕೈಗೊಂಡ ಕೈಗೊಳ್ಳುವ ಕ್ರಮದ ಮಾಹಿತಿ ನೀಡುವುದು;

(ಇ) ಬೃಹತ್ ಬೆಂಗಳೂರು ಮಹಾ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಬೃಹತ್ ಕಟ್ಟಡಗಳ ಆಸ್ತಿ ತೆರಿಗೆ ವಂಚನೆ ಸಂಬಂಧ 'ಟೋಟಲ್ ಸ್ಟೇಷನ್ ಸರ್ವೇ' ಕಾರ್ಯ ಕೈಗೊಳ್ಳಲಾಗಿದೆಯೇ; ಸದರಿ ಸರ್ವೆಯ ಫಲಶ್ರುತಿಯೇನು?

## ಮಹಾನಗರಗಳ ವ್ಯಾಪ್ತಿಯಲ್ಲಿ ಅಸಮರ್ಪಕ ಕಸ ಗಾರ್ಬೇಜ್ ನಿರ್ವಹಣೆಯ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೪೬ (೪೭೨೧) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಮಹಾನಗರ ಪಾಲಿಕೆಗಳ, ಮಹಾನಗರಗಳ ವ್ಯಾಪ್ತಿಯ ಗಲ್ಲಿ ಗಲ್ಲಿಯಲ್ಲೂ ಗಾರ್ಬೇಜ್ ತುಂಬಿದ್ದು ಅಸಮರ್ಪಕ ನಿರ್ವಹಣೆಯಿಂದಾಗಿ ಗಾರ್ಬೇಜ್ ಸಮಸ್ಯೆ ಉಲ್ಬಣವಾಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದರೆ, ಕಸವಿಲೇವಾರಿ ಮತ್ತು ಸ್ವಚ್ಛತೆಯ ನಿರ್ವಹಣೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಹೇಗೆ ನಿರ್ವಹಣೆ ಮಾಡುತ್ತಿದೆ;

(ಇ) ಬೆಳಗಾವಿಯಲ್ಲಿ ದಿನನಿತ್ಯ ಎಷ್ಟು ಪ್ರಮಾಣದ ಕಸ/ಘನತ್ಯಾಜ್ಯ ಸಂಗ್ರಹವಾಗುತ್ತಿದೆ; ಇದರ ಸಂಸ್ಕರಣೆ ಹಾಗೂ ವಿಲೇವಾರಿಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; ಯಾವ ಯಾವ ಯೋಜನೆಗಳನ್ನು ಹಮ್ಮಿಕೊಂಡಿದೆ;

(ಈ) ಪ್ರತೀ ವರ್ಷ ಸ್ವಚ್ಛತೆಗೆ, ಕಸ ವಿಲೇವಾರಿಗೆ ಮತ್ತು ಸಂಸ್ಕರಣೆಗೆ ಸರ್ಕಾರವು ಎಷ್ಟು ಅನುದಾನ ನಿಗದಿ ಮಾಡಿದೆ; ೨೦೧೫–೧೬, ೨೦೧೬–೧೭ ರಲ್ಲಿ ಬಿಡುಗಡೆಯಾಗಿ ಬಳಕೆಯಾದ ಅನುದಾನವೆಷ್ಟು ಉಳಿಕೆ ಎಷ್ಟು?(ಮಹಾನಗರವಾರು ವಿವರ ನೀಡುವುದು)

## ಬೆಳಗಾವಿ ಮಹಾನಗರದಲ್ಲಿ ಅಕ್ರಮವಾಗಿ ತರಕಾರಿ ಸಗಟು ಮಾರುಕಟ್ಟೆ ವಾಣಿಜ್ಯ ಮಳಿಗೆಗಳನ್ನು ನಿರ್ಮಿಸುತ್ತಿರುವ ಬಗ್ಗೆ.

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೪೭ (೪೭೨೩) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಮಹಾನಗರದಲ್ಲಿ ಮಹಾನಗರ ಪಾಲಿಕೆಯ ಪೂರ್ವಾನುಮತಿಯಿಲ್ಲದೆ, ಅಧಿಕಾರಿಗಳ ಮಂಜೂರಾತಿ ಇಲ್ಲದೆ ಅಕ್ರಮವಾಗಿ ತರಕಾರಿ ಸಗಟು ಮಾರುಕಟ್ಟೆಯ ವಾಣಿಜ್ಯ ಮಳಿಗೆಗಳ ನಿರ್ಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಅಕ್ರಮವಾಗಿ ನಿರ್ಮಿಸುತ್ತಿರುವ ತರಕಾರಿ ಸಗಟು ಮಾರುಕಟ್ಟೆಯ ವಾಣಿಜ್ಯ ಮಳಿಗೆಗಳನ್ನು ನಿರ್ಮಾಣ ತಡೆಯುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಸದರಿ ವಾಣಿಜ್ಯ ಮಾರುಕಟ್ಟೆ ಮಳಿಗೆಗಳನ್ನು ನಿರ್ಮಿಸಲು ನಿಯಮಾವಳಿಗಳಡಿ ಸಂಬಂಧಿಸಿದ ಸಕ್ಷಮ ಪ್ರಾಧಿಕಾರಗಳು, ಅಧಿಕಾರಿಗಳು ಅಗತ್ಯ ಮಂಜೂರಾತಿ ನೀಡಿದ್ದಾರೆಯೇ; (ಪ್ರತಿಗಳೊಂದಿಗೆ ವಿವರ ನೀಡುವುದು)

(ಈ) ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಯಲ್ಲಿ ಸದರಿ ಜಾಗದ (ರಿ.ಸ.ನಂ.೬೮೬/೧, ೬೯೮/೧, ಹಾಗೂ ಇತರೆ) ಕೃಷಿ ವಲಯದ ಭೂ ಉಪಯೋಗ ಪರಿವರ್ತನೆಯು ಸರ್ಕಾರಿ ನಿಯಮಾವಳಿಗಳಡಿ ಪರಿವರ್ತನೆಯಾಗಿದೆಯೇ;

(ಉ) ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಯಲ್ಲಿ ಸದರಿ ಜಾಗದ ರಿ.ಸ.ನಂ.೬೮೬/೧, ೬೯೮/೧, ಹಾಗೂ ಇತರೆ) ಕೃಷಿ ವಲಯದ ಭೂ ಉಪಯೋಗ ಪರಿವರ್ತನೆಯು ಸರ್ಕಾರಿ ನಿಯಮಾವಳಿಗಳ ಸ್ಪಷ್ಟ ಉಲ್ಲಂಘನೆಯಾಗಿದ್ದಲ್ಲಿ ಇದು ರದ್ದಾಗುತ್ತದೆಯೇ; ಯಾವ ಕಾಲಮಿತಿಯಲ್ಲಿ ರದ್ದುಗೊಳಿಸಲಾಗುತ್ತಿದೆ;

(ಊ) ಸದರಿ ವಿಷಯದ ಸಂಬಂಧ ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು ಇವರಿಗೆ ಸಾರ್ವಜನಿಕರು ನೀಡಿದ ದೂರಿನ ವಿಷಯದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ವಿವರ ನೀಡುವುದು)

## ಬೆಳಗಾವಿ ಮಹಾನಗರ ಸಮೀಪವಿರುವ ದೊಡ್ಡ ಗ್ರಾಮ ಪಂಚಾಯಿತಿಗಳನ್ನು ನಗರದ ಜೊತೆ ಸೇರಿಸುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೪೮ (೪೭೨೦) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್‌ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಮಹಾನಗರದ ಸಮೀಪವಿರುವ ಮತ್ತು ಹೆಚ್ಚು ಜನಸಂಖ್ಯೆಯನ್ನು ಹೊಂದಿರುವ ದೊಡ್ಡ ಗ್ರಾಮ ಪಂಚಾಯಿತಿಗಳನ್ನು ನಗರ ಪ್ರದೇಶದ ಜೊತೆ ಸೇರಿಸುವ ವಿಚಾರ ಸರ್ಕಾರದ ಮುಂದಿದೆಯೇ;

(ಆ) ಹಾಗಿದ್ದಲ್ಲಿ, ದೊಡ್ಡ ಗ್ರಾಮ ಪಂಚಾಯಿತಿಗಳಾದ ಮಚ್ಚೆ, ಪಿರಣ್‌ವಾಡಿ ಸಾಂಭ್ರಾ ಗ್ರಾಮ ಪಂಚಾಯಿತಿಗಳನ್ನು ಅಭಿವೃದ್ಧಿ ಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಸದರಿ ನಗರ ಸಮೀಪವಿರುವ ದೊಡ್ಡ ಗ್ರಾಮ ಪಂಚಾಯಿತಿಗಳಿಗೆ ಜನಸಂಖ್ಯೆಯನ್ನಾಧರಿಸಿ ಹೆಚ್ಚಿನ ಅನುದಾನ ನೀಡಿ ಇವುಗಳ ಮೂಲಭೂತ ಸೌಕರ್ಯಗಳಿಗೆ ಮತ್ತು ಇವುಗಳನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ; (ವಿವರ ನೀಡುವುದು)

(ಈ) ಸದರಿ ದೊಡ್ಡ ಗ್ರಾಮ ಪಂಚಾಯಿತಿಗಳಿಗೆ ಸನ್ ೨೦೧೩–೧೪, ೨೦೧೪–೧೫ ಮತ್ತು ೨೦೧೫–೧೬ರಲ್ಲಿ ಕಾಯ್ದಿರಿಸಿದ್ದ ಅನುದಾನವೆಷ್ಟು; ಬಿಡುಗಡೆಯಾಗಿ ಬಳಕೆಯಾದ ಅನುದಾನವೆಷ್ಟು; ಬಾಕಿ ಇರುವ ಅನುದಾನವೆಷ್ಟು; (ವಿವರ ನೀಡುವುದು)

## ‘‘ಜ್ಯೋತಿ ಸಂಜೀವಿನಿ’’ ಯೋಜನೆಯ ಅನುಷ್ಠಾನದ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೪೯ (೪೭೨೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ನೌಕರರಿಗಾಗಿ ಸರ್ಕಾರವು ಜಾರಿಗೆ ತಂದಿರುವ ‘‘ಜ್ಯೋತಿ ಸಂಜೀವಿನಿ’’ ಯೋಜನೆಯು ಪೂರ್ಣ ಪ್ರಮಾಣದಲ್ಲಿ ಸರಿಯಾಗಿ ಅನುಷ್ಠಾನಗೊಳ್ಳದೆ ರೋಗಿಗಳು ಈ ಯೋಜನೆ ಅಡಿ ಚಿಕಿತ್ಸೆ ಪಡೆಯಲು ಹರ ಸಾಹಸ ಪಡುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಈ ಯೋಜನೆಯು ಸರಿಯಾಗಿ ಪೂರ್ಣ ಪ್ರಮಾಣದ ಅನುಷ್ಠಾನಗೊಳ್ಳಲು, ರೋಗಿಗಳ ಪರದಾಟ ತಪ್ಪಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

(ಇ) ಹೃದಯರೋಗ, ಕ್ಯಾನ್ಸರ್, ನ್ಯೂರಾಲಜಿ, ಇನ್ನಿತರೆ ತುರ್ತು ಶಸ್ತ್ರ ಚಿಕಿತ್ಸೆಗಳಿಗೆ ರೋಗಿಗಳು ಒಳಗಾದ ಎಮರ್ಜನ್ಸಿ ಸಂದರ್ಭಗಳಲ್ಲಿ ಸರ್ಕಾರದ ''ಜ್ಯೋತಿ ಸಂಜೀವಿನಿ'' ಯೋಜನೆಯಡಿ ಚಿಕಿತ್ಸೆ ಪಡೆಯುವಂತಾಗಲು ಸರ್ಕಾರವು ಯಾವ ನಿಯಮಗಳನ್ನು ರೂಪಿಸಿದೆ, ಈ ವಿಚಾರದಲ್ಲಿ ಸರ್ಕಾರವು ಆಸ್ಪತ್ರೆಗಳಿಗೆ ಯಾವ ಯಾವ ನಿರ್ಧಿಷ್ಟ ಮಾರ್ಗ ಸೂಚಿಗಳನ್ನು ನೀಡಿದೆ, ಇಂತಹ ತುರ್ತು ಸಂದರ್ಭಗಳಲ್ಲಿ ರೋಗಿಗಳು ಏನು ಮಾಡಬೇಕು; (ವಿವರ ನೀಡುವುದು)

(ಈ) ತುರ್ತು ಸಂದರ್ಭಗಳಲ್ಲಿ ರೋಗಿಯು ಮಾಹಿತಿ ಒದಗಿಸುವಲ್ಲಿ ಅಥವಾ ಆಸ್ಪತ್ರೆಯ ಕೆಲವು ತಾಂತ್ರಿಕ ದೋಷದಿಂದಲೋ ಜ್ಯೋತಿ ಸಂಜೀವಿನಿ ಯೋಜನೆಯಡಿ ದಾಖಲಾಗದ ಪರಿಸ್ಥಿತಿಗಳಲ್ಲಿ ರೋಗಿಗಳು ಚಿಕಿತ್ಸೆ ಪಡೆಯಲು ಏನು ಮಾಡಬೇಕು;

ಉ) ಕಳೆದ ೩ ವರ್ಷಗಳಲ್ಲಿ ಎಷ್ಟು ಜನ ರೋಗಿಗಳು ಈ ಯೋಜನೆಯ ಲಾಭ ಪಡೆದುಕೊಂಡಿದ್ದಾರೆ;

(ಊ) ಯೋಜನೆ ಲಾಭ ಪಡೆಯಲು ಇರುವ ಅರ್ಹತೆಗಳೇನು; ಮತ್ತು ಯಾವ ಯಾವ ರೋಗಿಗಳಿಗೆ ಈ ಯೋಜನೆಯು ಅನ್ವಯಿಸುತ್ತದೆ; ಈ ಯೋಜನೆಯ ಸಂಪೂರ್ಣ ಮಾಹಿತಿ ಒದಗಿಸುವುದು?

## ರಾಜ್ಯದ ಪೌರ ಸಂಸ್ಥೆಗಳಲ್ಲಿ ಖಾಲಿ ಇರುವ ಪೌರ ಕಾರ್ಮಿಕರ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೫೦ (೪೬೪೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸ್ಥಳೀಯ ಸಂಸ್ಥೆಗಳಲ್ಲಿ ಖಾಲಿ ಇರುವ ಪೌರ ಕಾರ್ಮಿಕರ ಸಂಖ್ಯೆ ಎಷ್ಟು; (ಮಾಹಿತಿ ಒದಗಿಸುವುದು)

(ಆ) ರಾಜ್ಯದ ಸ್ಥಳೀಯ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಪೌರ ಕಾರ್ಮಿಕರ ಸಂಖ್ಯೆ ಎಷ್ಟು; (ಮಹಾನಗರ ಪಾಲಿಕೆಗಳು ಸೇರಿದಂತೆ ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಪೌರಕಾರ್ಮಿಕರು ಎಷ್ಟು ವರ್ಷಗಳಿಂದ ಕೆಲಸ ನಿರ್ವಹಿಸುತ್ತಿದ್ದಾರೆ ಇವರಿಗೆ ನೀಡಲಾಗುತ್ತಿರುವ ವೇತನವೆಷ್ಟು; (ವಿವರ ನೀಡುವುದು) ಇವರ ವೇತನಕ್ಕಾಗಿ ರಾಜ್ಯದಲ್ಲಿ ಒಟ್ಟಾರೆಯಾಗಿ ಖರ್ಚಾಗುತ್ತಿರುವ ಹಣವೆಷ್ಟು; (ವಿವರ ಒದಗಿಸುವುದು)

(ಈ) ತುಮಕೂರು ಜಿಲ್ಲೆಯ ಸ್ಥಳೀಯ ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿರುವ ಪೌರ ಕಾರ್ಮಿಕರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಉ) ಇವರಿಗೆ ನೀಡುತ್ತಿರುವ ವೇತನವನ್ನು ನೇರವಾಗಿ ಅವರ ಖಾತೆಗೆ ಜಮೆ ಮಾಡಲಾಗುತ್ತಿದೆಯೇ; ಅಥವಾ ಇವರನ್ನು ಹೊರಗುತ್ತಿಗೆ ಏಜೆನ್ಸಿ ಮೂಲಕ ತೆಗೆದುಕೊಂಡು ಅವರ ಕಡೆಯಿಂದ ಇವರ ವೇತನ ಪಾವತಿ ಮಾಡಲಾಗುತ್ತಿದೆಯೆ; (ವಿವರ ನೀಡುವುದು)

(ಊ) ಈ ನೌಕರರಿಗೆ ಯಾವ ಯಾವ ಮೂಲಭೂತ ಸೌಕರ್ಯಗಳನ್ನು ನೀಡಲಾಗುತ್ತಿದೆ; (ವಿವರ ನೀಡುವುದು)

(ಋ) ಈ ಪೌರಕಾರ್ಮಿಕರನ್ನು ಖಾಯಂ ಮಾಡಲು ಸರ್ಕಾರಕ್ಕಿರುವ ತೊಂದರೆ ಏನು? (ವಿವರ ನೀಡುವುದು)

## ಕೆ.ಎಂ.ಎ.ಎಸ್. ಮುಖ್ಯಾಧಿಕಾರಿ ಶ್ರೇಣಿ–೧ ಮತ್ತು ೨ ಹುದ್ದೆಗಳನ್ನು ತುಂಬುವ ವಿಚಾರ

**ಶ್ರೀ ಸಿ.ಆರ್.ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೫೧ (೪೬೫೩) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕೆ.ಎಂ.ಎ.ಎಸ್. ಮುಖ್ಯಾಧಿಕಾರಿ ಶ್ರೇಣಿ–೧ ಮತ್ತು ೨ರಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; ಇದರಲ್ಲಿ ನೇರ ನೇಮಕಾತಿ ಮತ್ತು ಮುಂಬಡ್ತಿ ಅಥವಾ ವಿಲೀನದಿಂದ ತುಂಬಬೇಕಾಗಿರುವ ಹುದ್ದೆಗಳು ಎಷ್ಟು; (ವಿವರ ನೀಡುವುದು)

(ಆ) ಮಂಜೂರಾದ ಹುದ್ದೆಗಳಲ್ಲಿ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳ ಸಂಖ್ಯೆ ಎಷ್ಟು; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು;

(ಈ) ಅನ್ಯ ಇಲಾಖೆಯಿಂದ ಎರವಲು ಸೇವೆ ಮೇಲೆ ನಿಯೋಜಿಸಲು ಇಲಾಖೆಯ ನಿಯಮಾವಳಿಗಳನ್ವಯ ಅವಕಾಶವಿಲ್ಲದಿದ್ದರೂ ಸಹ ಸದರಿ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಂಖ್ಯೆ ಮತ್ತು ವಿವರಗಳನ್ನು ನೀಡುವುದು?

## ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಸಾಲ ಸೌಲಭ್ಯದ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೪೧೫೨ (೪೭೪೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಉದ್ದಿಮೆದಾರರಿಗೆ ಅಥವಾ ಫಲಾನುಭವಿಗಳಿಗೆ ನೀಡುವ ಗರಿಷ್ಠ ಸಾಲ ಸೌಲಭ್ಯ ಎಷ್ಟು; ಸಾಲ ಸೌಲಭ್ಯಕ್ಕಾಗಿ ಎಷ್ಟು ಶೇಕಡವಾರು ಆರ್ಥಿಕ ಭದ್ರತೆ ನೀಡುವುದು ಕಡ್ಡಾಯವಾಗಿರುತ್ತದೆ;

(ಆ) ಆರ್ಥಿಕ ಭದ್ರತೆಯ ಮಿತಿಯನ್ನು ಕಡಿತಗೊಳಿಸುವ ಬಗ್ಗೆ ಸರ್ಕಾರದ ಗಮನದಲ್ಲಿದೆಯೇ;

(ಇ) ಈಗ ಚಾಲ್ತಿ ಇರುವ ಮರುಪಾವತಿಯ ಅವಧಿ ಎಷ್ಟು; ಮರುಪಾವತಿಯ ಅವಧಿಯನ್ನು ಹೆಚ್ಚುವರಿ ವಿಸ್ತರಿಸುವ ಬಗ್ಗೆ ಸರ್ಕಾರ ಯೋಚಿಸಿದೆಯೇ;

ಈ) ಯಾವುದೇ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಫಲಾನುಭವಿ ಸಾಲ ಮರುಪಾವತಿಯನ್ನು ಆರ್ಥಿಕ ಸಮಸ್ಯೆಯಿಂದ ಕೆಲವು ಸಂದರ್ಭದಲ್ಲಿ ಕಟ್ಟಲು ಸಾಧ್ಯವಾಗದಿದ್ದಾಗ ಕಂತು ಬಾಕಿ ಉಳಿದರೆ defaulter ಆದರೆ ಸಹಾಯಧನ ಕೊಡುವುದನ್ನು ನಿಲ್ಲಿಸಲಾಗುತ್ತದೆ ಎಂಬ ಅಂಶದಿಂದ ಸಾಕಷ್ಟು ಫಲಾನುಭವಿಗಳಿಗೆ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಸಾಲ ಮರುಪಾವತಿಯನ್ನು ಮರುವಿಂಗಡಣೆ ಮಾಡಿದರೆ ಸರ್ಕಾರದ ಬಡ್ಡಿ ಸಹಾಯಧನವನ್ನು ನಿಲ್ಲಿಸದಿರುವ ಯೋಚನೆ ಸರ್ಕಾರದಲ್ಲಿದೆಯೇ;

(ಊ) K.S.F.C. ಯಿಂದ ನೀಡುವ ಸಾಲ ಸೌಲಭ್ಯದ ಕುರಿತು ಪ್ರಚಾರ ಕಡಿಮೆ ಆಗಿ ಫಲಾನುಭವಿಗಳು ಮಾಹಿತಿಯ ಕೊರತೆಯಿಂದ ಯೋಜನೆಯ ಸದುಪಯೋಗ ಪಡೆಯಲು ವಿಫಲರಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ;

ಖು) ಸರ್ಕಾರ ರೂಪಿಸಿರುವ ಕಾಯ್ದೆಯಂತೆ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಗುತ್ತಿಗೆದಾರರು ಸರ್ಕಾರಿ ಕಾಮಗಾರಿಗಳಲ್ಲಿ ೫೦ ಲಕ್ಷ ರೂಪಾಯಿಗಳವರೆಗೆ ಟೆಂಡರ್‌ನಿಂದ ವಿನಾಯಿತಿ ಹೊಂದಿರುತ್ತಾರೆ ಅವರು ಗುತ್ತಿಗೆ ಕಾಮಗಾರಿ ಮಾಡಲು ಆರ್ಥಿಕ ಸಹಾಯಕ್ಕಾಗಿ K.S.F.C. ವತಿಯಿಂದ ವಿಶೇಷ ಯೋಜನೆ ಏನಾದರೂ ಸರ್ಕಾರ ಹಾಕಿಕೊಳ್ಳುವುದು ಸಾಧ್ಯವಾಗುವುದಲ್ಲವೇ?

## ಮೆಟ್ರೋ ರೈಲು ಪಿಲ್ಲರ್ಸ್ ನಡುವೆ ಕಟ್ಟಡ ತ್ಯಾಜ್ಯಗಳನ್ನು ಹಾಕುತ್ತಿರುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೫೩ (೪೭೫೧+೪೭೫೪) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೆಟ್ರೋ ರೈಲು ಹಾದುಹೋಗುವ ಮಾರ್ಗದಲ್ಲಿ ನಿರ್ಮಿಸಲಾಗಿರುವ ಪಿಲ್ಲರ್ಸ್ ನಡುವೆ ಕಟ್ಟಡಗಳ ತ್ಯಾಜ್ಯಗಳನ್ನು ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಇವರುಗಳ ವಿರುದ್ಧ ಯಾವ ಕ್ರಮ ತೆಗೆದುಕೊಳ್ಳಲಾಗಿದೆ (ಪೂರ್ಣ ವಿವರ ನೀಡುವುದು)

(ಇ) ಮೆಟ್ರೋ ರೈಲು ಹಾದುಹೋಗುವ ಮಾರ್ಗದಲ್ಲಿ ನಿರ್ಮಿಸಲಾಗಿರುವ ಪಿಲ್ಲರ್ಸ್ ನಡುವಿನಲ್ಲಿ ಖಾಲಿ ಇರುವ ಜಾಗವನ್ನು ಸದುಪಯೋಗ ಪಡಿಸಿಕೊಳ್ಳುವಲ್ಲಿ ಸರ್ಕಾರವು ತೆಗೆದುಕೊಂಡಿರುವ ಕ್ರಮವೇನು; (ವಿವರ ನೀಡುವುದು)

(ಈ) ಈ ಪಿಲ್ಲರ್‌ಗಳ ನಡುವಿನ ಅಂತರದ ಜಾಗದಲ್ಲಿ ಗಿಡಗಳನ್ನು ನಿರ್ಮಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ;

(ಉ) ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು ಮತ್ತು ಇದಕ್ಕಾಗಿ ಪ್ರತ್ಯೇಕವಾದ ಅನುದಾನವನ್ನು ನೀಡಲಾಗುವುದೇ?

## ಅಧಿಕೃತ ಪರಿವಾನಿಗೆ ಸನ್ನದುದಾರರ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೫೪ (೪೭೫೨) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಬಕಾರಿ ಇಲಾಖೆ ವತಿಯಿಂದ ಅಧಿಕೃತ ಪರವಾನಿಗೆ ಹೊಂದಿರುವ ಸನ್ನದುದಾರರ ಸಂಖ್ಯೆ ಎಷ್ಟು;

(ಆ) ಕಳೆದ ಎರಡು ವರ್ಷಗಳಿಂದ ಎಷ್ಟು ಸನ್ನದುದಾರರಿಗೆ ಹೊಸದಾಗಿ ಪರವಾನಿಗೆ ನೀಡಲಾಗಿದೆ?

## ಅನಧಿಕೃತ ಹೋಲ್ಡಿಂಗ್ಸ್, ಫ್ಲೆಕ್ಸ್, ಬ್ಯಾನರ್ಸ್, ಪೋಸ್ಟರ್‌ಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೫೫ (೪೭೫೩) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಅನಧಿಕೃತ ಹೋಲ್ಡಿಂಗ್ಸ್, ಫ್ಲೆಕ್ಸ್, ಬ್ಯಾನರ್ಸ್ ಮತ್ತು ಪೋಸ್ಟರ್‌ಗಳು ರಾರಾಜಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಇಂತಹವರುಗಳ ವಿರುದ್ಧ ಯಾವ ಕಠಿಣ ಕ್ರಮ ಕೈಗೊಳ್ಳಲಾಗಿದೆ;

(ಇ) ಈಗಾಗಲೇ ಬೆಂಗಳೂರಿನ ಅಂದವನ್ನು ಕಾಪಾಡಲು ಫ್ಲೆಕ್ಸ್ ಬ್ಯಾನರ್ಸ್‌ಗಳನ್ನು ತೆರವುಗೊಳಿಸುವ ಬಗ್ಗೆ ಸರ್ಕಾರದ ಆದೇಶವಿದ್ದರೂ ಸಹ ಮಹಾನಗರ ಪಾಲಿಕೆಯು ಯಾವುದೇ ಸದರಿ ಆದೇಶವನ್ನು ಪಾಲಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಸರ್ಕಾರ ಆದೇಶ ಹೊರಡಿಸಿದ ದಿನಾಂಕದಿಂದ ಈವರೆವಿಗೂ ಎಷ್ಟು ಜನ ವ್ಯಾಪಾರಿ ಸಂಸ್ಥೆ, ರಾಜಕೀಯ ಸಂಸ್ಥೆ ಮೇಲೆ ದಾವೆ ಹೂಡಲಾಗಿದೆ? (ವಿವರ ನೀಡುವುದು)

## ಪೌರಾಡಳಿತ ಸಂಸ್ಥೆಗಳ ವ್ಯಾಪ್ತಿಯಲ್ಲಿ ಅನಧಿಕೃತ ಫ್ಲೆಕ್ಸ್‌ಗಳನ್ನು ನಿಯಂತ್ರಿಸುವ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೫೬ (೪೬೯೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ಪರಿಮಿತಿಯಲ್ಲಿ ಅನುಮತಿಯಿಲ್ಲದೇ ಫ್ಲೆಕ್ಸ್ ಮತ್ತು ಬ್ಯಾನರ್‌ಗಳನ್ನು ಹಾಕುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ; ಈ ರೀತಿ ಅನಧಿಕೃತವಾಗಿ ಫ್ಲೆಕ್ಸ್ ಮತ್ತು ಬ್ಯಾನರ್ ಹಾಕುವವರ ವಿರುದ್ಧ ಹೆಚ್ಚಿನ ದಂಡ ಮತ್ತು ಕ್ರಿಮಿನಲ್ ಕೇಸ್ ದಾಖಲಿಸುವ ಯೋಜನೆ ಸರ್ಕಾರದ ಮುಂದಿದೆಯೇ; ಇಲ್ಲವಾದಲ್ಲಿ, ನಿಯಂತ್ರಣ ಮೀರಿ ಹಾಕುತ್ತಿರುವ ಫ್ಲೆಕ್ಸ್ ಮತ್ತು ಬ್ಯಾನರ್‌ಗಳಿಗೆ ಬದಲಿ ವ್ಯವಸ್ಥೆಯನ್ನು ಗುರುತಿಸುವ ಉದ್ದೇಶ ಸರ್ಕಾರದ ಮುಂದಿದೆಯೇ;

(ಆ) ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ಪರಿಮಿತಿಯಲ್ಲಿ ಫ್ಲೆಕ್ಸ್ ಬ್ಯಾನರ್ ಅಳವಡಿಕೆಗೆ ಈಗ ಇರುವ ಮಾರ್ಗಸೂಚಿಗಳು ಯಾವುವು; ಅವು ಪರಿಣಾಮಕಾರಿಯಾಗಿದೆಯೇ; ಇಲ್ಲವಾದಲ್ಲಿ, ಇದರ ಪರಿಷ್ಕರಣೆಗೆ ಸರ್ಕಾರದ ಕ್ರಮವೇನು? (ಮಾರ್ಗಸೂಚಿಯ ಪ್ರತಿ ಒದಗಿಸುವುದು)

## ಭ್ರಷ್ಟಾಚಾರ ನಿಗ್ರಹ ದಳದಿಂದ ಪತ್ತೆ ಹಚ್ಚಿದ ಪ್ರಕರಣ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೫೭ (೪೬೮೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಿಂದ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ACB (ಭ್ರಷ್ಟಾಚಾರ ನಿಗ್ರಹ ದಳ)ಯಿಂದ ಅಪರಾಧ ಪತ್ತೆ ಹಚ್ಚಿ ದಾಖಲಿಸಿದ ಪ್ರಕರಣಗಳ ಸಂಖ್ಯೆ ಎಷ್ಟು; ಅವು ಯಾವುವು; (ವರ್ಷಾವಾರು, ಪ್ರಕರಣವಾರು, ಹುದ್ದೆವಾರು ವಿವರ ನೀಡುವುದು)

(ಆ) ಅಪರಾಧ ದಾಖಲಾಗಿರುವಾಗ ಆಪಾದಿತರ ಹುದ್ದೆ ಯಾವುದು; ಪ್ರಸ್ತುತ ಈ ಆಪಾದಿತರು ಕಾರ್ಯನಿರ್ವಹಿಸುತ್ತಿರುವ ಹುದ್ದೆ ಯಾವುದು;

(ಇ) ACBಗೆ ನ್ಯಾಯಾಲಯದಲ್ಲಿ ಮಾನ್ಯತೆಯಿಲ್ಲದಿರುವುದು ಸರ್ಕಾರದ ಗಮನದಲ್ಲಿದೆಯೇ; ಈ ಬಗ್ಗೆ ಸರ್ಕಾರದ ಕ್ರಮವೇನು?

## ಅಬಕಾರಿ ಇಲಾಖೆ ಕಛೇರಿ, ಸಿಬ್ಬಂದಿ ಮತ್ತು ವಶಪಡಿಸಿದ ವಾಹನಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೫೮ (೪೬೮೯) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿರುವ ಅಬಕಾರಿ ಇಲಾಖೆಯ ವಿವಿಧ ಹಂತದ ಕಛೇರಿಗಳು ಯಾವುವು; ಅವುಗಳಲ್ಲಿ ಸ್ವಂತ ಕಟ್ಟಡವನ್ನು ಹೊಂದಿರುವ ಕಛೇರಿಗಳ ಸಂಖ್ಯೆ ಎಷ್ಟು; ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಕಟ್ಟಡಗಳು ಯಾವುವು; ಅವುಗಳು ಪಾವತಿಸುವ ಮಾಸಿಕ ಬಾಡಿಗೆ ಮೊತ್ತವೆಷ್ಟು; ಇವುಗಳು ಸ್ವಂತ ಕಟ್ಟಡವನ್ನು ಹೊಂದಲು ಸರ್ಕಾರದ ಕ್ರಮವೇನು;

(ಆ) ಉಡುಪಿ ಜಿಲ್ಲೆಯ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ವಿವಿಧ ಹಂತದ ಕಛೇರಿಗಳಿಗೆ ಮಂಜೂರಾದ ಹುದ್ದೆಗಳು ಯಾವುವು; ಅವುಗಳಲ್ಲಿ ತೆರೆವಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು; ಇವುಗಳ ಭರ್ತಿಗೆ ಸರ್ಕಾರದ ಕ್ರಮವೇನು; (ಕಛೇರಿವಾರು, ಹುದ್ದೆವಾರು ಮಾಹಿತಿ ನೀಡುವುದು)

(ಇ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಪ್ರತಿ ಕಛೇರಿಯ ವ್ಯಾಪ್ತಿಯಲ್ಲಿ ವಶಪಡಿಸಿಕೊಂಡು ಬಿಡುಗಡೆಯಾಗದ ವಾಹನಗಳೆಷ್ಟು? (ಕಛೇರಿವಾರು ಮಾಹಿತಿ ನೀಡುವುದು)

## ಪೊಲೀಸ್ ಠಾಣೆಗಳ ಸ್ಥಾಪನೆ ಮತ್ತು ಸ್ಥಳಾಂತರದ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೫೯ (೪೬೯೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೊಸ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ಸ್ಥಾಪಿಸಲಾದ ಪೊಲೀಸ್ ಠಾಣೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಪೊಲೀಸ್ ಠಾಣೆ ವಿವರ ನೀಡುವುದು)

(ಆ) ರಾಜ್ಯದಲ್ಲಿ ಹೊಸ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ಸ್ಥಳಾಂತರಗೊಳಿಸಿದ ಪೊಲೀಸ್ ಠಾಣೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ಪೊಲೀಸ್ ಠಾಣಾವಾರು ವಿವರ ನೀಡುವುದು)

(ಇ) ಕುಂದಾಪುರ ಮಹಿಳಾ ಪೊಲೀಸ್ ಠಾಣೆಯನ್ನು ಮಂಜೂರಾತಿ ಮಾಡಿ ಸುಸಜ್ಜಿತ ಕಟ್ಟಡ ಮತ್ತು ಮೂಲಭೂತ ಸೌಕರ್ಯವನ್ನು ಪೂರೈಸಿದ ನಂತರ ಅದನ್ನು ಉಡುಪಿಗೆ ಸ್ಥಳಾಂತರಿಸಲು ಕಾರಣವೇನು;

(ಈ) ಕುಂದಾಪುರದಲ್ಲಿ ಮಹಿಳಾ ಪೊಲೀಸ್ ಠಾಣೆಯನ್ನು ಪ್ರಾರಂಭಿಸಿರುವುದು ಆಡಳಿತ ಕಾರಣಕ್ಕಾಗಿಯೆ; ಅಥವಾ ರಾಜಕೀಯ ಕಾರಣಕ್ಕಾಗಿಯೆ; ಮತ್ತು ಅದನ್ನು ಉಡುಪಿಗೆ ಸ್ಥಳಾಂತರಿಸಿರುವುದು ಆಡಳಿತ ಕಾರಣಕ್ಕಾಗಿಯೇ?

## ಸಿ.ಸಿ.ಟಿ.ವಿಯ ಮೂಲಕ ಅಪರಾಧ ನಿಯಂತ್ರಿಸುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೬೦ (೪೬೯೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳ್ಳತನ, ಕಳ್ಳಸಾಗಾಣಿಕೆಯಾಗುವ ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಪ್ರದೇಶಗಳ ಮೇಲೆ ನಿಗಾ ಇಡಲು ಪೊಲೀಸ್ ಇಲಾಖೆಯು ಸರ್ಕಾರದ ವಿವಿಧ ಇಲಾಖೆಯ ಸಹಯೋಗದಿಂದ ಸಿ.ಸಿ.ಟಿ.ವಿ.ಯನ್ನು ಅಳವಡಿಸುವ ಯೋಜನೆಯನ್ನು ಹೊಂದಿದೆಯೇ;

(ಆ) ಸಿ.ಸಿ.ಟಿ.ವಿ ಅಳವಡಿಕೆಯಿಂದ ಬಹಳಷ್ಟು ಪ್ರಕರಣಗಳ ನಿಯಂತ್ರಣ ಮತ್ತು ಪತ್ತೆ ಹಚ್ಚಲು ಸಹಕಾರಿಯಾಗುವುದು ನಿಜವೇ; ಇವುಗಳ ನಿಗಾ ಮತ್ತು ನಿರ್ವಹಣೆಗೆ ವಿಶೇಷ ತಂಡವನ್ನು ರಚಿಸುವ ಯೋಜನೆ ಸರ್ಕಾರದ ಮುಂದಿದೆಯೇ; ಅತಿ ಕಡಿಮೆ ವೆಚ್ಚದಲ್ಲಿ ಈ ಸಿ.ಸಿ.ಟಿ.ವಿ.ಗಳ ನಿಗಾ ಮತ್ತು ನಿರ್ವಹಣೆಯ ಸಾಧ್ಯತೆಯನ್ನು ಇಲಾಖೆಯು ಗಮನಿಸಿದೆಯೇ;

(ಇ) ರಾಜ್ಯದಲ್ಲಿ ಸಿ.ಸಿ.ಟಿ.ವಿ ಮತ್ತು ಮೊಬೈಲ್ ಟವರ್‌ಗಳ ಸಹಾಯದಿಂದ ಕಳೆದ ಮೂರು ವರ್ಷದಲ್ಲಿ ಪತ್ತೆ ಹಚ್ಚಲಾದ ಪ್ರಕರಣಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

## ಅನುದಾನಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೬೧ (೪೬೪೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೦೪ ರಿಂದ ೨೦೧೭ನೇ ಸಾಲಿನವರೆಗೆ ಕೇಂದ್ರ ಸರ್ಕಾರ ರಾಜ್ಯ ಸರ್ಕಾರಕ್ಕೆ ನೀಡಿರುವ ಅನುದಾನ ಎಷ್ಟು; (ಯೋಜನೆವಾರು ವರ್ಷವಾರು ಸಂಪೂರ್ಣ ವಿವರ ನೀಡುವುದು)

(ಆ) ಇದರಲ್ಲಿ ಧಾರವಾಡ ಜಿಲ್ಲೆ ಅಭಿವೃದ್ಧಿಗಾಗಿ ಎಷ್ಟು ಅನುದಾನ ನೀಡಲಾಗಿದೆ? (ವರ್ಷವಾರು ಸಂಪೂರ್ಣ ವಿವರ ನೀಡುವುದು)

## ಗೂಂಡಾ ಕಾಯಿದೆ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೬೨ (೪೬೪೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹುಬ್ಬಳ್ಳಿ–ಧಾರವಾಡ ಕಮಿಷನರೇಟರ್‌ನ ವ್ಯಾಪ್ತಿಯಲ್ಲಿ ೨೦೧೩ ರಿಂದ ೨೦೧೭ರವರೆಗೆ ಯಾವ ವ್ಯಕ್ತಿಗಳ ಮೇಲೆ ಗೂಂಡಾ ಕಾಯಿದೆ ಹಾಕಲಾಗಿದೆ; (ವರ್ಷವಾರು, ವ್ಯಕ್ತಿವಾರು ಸಂಪೂರ್ಣ ವಿವರ ನೀಡುವುದು)

(ಆ) ಇದರಲ್ಲಿ ೨೦೧೩ ರಿಂದ ೨೦೧೭ರವರೆಗೆ ಯಾವ ವ್ಯಕ್ತಿಗಳ ವಿರುದ್ಧ ಇದ್ದ ಗೂಂಡಾ ಕಾಯಿದೆಯನ್ನು ವಾಪಸ್ಸು ಪಡೆಯಲಾಗಿದೆ; (ವರ್ಷವಾರು, ವ್ಯಕ್ತಿವಾರು ಸಂಪೂರ್ಣ ವಿವರ ನೀಡುವುದು)

(ಇ) ಹುಬ್ಬಳ್ಳಿ–ಧಾರವಾಡ ಕಮಿಷನರೇಟರ್‌ನ ವ್ಯಾಪ್ತಿಯಲ್ಲಿ ೨೦೧೩ ರಿಂದ ೨೦೧೭ರ ಇಲ್ಲಿಯವರೆಗೆ ಎಷ್ಟು ಕೊಲೆ ಪ್ರಯತ್ನ ಪ್ರಕರಣಗಳು ದಾಖಲಾಗಿವೆ? (ವರ್ಷವಾರು ಸಂಪೂರ್ಣ ವಿವರ ನೀಡುವುದು)

## ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಸಿಬ್ಬಂದಿಗಳ ವೇತನ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೬೩ (೪೬೫೧) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯಲ್ಲಿ ಈವರೆಗೆ ಮಂಜೂರಾದ ಒಟ್ಟು ಹುದ್ದೆಗಳು ಎಷ್ಟು; (ಹುದ್ದೆವಾರು ಮಾಹಿತಿ ನೀಡುವುದು)

(ಆ) ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಕೊರತೆ ಇರುವ ಸಿಬ್ಬಂದಿಗಳ ನೇಮಕಾತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಹುದ್ದೆವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯಲ್ಲಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗೆ ವೇತನವನ್ನು ಕಾಲಕಾಲಕ್ಕೆ ಸರ್ಕಾರದಿಂದ ನೀಡಲಾಗುತ್ತಿದೆಯೇ; ಅಥವಾ ಬಾಕಿ ಇದೆಯೇ;

(ಈ) ಬಾಕಿ ಇದ್ದಲ್ಲಿ, ಯಾವ ದಿನಾಂಕದಿಂದ ವೇತನ ಪಾವತಿ ಬಾಕಿ ಇದೆ ರಾಜ್ಯ ಸರ್ಕಾರದಿಂದ ಈ ಪಾಲಿಕೆಗೆ ವೇತನಕ್ಕಾಗಿ ಎಷ್ಟು ಹಣ ಬಿಡುಗಡೆ ಮಾಡಬೇಕಾಗಿದೆ? (ವಿವರ ನೀಡುವುದು)

## ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ನಿವೃತ್ತಿ ನೌಕರರ ವೇತನದ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೬೪ (೪೬೫೨) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ನಿವೃತ್ತಿ ಹೊಂದಿದ ಸಿಬ್ಬಂದಿಗಳಿಗೆ ನಿವೃತ್ತಿ ವೇತನವನ್ನು ಕಾಲಕಾಲಕ್ಕೆ ಪಾವತಿಸಲಾಗುತ್ತಿದೆಯೇ; ಇಲ್ಲವಾದಲ್ಲಿ ಇದಕ್ಕೆ ಕಾರಣಗಳೇನು; (ಸಂಪೂರ್ಣ ವಿವರ ನೀಡುವುದು)

(ಆ) ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ಸಿಬ್ಬಂದಿಗಳ ನಿವೃತ್ತಿ ವೇತನವನ್ನು ಯಾವ ದಿನಾಂಕದಿಂದ ನೀಡುವುದು ಬಾಕಿ ಇದೆ; ಈ ಬಾಕಿ ಮೊತ್ತವೆಷ್ಟು; (ಸಂಪೂರ್ಣ ವಿವರ ನೀಡುವುದು)

(ಇ) ಸರ್ಕಾರವು ಈ ಪಾಲಿಕೆಗೆ ನಿವೃತ್ತಿ ವೇತನವನ್ನು ನೀಡುವ ಕುರಿತು ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು)

(ಈ) ರಾಜ್ಯದ ಎಲ್ಲಾ ೧೦ ಮಹಾನಗರ ಪಾಲಿಕೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ನಿವೃತ್ತಿ ವೇತನವನ್ನು ಸರ್ಕಾರವು ಪಾವತಿಸಲು ಬಾಕಿ ಇರುವ ಮೊತ್ತ ಎಷ್ಟು? (ಪಾಲಿಕೆವಾರು, ಮೊತ್ತದ ಸಂಪೂರ್ಣ ವಿವರ ನೀಡುವುದು)

## ಪೆಟ್ರೋಲಿಯಂ ಉತ್ಪನ್ನಗಳ ಮೇಲಿನ ಸೆಸ್ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೬೫ (೪೬೪೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೆಟ್ರೋಲಿಯಂ ಹಾಗೂ ಅದರ ಉತ್ಪನ್ನಗಳ ಮೇಲೆ ರಾಜ್ಯ ಸರಕಾರ ವಿಧಿಸುವ ಸೆಸ್ ತೆರಿಗೆ ಎಷ್ಟು; ಅವು ಯಾವುವು; (ಸಂಪೂರ್ಣ ವಿವರ ನೀಡುವುದು)

(ಆ) ೨೦೧೩ ರಿಂದ ೨೦೧೮ರ ಇಲ್ಲಿಯವರೆಗೆ ಪೆಟ್ರೋಲಿಯಂ ಹಾಗೂ ಅದರ ಉತ್ಪನ್ನಗಳ ಮೇಲೆ ಎಷ್ಟು ತೆರಿಗೆ ಸಂಗ್ರಹವಾಗಿದೆ; (ವರ್ಷವಾರು ಸಂಪೂರ್ಣ ವಿವರ ನೀಡುವುದು)

(ಇ) ಪೆಟ್ರೋಲಿಯಂ ಹಾಗೂ ಅದರ ಉತ್ಪನ್ನಗಳ ಮೇಲಿನ ತೆರಿಗೆ ಹಣವನ್ನು ಸರಕಾರ ಯಾವ ಉದ್ದೇಶಕ್ಕಾಗಿ ಬಳಸಿಕೊಳ್ಳುತ್ತಿದೆ? (ಸಂಪೂರ್ಣ ವಿವರ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸ್ವತ್ತಿನ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೪೧೬೬ (೪೬೨೨) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿ ಬೆಂಗಳೂರು ನಗರ ಕಂಟೋನ್ಮೆಂಟ್ ಪ್ರದೇಶ ಕ್ವೀನ್ಸ್ ರಸ್ತೆಯಲ್ಲಿನ ಮಿಲ್ಲರ್‌ಟ್ಯಾಂಕ್ (ಬಿಳೇಕಹಳ್ಳಿ) ಸರ್ವೆ ನಂ.೧೮ರಲ್ಲಿನ ಜಮೀನು ಪೂರ್ಣವಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸೇರಿರುವುದು ನಿಜವೇ; ಖರಾಬು ಸೇರಿದಂತೆ ಒಟ್ಟು ವಿಸ್ತೀರ್ಣ ಎಷ್ಟು;

(ಆ) ಹಾಗಿದ್ದರೆ, ಕೆಲವರು ಆ ಜಮೀನನ್ನು ಕಾನೂನು ಬಾಹಿರವಾಗಿ ಅತಿಕ್ರಮಸಿಕೊಂಡಿರುವುದು/ಭೂ ಕಬಳಿಕೆ ಮಾಡಿರುವುದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದರೆ, ಆ ರೀತಿ ಕಾನೂನು ಬಾಹಿರವಾಗಿ ಜಮೀನನ್ನು ಅತಿಕ್ರಮಣ ಮಾಡಿಕೊಂಡಿರುವವರ ಸಂಪೂರ್ಣ ವಿವರಗಳನ್ನು ಒದಗಿಸುವುದು ಮತ್ತು ಆ ಪ್ರದೇಶದಲ್ಲಿ ಸರ್ಕಾರ ಭೂಮಿ ಮಂಜೂರು ಮಾಡಿರುವ ಸಂಸ್ಥೆಗಳ ವಿವರಗಳನ್ನು ವಿಸ್ತೀರ್ಣವಾರು ಸಹಿತ ಮಾಹಿತಿ ಒದಗಿಸುವುದು;

(ಈ) ಹಾಗಿದ್ದರೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ತನ್ನ ಸ್ವತ್ತನ್ನು ಭೂ ಕಬಳಿಕೆದಾರರಿಂದ ವಾಪಸ್ಸು ಪಡೆಯಲು ತೆಗೆದುಕೊಂಡಿರುವ ಕ್ರಮಗಳೇನು?

## CDP ನಕ್ಷೆಯ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೪೧೬೭ (೪೬೨೬) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :

(ಅ) ಸರ್ಕಾರ ಬೆಂಗಳೂರು ಮಹಾನಗರದ ಹೊಸ CDP ನಕ್ಷೆಯನ್ನು ತಯಾರಿಸಿ ಬಿಡುಗಡೆ ಮಾಡಲು ತಯಾರಿ ನಡಸಿರುವುದು ನಿಜವೇ;

(ಆ) ಹಾಗಿದ್ದರೆ, CDP ನಕ್ಷೆ ಅನುಮೋದನೆಗೆ ಬಿ.ಬಿ.ಎಂ.ಪಿ ಯ ಅನುಮೋದನೆ ಮತ್ತು ಇತರೆ ಸಂಬಂಧಪಟ್ಟ ಇಲಾಖೆಗಳ ಅನುಮೋದನೆಯನ್ನು ಪಡೆಯಲಾಗಿದೆಯೇ;

(ಇ) ಹೊಸ CDP ನಕ್ಷೆಯನ್ನು ತರಾತುರಿಯಲ್ಲಿ ಚುನಾವಣೆ ಹತ್ತಿರ ಬಂದಾಗ ಬಿಡುಗಡೆ ಮಾಡಲು ಹೊರಟಿರುವುದಕ್ಕೆ ಕಾರಣವೇನು;

(ಈ) ಈ ವಿಷಯದಲ್ಲಿ ಅವಶ್ಯವಿರುವ ಎಲ್ಲಾ ಪ್ರಕ್ರಿಯೆಯನ್ನು ಪಾಲನೆ ಮಾಡಿದೆಯೇ? (ಪೂರ್ಣ ವಿವರವನ್ನು ನೀಡುವುದು)

## ಬಿ.ಬಿ.ಎಂ.ಪಿ ಜಮೀನು ಒತ್ತುವರಿ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೪೧೬೮ (೪೬೨೫) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಲಹಂಕ ಹೋಬಳಿ, ಚೊಕ್ಕನಹಳ್ಳಿ ಗ್ರಾಮ, ಸರ್ವೆ ನಂ.೩೨/೧ ರಿಂದ ೫೦ ರವರೆಗೆ ಸುಮಾರು ೧೦೬ ಎಕರೆ ಜಮೀನನ್ನು ಭಾರತೀಯ ಸಿಟಿ ಸಂಸ್ಥೆಯವರು (M/s Zigma Land Developers) ಖರೀದಿಸಿರುವುದು ನಿಜವೇ;

(ಆ) ಹಾಗಿದ್ದರೆ, ಅದರಲ್ಲಿನ 'ಎ' ಮತ್ತು 'ಬಿ' ಖರಾಬ್, ಪಿಳ್ಳಗಾಲುವೆ, ಬಂಡಿದಾರಿ, ಸ್ಮಶಾನ ಇತರೆ ಸರ್ಕಾರಿ ಜಮೀನುಗಳು ಒತ್ತುವರಿ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಆ ಸಂಸ್ಥೆಯವರು ಸುಧಾರಣಾ ಶುಲ್ಕ ಸುಮಾರು ರೂ. ೧೩.೦೦ ಕೋಟಿ ಹಣವನ್ನು ಬಿ.ಬಿ.ಎಂ.ಪಿ ಗೆ ಪಾವತಿ ಮಾಡದಿರುವುದು ನಿಜವೇ; ಹಾಗಿದ್ದರೆ, ಆ ಬಗ್ಗೆ ಬಿ.ಬಿ.ಎಂ.ಪಿ ಹಣ ವಸೂಲಿಗೆ ತೆಗೆದುಕೊಂಡಿರುವ ಕ್ರಮಗಳೇನು; ಯಾವ ದಿನದಿಂದ ಬಾಕಿ ಬರಬೇಕಾಗಿದೆ? (ವಿವರ ನೀಡುವುದು)

## ಬಿ.ಬಿ.ಎಂ.ಪಿ ಸ್ವತ್ತನ್ನು ವಾಪಾಸ್ಸು ಪಡೆಯುವ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೪೧೬೯ (೪೬೨೪) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :

(ಅ) ಬೆಂಗಳೂರು ಮಹಾನಗರ ಪಾಲಿಕೆ, ಸಿದ್ದಯ್ಯ ರಸ್ತೆಯಲ್ಲಿರುವ ಸ್ವತ್ತು ನಂ. ೧೮ ಮತ್ತು ೧೯ ಬಿ.ಬಿ.ಎಂ.ಪಿ.ಗೆ ಸೇರಿದ ಸ್ವತ್ತಾಗಿರುವುದು ನಿಜವೇ;

(ಆ) ಹಾಗಿದ್ದರೆ, ಆ ಸ್ವತ್ತು ಈಗ ಯಾರ ವಶದಲ್ಲಿದೆ; ಪ್ರಸ್ತುತ ಬಿ.ಬಿ.ಎಂ.ಪಿ. ಸ್ವತ್ತವನ್ನು ವಾಪಸ್ಸು ಪಡೆಯಲು ಯಾವ ಕ್ರಮಕೈಗೊಂಡಿದೆ? (ವಿವರ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸ್ವತ್ತಿನ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೪೧೭೦ (೪೬೨೩) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿ ವಾರ್ಡ್ ನಂ.೬೩ ತಿಮ್ಮಯ್ಯ ರಸ್ತೆಯಲ್ಲಿ ಕೆ.ಎಸ್.ಎಫ್.ಸಿ ಕೇಂದ್ರ ಕಛೇರಿ ಪಕ್ಕದ ಸ್ವತ್ತು ಸಂಖ್ಯೆ: ೧/೧–೨ ಸುಮಾರು ೧೦,೦೦೦ ಚದರಡಿ ಆಸ್ತಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸ್ವತ್ತಾಗಿರುವುದು ನಿಜವೇ;

(ಆ) ಹಾಗಿದ್ದರೆ, ಆ ಸ್ವತ್ತು ಪರರ ಸ್ವಾಧೀನದಲ್ಲಿರುವುದು ನಿಜವೇ;

(ಇ) ಹಾಗಿದ್ದರೆ, ಆ ಸ್ವತ್ತು ಪ್ರಸ್ತುತ ಯಾರ ವಶದಲ್ಲಿದೆ;

(ಈ) ಇದು ನಿಜವಾದರೆ, ಈ ಬಗ್ಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ತನ್ನ ಆಸ್ತಿಯನ್ನು ವಶಕ್ಕೆ ಪಡೆಯಲು ತೆಗೆದುಕೊಂಡಿರುವ ಕ್ರಮಗಳೇನು?

## ಅರ್ಕಾವತಿ ಬಡಾವಣೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೪೧೭೧ (೪೭೩೩) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅರ್ಕಾವತಿ ಬಡಾವಣೆ ನಿರ್ಮಾಣಕ್ಕೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಸ್ವಾಧೀನ ಪಡಿಸಿಕೊಂಡಿದ್ದ ಜಮೀನನ್ನು ಸ್ವಾಧೀನ ಪ್ರಕ್ರಿಯೆಯಿಂದ ಕೈಬಿಟ್ಟಿರುವ (ಡಿನೋಟಿಫೈ) ವಿಷಯವನ್ನು ಕುರಿತಂತೆ ಪರಿಶೀಲನೆ ನಡೆಸಿ ವರದಿ ಸಲ್ಲಿಸಲು ರಾಜ್ಯ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಶ್ರೀ ಹೆಚ್.ಎಸ್. ಕೆಂಪಣ್ಣ ನೇತೃತ್ವದ ಆಯೋಗ ರಚನೆ ಕುರಿತು ವಿವರ ನೀಡುವುದು;

(ಆ) ಸದರಿ ಆಯೋಗದಿಂದ ವರದಿ ಸಲ್ಲಿಸಲಾಗಿದೆಯೇ; ಸಲ್ಲಿಸಿದ್ದಲ್ಲಿ, ಯಾವಾಗ ವರದಿ ನೀಡಲಾಯಿತು;

(ಇ) ಸದರಿ ವರದಿಯುನ್ನು ಸದನದಲ್ಲಿ ಮಂಡಿಸಲು ಸರ್ಕಾರ ಮುಂದಾಗುವುದೇ; (ವಿವರ ನೀಡುವುದು)

(ಈ) ಸದರಿ ಸಮಿತಿಯ ಪರಿಶೀಲನೆ ಮತ್ತು ವರದಿ ಮಂಡಿಸಲು ಆಗಿರುವ ಒಟ್ಟು ವೆಚ್ಚವೆಷ್ಟು?

## ನಿಗದಿತ ಅವಧಿಯಲ್ಲಿ ನಿರ್ಮಾಣ ಕಾಮಗಾರಿಗಳು ಪೂರ್ಣಗೊಳ್ಳದೆ ಇರುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೪೧೧೭ (೪೭೩೪) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ನಿಗಧಿತ ಅವಧಿಯೊಳಗೆ ಮುಗಿಯದೆ ವಿಳಂಬವಾಗಿರುವ ಫ್ಲೈಓವರ್, ಸಿಗ್ನಲ್ ಮುಕ್ತ ಕಾರಿಡಾರ್, ಅಂಡರ್‌ಪಾಸ್ ನಿರ್ಮಾಣ ಕಾಮಗಾರಿಗಳು ಯಾವುವು;

(ಆ) ನಿಗದಿಪಡಿಸಿದ್ದ ಅವಧಿ ಹಾಗೂ ಪ್ರಸ್ತುತ ಎಷ್ಟು ಪ್ರಮಾಣದ ಕಾಮಗಾರಿ ಪೂರ್ಣಗೊಂಡಿದೆ ಎನ್ನುವ ಬಗ್ಗೆ ವಿವರ ನೀಡುವುದು;

(ಇ) ಕಾಮಗಾರಿಗಳು ವಿಳಂಬವಾಗಲು ಪ್ರಮುಖ ಕಾರಣಗಳೇನು;

(ಈ) ವಿಳಂಬವಾಗಿರುವ ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು?

## ಎನ್.ಪಿ.ಎಸ್. ಯೋಜನೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

**ಮತ್ತು**

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೪೧೭೩ (೪೭೩೫+೪೭೫೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ನೌಕರರಿಗೆ "ಹೊಸ ಪಿಂಚಣಿ ಯೋಜನೆ" (ಎನ್.ಪಿ.ಎಸ್.) ಜಾರಿಯಾಗಿದ್ದು ಯಾವಾಗ; ಇದರ ಹಿಂದಿನ ಮೂಲ ಉದ್ದೇಶ ಏನು, ಯೋಜನೆ ಕುರಿತು ವಿವರ ನೀಡುವುದು; ಪ್ರಸ್ತುತ ಎಷ್ಟು ಸರ್ಕಾರಿ ನೌಕರರು ಈ ಯೋಜನೆಯಡಿಯಲ್ಲಿ ಇರುತ್ತಾರೆ; (ವಿವರ ನೀಡುವುದು)

(ಆ) ಹಳೆ ಪಿಂಚಣಿ ಯೋಜನೆಗೂ ಹೊಸ ಪಿಂಚಣಿ ಯೋಜನೆಗೂ ಇರುವ ಪ್ರಮುಖ ವ್ಯತ್ಯಾಸಗಳೇನು; ಸರ್ಕಾರಿ ನೌಕರರು ವೃತ್ತಿಯಲ್ಲಿರುವಾಗಲೇ ಅಕಾಲ ಮರಣಕ್ಕೆ ತುತ್ತಾದಲ್ಲಿ ಹೊಸ ಪಿಂಚಣಿ ಯೋಜನೆಯ ಪ್ರಕಾರ ಅವರ ಕುಟುಂಬಕ್ಕೆ ಯಾವ ರೀತಿಯ ಆರ್ಥಿಕ ಸಹಾಯ ದೊರೆಯುತ್ತದೆ; (ವಿವರ ನೀಡುವುದು)

(ಇ) ಸದರಿ ಯೋಜನೆಯನ್ನು ವಿರೋಧಿಸಿ, ಸರ್ಕಾರಿ ನೌಕರರಿಂದ ಪ್ರತಿಭಟನೆ ಹಾಗೂ ಬೇಡಿಕೆಯ ಪತ್ರ ಬರೆಯಲಾಗಿದೆಯೇ; ನೌಕರರ ಬೇಡಿಕೆಗಳಲ್ಲಿನ ಪ್ರಮುಖ ಅಂಶಗಳು ಯಾವುವು?

## ಪರಿಶಿಷ್ಟರ ಬಡ್ತಿ ಮೀಸಲು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೪೧೭೪ (೪೭೩೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರಿ ನೌಕರರಲ್ಲಿರುವ ಪರಿಶಿಷ್ಟರ ಬಡ್ತಿ ಮೀಸಲು ಕುರಿತಂತೆ ಬಿ.ಕೆ.ಪವಿತ್ರ ರವರು ಸರ್ವೋಚ್ಛ ನ್ಯಾಯಾಲಯದ ಮೊರೆ ಹೋಗಿದ್ದು ನಿಜವೇ; ಈ ಕುರಿತು ವಿವರ ನೀಡುವುದು;

(ಆ) ಈ ಸಂಬಂಧ ಸುಪ್ರೀಂ ಕೋರ್ಟ್ ತೀರ್ಪು ನೀಡಿದೆಯೇ; ನೀಡಿದ್ದಲ್ಲಿ, ತೀರ್ಪಿನಲ್ಲಿರುವ ಪ್ರಮುಖ ಅಂಶಗಳು ಯಾವುವು; (ವಿವರ ನೀಡುವುದು)

(ಇ) ಸರ್ವೋಚ್ಛ ನ್ಯಾಯಾಲಯವು ನೀಡಿದ್ದ ಆದೇಶವನ್ನು ಪ್ರಶ್ನಿಸಿ, ರಾಜ್ಯ ಸರ್ಕಾರವು ಸಲ್ಲಿಸಿದ್ದ ಎಸ್.ಎಲ್.ಪಿ. ಯನ್ನು ನ್ಯಾಯಾಲಯವು ವಜಾಗೊಳಿಸಿರುವುದು ನಿಜವೇ; ನಿಜವಾಗಿದ್ದಲ್ಲಿ, ವಿವರ ನೀಡುವುದು;

(ಈ) ಪ್ರಸ್ತುತ ಈ ಸಂಬಂಧ ಸರ್ಕಾರದ ನಿಲುವೇನು; ಮುಂದೆ ಈ ಕುರಿತು ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು?

## ಫ್ಲೈಓವರ್ ಕಾಮಗಾರಿಗಳ ವಿಳಂಬ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೪೧೭೫ (೪೭೬೪) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಹೊಸಕೆರೆ ಹಳ್ಳಿಯ ರಸ್ತೆಯಲ್ಲಿ ಸಂಚಾರ ದಟ್ಟಣೆ ನಿಯಂತ್ರಣಕ್ಕಾಗಿ ಕೈಗೆತ್ತಿಕೊಂಡಿರುವ ಕಾಮಗಾರಿಗಳು ಯಾವುವು;

(ಆ) ಈ ಕಾಮಗಾರಿಗಳನ್ನು ಯಾವ ಗುತ್ತಿಗೆದಾರರಿಗೆ ನೀಡಲಾಗಿದೆ; ಇದರ ವೆಚ್ಚವೇನು; (ಪ್ರತ್ಯೇಕ ವಿವರ ನೀಡುವುದು)

(ಇ) ಸದರಿ ಕಾಮಗಾರಿಗಳನ್ನು ಯಾವ ದಿನಾಂಕದೊಳಗೆ ಪೂರ್ಣಗೊಳಿಸಬೇಕೆಂದು ಒಪ್ಪಂದವಾಗಿರುತ್ತದೆ;

(ಈ) ಅಕ್ಟೋಬರ್ ೨೦೧೭ರ ಒಳಗೆ ಸದರಿ ಕಾಮಗಾರಿಗಳ ಶೇಕಡ ಎಷ್ಟು ಕಾಮಗಾರಿಗಳು ಪೂರ್ಣಗೊಳ್ಳಬೇಕಿತ್ತು; (ವಿವರ ನೀಡುವುದು)

(ಉ) ಪ್ರಸ್ತುತ ಎಷ್ಟು ಕಾಮಗಾರಿಗಳು ಪೂರ್ಣಗೊಂಡಿರುತ್ತದೆ; (ವಿವರ ನೀಡುವುದು)

(ಊ) ಸದರಿ ಕಾಮಗಾರಿಗಳು ನಿಗದಿತ ಅವಧಿಯೊಳಗೆ ಪೂರ್ಣಗೊಳ್ಳದೆ ಆಮೆಗತಿಯಲ್ಲಿ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಾಮಗಾರಿ ಶೀಘ್ರವಾಗಿ ಪೂರ್ಣಗೊಳ್ಳಲು ಯಾವ ರೀತಿಯ ಸೂಕ್ತ ಕ್ರಮ ಕೈಗೊಳ್ಳಲಾಗಿದೆ?

## ಪುರಸಭೆಗಳ ವಾರ್ಷಿಕ ಅನುದಾನ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೪೧೭೬ (೪೭೦೯) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಎಷ್ಟು ನಗರ ಸಭೆ, ಪುರ ಸಭೆ ಮತ್ತು ಪಟ್ಟಣ ಪಂಚಾಯತಿಗಳು ಇರುತ್ತವೆ; ಪಟ್ಟಣ ಪಂಚಾಯತಿಯ ರಚನೆಗೆ ಇರುವ

ಮಾನದಂಡ ಏನು; ಪಟ್ಟಣ ಪಂಚಾಯತಿಯಿಂದ ಪುರಸಭೆಗೆ ಮತ್ತು ಪುರ ಸಭೆಯಿಂದ ನಗರ ಸಭೆಗೆ ಉನ್ನತೀಕರಣಕ್ಕೆ ಇರುವ ಮಾನದಂಡಗಳು ಏನು;

(ಆ) ಪೌರಾಡಳಿತ ಇಲಾಖೆಯು ಕೇಂದ್ರ ಸರ್ಕಾರದ ಯಾವ ಯಾವ ಯೋಜನೆಗಳಲ್ಲಿ ವಾರ್ಷಿಕ ಅನುದಾನವನ್ನು ಪಡೆಯುತ್ತಿದೆ; ಕಳೆದ ಮೂರು ವರ್ಷಗಳಲ್ಲಿ ಕೇಂದ್ರ ಸರ್ಕರದಿಂದ ಪಡೆದಿರುವ ಅನುದಾನವೆಷ್ಟು ಮತ್ತು ಬಳಕೆ ಮಾಡಿರುವ ಅನುದಾನ ಎಷ್ಟು;

(ಇ) ನೈಟ್ ಶೆಲ್ಟರ್ (ರಾತ್ರಿ ವಸತಿ) ಅಡಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಯಾವ ಯಾವ ಸ್ಥಳೀಯ ಸಂಸ್ಥೆಗಳಿಗೆ ಪೌರಾಡಳಿತ ಇಲಾಖೆಯು ಎಷ್ಟೆಷ್ಟು ಅನುದಾನಗಳನ್ನು ಬಿಡುಗಡೆ ಮಾಡಿರುತ್ತದೆ; ಸದರಿ ಅನುದಾನವನ್ನು ಸ್ಥಳೀಯ ಸಂಸ್ಥೆಗಳು ಪೂರ್ಣ ಪ್ರಮಾಣದಲ್ಲಿ ಬಳಕೆ ಮಾಡಿರುತ್ತದೆಯೇ;

(ಈ) ಪ್ರಧಾನ ಮಂತ್ರಿ ಆವಾಜ್ ಯೋಜನೆ, ರಾಜೀವ್ ಆವಾಜ್ ಯೋಜನೆ, ರಾಜೀವ್ ರಿನ್ಸ್ ಯೋಜನೆ, ನಮ್ಮ ಮನೆ ಯೋಜನೆ ಹಾಗೂ CMSMTDP ಯೋಜನೆಯಡಿಯಲ್ಲಿ ತುಮಕೂರು ಜಿಲ್ಲೆಯ ಸ್ಥಳೀಯ ಸಂಸ್ಥೆಗಳಿಗೆ ಕಳೆದ ನಾಲ್ಕು ವರ್ಷಗಳಲ್ಲಿ ಎಷ್ಟೆಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ಮತ್ತು ಬಳಕೆ ಮಾಡಲಾಗಿದೆ; ಚಿಕ್ಕನಾಯಕನಹಳ್ಳಿ ಪುರಸಭೆಗೆ ಈ ಯೋಜನೆಯಲ್ಲಿ ೦೧.೦೪.೨೦೧೩ ರಿಂದ ಇಲ್ಲಿಯವರೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ಮತ್ತು ಬಳಕೆ ಮಾಡಲಾಗಿದೆ; (ವಿವರಗಳನ್ನು ನೀಡುವುದು)

(ಉ) ಸ್ಥಳೀಯ ಸಂಸ್ಥೆಗಳ ಚುನಾವಣಾ ತಕರಾರುಗಳಿಗೆ ಸಂಬಂಧಪಟ್ಟಂತೆ ಜಿಲ್ಲಾಧಿಕಾರಿಗಳ ಕಛೇರಿಗಳಲ್ಲಿ ಕಳೆದ ನಾಲ್ಕು ವರ್ಷಗಳಲ್ಲಿ ಬಾಕಿಯಿರುವ ಪ್ರಕರಣಗಳು ಎಷ್ಟು; ವಿಲೇವಾರಿಯಾಗಿರುವ ಪ್ರಕರಣಗಳು ಎಷ್ಟು? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ಕೋಮುಗಲಭೆ ಮಾಹಿತಿ ಕೋರಿ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೪೧೭೭ (೪೭೦೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ೦೧.೦೪.೨೦೧೩ ರಿಂದ ಇಲ್ಲಿಯವರೆಗೆ ಕೋಮು ಗಲಭೆಯ ಪ್ರಕರಣಗಳು ಎಷ್ಟು ದಾಖಲಾಗಿರುತ್ತವೆ; ಇವುಗಳಲ್ಲಿ ಎಷ್ಟು ಪ್ರಕರಣಗಳಲ್ಲಿ ಆರೋಪ ಪಟ್ಟಿ ದಾಖಲಿಸಲಾಗಿದೆ; ಎಷ್ಟು ಪ್ರಕರಣಗಳು ವಿಚಾರಣಾ ಹಂತದಲ್ಲಿ ಇರುತ್ತವೆ; ಬಾಕಿ ಇರುವ ಪ್ರಕರಣಗಳು ಎಷ್ಟು;

(ಆ) ೦೧.೦೪.೨೦೧೩ ರಿಂದ ಇಲ್ಲಿಯವರೆಗೆ ಕೋಮು ಗಲಭೆಯ ಪ್ರಕರಣಗಳಲ್ಲಿ ಯಾವ ಯಾವ ಸಮುದಾಯದ ಎಷ್ಟು ಮಂದಿ ಮೃತರಾಗಿರುತ್ತಾರೆ; ಇವುಗಳಲ್ಲಿ ಎಷ್ಟು ಮಂದಿಗೆ ರಾಜ್ಯ ಸರ್ಕಾರ ಪರಿಹಾರ ಧನವನ್ನು ನೀಡಿರುತ್ತದೆ; ಬಾಕಿ ಎಷ್ಟು ಮಂದಿಗೆ ಪರಿಹಾರ ಧನ ನೀಡಬೇಕಾಗಿರುತ್ತದೆ;

(ಇ) ಕರ್ನಾಟಕ ರಾಜ್ಯದಲ್ಲಿ ರಸ್ತೆ ಅಪಘಾತಗಳಲ್ಲಿ ಎಷ್ಟು ಹಿಟ್ ಅಂಡ್ ರನ್ ಪ್ರಕರಣಗಳು ಕಳೆದ ನಾಲ್ಕು ವರ್ಷಗಳಲ್ಲಿ ದಾಖಲಾಗಿರುತ್ತವೆ; ಇವುಗಳಲ್ಲಿ ಪತ್ತೆಯಾದ ಮತ್ತು ಪತ್ತೆಯಾಗದ ಪ್ರಕರಣಗಳು ಎಷ್ಟು;

(ಈ) ಕಳೆದ ನಾಲ್ಕು ವರ್ಷಗಳಲ್ಲಿ ದಾಖಲಾದ ರಸ್ತೆ ಅಪಘಾತಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ದ್ವಿಚಕ್ರ ವಾಹನದ ಅಪಘಾತಗಳ ಸಂಖ್ಯೆ ಎಷ್ಟು; ಎಷ್ಟು ಪ್ರಕರಣಗಳಲ್ಲಿ ಹೆಲ್ಮೆಟ್ ರಹಿತವಾಗಿ ಅಪಘಾತಗಳು ಸಂಭವಿಸಿರುತ್ತವೆ;

(ಉ) ಕಳೆದ ನಾಲ್ಕು ವರ್ಷಗಳಲ್ಲಿ ರಾಜ್ಯದ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿರುವ ನಾಪತ್ತೆಯಾದವರ ಪ್ರಕರಣಗಳೆಷ್ಟು; ಇವುಗಳಲ್ಲಿ ಮಹಿಳೆಯರ ಮತ್ತು ಅಪ್ರಾಪ್ತ ಮಕ್ಕಳ ಸಂಖ್ಯೆ ಎಷ್ಟು; ಪತ್ತೆಯಾದವರ ಸಂಖ್ಯೆ ಎಷ್ಟು;

(ಊ) ತುಮಕೂರು ಜಿಲ್ಲೆ, ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಇರುವ ಪೊಲೀಸ್ ಠಾಣೆಗಳ ಸಂಖ್ಯೆ ಎಷ್ಟು; ಈ ಪೊಲೀಸ್ ಠಾಣೆಗಳಲ್ಲಿ ಪೂರ್ಣ ಮಟ್ಟದ ಸಿಬ್ಬಂದಿ ನೇಮಕವಾಗಿದೆಯೇ; ಇಲ್ಲದೇ ಹೋದಲ್ಲಿ, ಖಾಲಿ ಇರುವ ಸಿಬ್ಬಂದಿ ಎಷ್ಟು; ಈ ಪೊಲೀಸ್ ಠಾಣೆಗಳಿಗೆ ಸ್ವಂತ ಕಟ್ಟಡಗಳನ್ನು ಒದಗಿಸಲಾಗಿದೆಯೇ; ಒದಗಿಸದಿದ್ದಲ್ಲಿ, ಯಾವಾಗ ರಾಜ್ಯ ಸರ್ಕಾರವು ಸ್ವಂತ ಕಟ್ಟಡಗಳನ್ನು ಒದಗಿಸುತ್ತದೆ?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕಾಮಗಾರಿಗಳ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೪೧೭೮ (೪೭೦೬) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ೦೧/೦೪/೨೦೧೬ರಿಂದ ಇಲ್ಲಿಯವರೆಗೆ ಮುಖ್ಯಮಂತ್ರಿಗಳ ನಗರೋತ್ಥಾನ ಯೋಜನೆಯಡಿಯಲ್ಲಿ ವೈಟ್ ಟಾಪಿಂಗ್ ರಸ್ತೆ ನಿರ್ಮಾಣಕ್ಕೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ಹಾಗೂ ಎಷ್ಟು ಹಣ ಖರ್ಚು ಮಾಡಲಾಗಿದೆ;

(ಆ) ೦೧/೦೪/೨೦೧೬ರಿಂದ ಇಲ್ಲಿಯವರೆಗೆ ವೈಟ್ ಟಾಪಿಂಗ್ ರಸ್ತೆ ನಿರ್ಮಾಣಕ್ಕೆ ಎಷ್ಟು ಟೆಂಡರ್‌ಗಳನ್ನು ಕರೆಯಲಾಗಿದೆ; ಇವುಗಳಲ್ಲಿ

ಅಂಗೀಕೃತವಾಗಿರುವ ಟೆಂಡರ್‌ದಾರರು ನಿಗಧಿತ ಸಮಯದಲ್ಲಿ ಕಾಮಗಾರಿ ಪೂರ್ಣಗೊಳಿಸಿರುತ್ತಾರೆಯೇ; ಪೂರ್ಣಗೊಳ್ಳದಿರುವ ಕಾಮಗಾರಿಗಳೆಷ್ಟು; ವಿವರಗಳನ್ನು ಒದಗಿಸುವುದು;

(ಇ) ೦೧/೦೪/೨೦೧೬ ರಿಂದ ಇಲ್ಲಿಯವರೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಎಷ್ಟು ವಾರ್ಡ್ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಇವುಗಳ ಮೇಲೆ ವಿನಿಯೋಗಿಸಿರುವ ಹಣವೆಷ್ಟು; ಕಾಮಗಾರಿ ವಿಫಲತೆಯ ಕುರಿತು ಎಷ್ಟು ದೂರುಗಳು ದಾಖಲಾಗಿರುತ್ತವೆ; ಈ ದೂರುಗಳ ಮೇಲೆ ಕೈಗೊಂಡಿರುವ ಕ್ರಮಗಳೇನು;

(ಈ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಜೆ.ಪಿ.ನಗರದ ಡಾಲರ್ಸ್ ಕಾಲೋನಿಯಲ್ಲಿ (ಜೆ.ಪಿ. ನಗರ ೪ನೇ ಹಂತ) ೦೧/೦೪/೨೦೧೬ ರಿಂದ ಇಲ್ಲಿಯವರೆಗೆ ಎಷ್ಟು ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಇವುಗಳಲ್ಲಿ ವಾರ್ಡ್ ಕಾಮಗಾರಿಗಳೆಷ್ಟು; ಈ ಕಾಮಗಾರಿಗಳ ಗುಣಮಟ್ಟದ ದೃಢೀಕರಣವನ್ನು ಪಡೆದು, ಗುತ್ತಿಗೆದಾರರಿಗೆ ಹಣ ಪಾವತಿ ಮಾಡಲಾಗಿದೆಯೇ;

(ಉ) ಜೆ.ಪಿ.ನಗರದ ಡಾಲರ್ಸ್ ಕಾಲೋನಿಯಲ್ಲಿ (ಜೆ.ಪಿ.ನಗರ, ೪ನೇ ಹಂತ) ರಾಜ ಕಾಲುವೆ ಒತ್ತುವರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ; ಬಂದಿದ್ದಲ್ಲಿ, ಇದನ್ನು ತೆರವುಗೊಳಿಸಲು ಸರ್ಕಾರ ಏನು ಕ್ರಮಗಳನ್ನು ಕೈಗೊಂಡಿರುತ್ತದೆ;

(ಊ) ವಾರ್ಡ್ ಕಾಮಗಾರಿಗೆ ಗುತ್ತಿಗೆದಾರರ ವೈಫಲ್ಯದಿಂದ ಜೆ.ಪಿ.ನಗರದ ಡಾಲರ್ಸ್ ಕಾಲೋನಿಯಲ್ಲಿ ೧೫/೦೮/೨೦೧೭ರಂದು ವಾಸದ ಮನೆಗಳಿಗೆ ಮತ್ತು ಅಪಾರ್ಟ್‌ಮೆಂಟ್‌ಗಳಿಗೆ ನೀರು ನುಗ್ಗಿ ಸ್ಥಳೀಯರಿಗೆ ನಷ್ಟವುಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸದರಿ ಲೋಪದ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ?

# ನಗರಾಭಿವೃದ್ಧಿ ಯೋಜನೆಗಳ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೪೧೭೯ (೪೭೦೭) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರವು ೦೧/೦೪/೨೦೧೩ ರಿಂದ ಇಲ್ಲಿಯವರಗೆ ರಾಜೀವ್ ಆವಾಜ್ ಯೋಜನೆಯಡಿ ಎಷ್ಟು ನಗರಗಳಲ್ಲಿ ಮನೆಗಳ ನಿರ್ಮಾಣವನ್ನು ಮಾಡಿರುತ್ತದೆ; (ವಿವರ ನೀಡುವುದು) ನಿರ್ಮಾಣ ಹಂತದಲ್ಲಿರುವ ಮನೆಗಳೆಷ್ಟು;

(ಆ) ನಗರಾಭಿವೃದ್ಧಿ ಇಲಾಖೆಗೆ ಕೇಂದ್ರ ಸರ್ಕಾರದ ಯಾವ ಯಾವ ಯೋಜನೆಗಳಲ್ಲಿ ಕಳೆದ ನಾಲ್ಕು ವರ್ಷಗಳಲ್ಲಿ ಅನುದಾನಗಳ ಹಂಚಿಕೆ ಆಗಿರುತ್ತದೆ; ಇವುಗಳಲ್ಲಿ ರಾಜ್ಯ ಸರ್ಕಾರವು ಎಷ್ಟು ಅನುದಾನಗಳನ್ನು ಬಳಕೆ ಮಾಡಿಕೊಂಡಿರುತ್ತದೆ;

(ಇ) ನಗರಾಭಿವೃದ್ಧಿ ಇಲಾಖೆಯು ಮುಖ್ಯಮಂತ್ರಿಗಳ ಸಣ್ಣ ಮತ್ತು ಮಧ್ಯಮ ಪಟ್ಟಣಗಳ ಅಭಿವೃದ್ಧಿ ಯೋಜನೆಯಲ್ಲಿ ರಾಜ್ಯದ ಎಷ್ಟು ಪೌರ ಸಂಸ್ಥೆಗಳಿಗೆ ಕಳೆದ ನಾಲ್ಕು ವರ್ಷಗಳಲ್ಲಿ ಅನುದಾನವನ್ನು ಬಿಡುಗಡೆ ಮಾಡಿರುತ್ತದೆ; ಈ ಯೋಜನೆಯಲ್ಲಿ ೦೧/೦೪/೨೦೧೩ ರಿಂದ ಇಲ್ಲಿಯವರೆಗೆ ತುಮಕೂರು ಜಿಲ್ಲೆಯಲ್ಲಿ ಎಷ್ಟು ಅನುದಾನ ಬಿಡುಗಡೆಯಾಗಿರುತ್ತದೆ; ಈ ಅನುದಾನ ಸಂಪೂರ್ಣ ಬಳಕೆಯಾಗಿರುತ್ತದೆಯೇ; ಬಳಕೆಯಾಗಿದ್ದಲ್ಲಿ, ವಿವರಗಳನ್ನು ನೀಡುವುದು;

(ಈ) ಘನ ತ್ಯಾಜ್ಯ ನಿರ್ವಹಣೆಗೆ ೨೦೧೬–೧೭ನೇ ಸಾಲಿನಲ್ಲಿ ರಾಜ್ಯ ಸರ್ಕಾರವು ಜಿಲ್ಲಾವಾರು ಹಂಚಿಕೆ ಮಾಡಿರುವ ಅನುದಾನ ಎಷ್ಟು; ಈ ಅನುದಾನವನ್ನು ತುಮಕೂರು ಜಿಲ್ಲೆಯಲ್ಲಿ ಎಷ್ಟು ಹಂಚಿಕೆ ಮಾಡಲಾಗಿದೆ ಮತ್ತು ಎಷ್ಟು ಪ್ರಮಾಣದಲ್ಲಿ ಬಳಕೆ ಮಾಡಿಕೊಂಡಿರುತ್ತದೆ;

(ಉ) ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಮೂಲಕ ತುಮಕೂರು ಜಿಲ್ಲೆಯಲ್ಲಿ ಎಷ್ಟು ನಗರಗಳಲ್ಲಿ ನೀರು ಸರಬರಾಜು ಮತ್ತು ಒಳಚರಂಡಿ ಯೋಜನೆ ಕಾಮಗಾರಿಗಳನ್ನು ಕಳೆದ ನಾಲ್ಕು ವರ್ಷಗಳಲ್ಲಿ ಕೈಗೊಳ್ಳಲಾಗಿರುತ್ತದೆ; ಸದರಿ ಕಾಮಗಾರಿಗಳು ಪೂರ್ಣಗೊಂಡಿದೆಯೇ; ಬಾಕಿ ಇರುವ ಕಾಮಗಾರಿಗಳೆಷ್ಟು?

## ಬೆಂಗಳೂರು ನಗರ ಜಿಲ್ಲೆಯಲ್ಲಿರುವ ಕೆರೆಗಳ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) –**

೪೧೮೦ (೪೭೩೮) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆಯ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಒಳಗೊಂಡಂತೆ ಎಷ್ಟು ಜೀವಂತ ಕೆರೆಗಳು ಇದೆ; ಈ ಕೆರೆಗಳ ಪೈಕಿ ಸರ್ಕಾರ/ ಬಿ.ಡಿ.ಎ/ ಬಿ.ಬಿ.ಎಂ.ಪಿ./ಕೆರೆ ಪ್ರಾಧಿಕಾರ/ಅರಣ್ಯ ಇಲಾಖೆಗೆ ಸೇರಿದ ಕೆರೆಗಳ ಹೆಸರಿನೊಂದಿಗೆ, ಕಂದಾಯ ಇಲಾಖೆಯ ದಾಖಲಾತಿಗಳಂತೆ, ಅಳತೆಯೊಂದಿಗೆ ಸಂಪೂರ್ಣವಾದ ಮಾಹಿತಿ ನೀಡುವುದು;

(ಆ) ಬೆಂಗಳೂರು ನಗರ ಜಿಲ್ಲೆಯಲ್ಲಿ ಒತ್ತುವರಿಯಾಗಿರುವ ಕೆರೆಗಳ ಸಂಖ್ಯೆ ಹಾಗೂ ಅಳತೆಯೊಂದಿಗೆ ಸಂಪೂರ್ಣವಾದ ಮಾಹಿತಿ ನೀಡುವುದು;

(ಇ) ಬೆಂಗಳೂರು ನಗರ ಜಿಲ್ಲೆಯಲ್ಲಿರುವ ನಿರ್ಜೀವ ಕೆರೆಗಳ ಪ್ರದೇಶಗಳನ್ನು ಬೇರೆ ಬೇರೆ ಉದ್ದೇಶಕ್ಕೆ ಬೌತಿಕವಾಗಿ ಪರಿವರ್ತನೆಯಾಗಿರುವ ಕೆರೆಗಳ ಸಂಖ್ಯೆ ಎಷ್ಟು; ಹೆಸರು ಹಾಗೂ ಅಳತೆಯೊಂದಿಗೆ ನಿರ್ಜೀವ ಕೆರೆಗಳು ಗ್ರಾಮ ನಕ್ಷೆ/ಕಂದಾಯ ದಾಖಲೆಗಳಂತೆ ಸಂಪೂರ್ಣವಾದ ಮಾಹಿತಿ ನೀಡುವುದು;

(ಈ) ಜೀವಂತ ಕೆರೆಗಳಿಗೆ ತ್ಯಾಜ್ಯ ನೀರು/ ಒಳಚರಂಡಿ ನೀರು ಸೇರುತ್ತಿರುವ ಕೆರೆಗಳ ಸಂಖ್ಯೆ ಎಷ್ಟು; ಈ ಕುರಿತು ಇಲಾಖೆಗಳಿಂದ ತೆಗೆದುಕೊಂಡ ಕ್ರಮದ ಬಗ್ಗೆ ಮಾಹಿತಿ ನೀಡುವುದು;

(ಉ) ಬೆಳ್ಳಂದೂರು, ವರ್ತೂರು ಹಾಗೂ ಹಲಸೂರು ಈ ಎಲ್ಲಾ ಕೆರೆಗಳನ್ನು ಕಳೆದ ೩ ವರ್ಷಗಳಿಂದ ಅಭಿವೃದ್ಧಿ ಪಡಿಸಲು ಇಲಾಖೆಗಳು ಕೈಗೊಂಡಿರುವ ಕ್ರಮಗಳು ಏನು; ಈ ಕೆರೆಗಳನ್ನು ವೈಜ್ಞಾನಿಕವಾಗಿ ನಿರ್ವಹಣೆ ಮಾಡಲು ಕ್ರಮ ಕೈಗೊಂಡಿದೆಯೇ: ಕೈಗೊಂಡಿದ್ದಲ್ಲಿ, ಸಂಪೂರ್ಣವಾದ ಮಾಹಿತಿ ನೀಡುವುದು?

## ಬೆಂಗಳೂರು ನಗರದ ಪೊಲೀಸ್ ಠಾಣೆ ಹಾಗೂ ಸಿಬ್ಬಂದಿ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) –**

ಳ೧ಲ೧ (ಳ೭೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಎಷ್ಟು ಪೊಲೀಸ್ ಠಾಣೆಗಳು ಇದೆ: (ವಿವರ ನೀಡುವುದು)

(ಆ) ಪೊಲೀಸ್ ಆಯುಕ್ತರು, ಬೆಂಗಳೂರು ನಗರ ರವರ ವ್ಯಾಪ್ತಿಗೆ ಬರುವ ಪೊಲೀಸ್ ಠಾಣೆಗಳ ಸಂಖ್ಯೆ ಎಷ್ಟು; (ವಿವರಗಳನ್ನು ನೀಡುವುದು)

(ಇ) ಪೊಲೀಸ್ ಆಯುಕ್ತರು, ಬೆಂಗಳೂರು ನಗರ ರವರ ವ್ಯಾಪ್ತಿಗೆ ಒಳಪಡದ ಪೊಲೀಸ್ ಠಾಣೆಗಳ ಸಂಖ್ಯೆ ಎಷ್ಟು; ಅದರ ವ್ಯಾಪ್ತಿಯು ಯಾವ SP ಕಛೇರಿಯ ವ್ಯಾಪ್ತಿಗೆ ಬರುತ್ತದೆಂಬ ಸಂಪೂರ್ಣವಾದ ವಿವರಗಳನ್ನು ನೀಡುವುದು;

(ಈ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಗೆ ಬರುವ ಸಂಚಾರ ಪೊಲೀಸ್ ಸಿಬ್ಬಂದಿ ಅಥವಾ ವ್ಯವಸ್ಥೆ ಇಲ್ಲದೇ ಇರುವ ಪೊಲೀಸ್ ಠಾಣೆಗಳ ಸಂಖ್ಯೆ ಎಷ್ಟು; (ವಿವರಗಳನ್ನು ನೀಡುವುದು)

(ಉ) ಬೆಂಗಳೂರು ಜನಸಂಖ್ಯೆಗೆ ಅನುಗುಣವಾಗಿ ಪೊಲೀಸ್ ಸಿಬ್ಬಂದಿಯ ಸಂಖ್ಯೆಯನ್ನು ನೀಡುವುದು; ಈಗಿನ ಸಿಬ್ಬಂದಿ ಸಂಖ್ಯೆ ಮಾಹಿತಿ ನೀಡುವುದರ ಜೊತೆಗೆ ಸರ್ಕಾರ ಕೈಗೊಂಡ ಮಾಹಿತಿಗಳನ್ನು ನೀಡುವುದು;

(ಊ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸಂಚಾರಿ ವ್ಯವಸ್ಥೆಯನ್ನು ಉತ್ತಮಪಡಿಸಲು ತೆಗೆದುಕೊಂಡ ಕ್ರಮ/ಯೋಜನೆಗಳ ಬಗ್ಗೆ ಸಂಪೂರ್ಣವಾದ ಮಾಹಿತಿ ನೀಡುವುದು?

## ಹೈದ್ರಾಬಾದ್–ಕರ್ನಾಟಕ ೩೭೧ (ಜೆ) ಹುದ್ದೆಗಳು ಭರ್ತಿ ಮಾಡುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೪೧೮೨ (೪೬೩೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್–ಕರ್ನಾಟಕ ೩೭೧(ಜೆ) ಅನುಷ್ಠಾನಕ್ಕೆ ಬಂದಾಗಿನಿಂದ ಆ ಭಾಗದ ಜಿಲ್ಲೆಗಳಲ್ಲಿ ಮೀಸಲಿರಿಸಿದ ಹುದ್ದೆಗಳ ವಿವರಗಳು ಮತ್ತು ಭರ್ತಿ ಮಾಡಿದ ಹುದ್ದೆಗಳ ವಿವರಗಳನ್ನು ಸ್ಪಷ್ಟವಾಗಿ ನೀಡುವುದು;

(ಆ) ಖಾಲಿ ಇರುವ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು; ಇಲ್ಲಿಯವರೆಗೆ ಭರ್ತಿ ಮಾಡದೆ ಇರಲು ಕಾರಣಗಳೇನು? (ಜಿಲ್ಲಾವಾರು, ಇಲಾಖಾವಾರು ಮತ್ತು ಹುದ್ದೆವಾರು ವಿವರ ನೀಡುವುದು)

## ಬೀದರ್ ಪ್ರಾಧಿಕಾರದಲ್ಲಿ
## ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೪೧೮೩ (೪೬೪೨) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಒಟ್ಟು ಎಷ್ಟು ಹುದ್ದೆಗಳಿವೆ; (ಪದನಾಮಗಳೊಂದಿಗೆ ಮಾಹಿತಿ ನೀಡುವುದು)

(ಆ) ಈ ಪ್ರಾಧಿಕಾರದಲ್ಲಿ ಎಷ್ಟು ವರ್ಷಗಳಿಂದ ಹುದ್ದೆಗಳು ಖಾಲಿ ಇವೆ; ಈ ಹುದ್ದೆಗಳನ್ನು ಯಾವ ಕಾಲ ಮಿತಿಯೊಳಗೆ ಭರ್ತಿ ಮಾಡಿಕೊಳ್ಳಲಾಗುವುದು; (ಪೂರ್ಣ ಮಾಹಿತಿ ನೀಡುವುದು)

(ಇ) ಈ ಪ್ರಾಧಿಕಾರದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳೆಷ್ಟು? (ಪದನಾಮಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

## ಗ್ರಾಮ ಪಂಚಾಯಿತಿಗಳನ್ನು
## ಪಟ್ಟಣ್ಣ ಪಂಚಾಯಿತಿಗಳಾಗಿ ಮೇಲ್ದರ್ಜೆಗೇರಿಸಿದ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೪೧೮೪ (೪೬೪೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿನ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳಾಗಿ ಮೆಲ್ದರ್ಜೆಗೇರಿಸಿದ ಪಂಚಾಯಿತಿಗಳಾವುವು; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಪೌರಾಡಳಿತ ಇಲಾಖೆಯಿಂದ ಸದರಿ ಪಟ್ಟಣ ಪಂಚಾಯಿತಿಗಳಿಗೆ ಒದಗಿಸಿರುವ ಸಿಬ್ಬಂದಿಗಳೇಷ್ಟು; (ಹುದ್ದೆವಾರು ಹಾಗೂ ಪಂಚಾಯಿತಿವಾರು ವಿವರ ನೀಡುವುದು)

(ಇ) ಕಳೆದ ೦೩ ವರ್ಷಗಳಲ್ಲಿ ಈ ಜಿಲ್ಲೆಯ ವ್ಯಾಪ್ತಿಯ ಪಟ್ಟಣ ಪಂಚಾಯಿತಿಗಳಿಗೆ ಒದಗಿಸಿರುವ ಅನುದಾನ ಎಷ್ಟು? (ಪಂಚಾಯಿತಿವಾರು, ವರ್ಷಾವಾರು, ಯೋಜನೆಗಳವಾರು ಸಂಪೂರ್ಣ ಮಾಹಿತಿ ನೀಡುವುದು)

## ಸಿಂಧುತ್ವ ಪ್ರಮಾಣ ಪತ್ರದ ಕುರಿತು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೪೧೮೫ (೪೬೪೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಒಂದು ಹುದ್ದೆಯಲ್ಲಿ ಜಾತಿ ಮೀಸಲಾತಿಯಲ್ಲಿ ಆಯ್ಕೆಗೊಂಡ ಅಭ್ಯರ್ಥಿಯ 'ಸಿಂಧುತ್ವ ಪ್ರಮಾಣ ಪತ್ರ' ವಿತರಿಸಿದ ನಂತರ ಹುದ್ದೆಗೆ ಸೇರುವ ನಿಯಮ ಇರುವುದು ನಿಜವೇ;

(ಆ) ಒಂದು ವೇಳೆ ಈ ಮೇಲಿನ ಅಭ್ಯರ್ಥಿಯು ಆ ಹುದ್ದೆಗಿಂತ ದೊಡ್ಡ ಹುದ್ದೆಗೆ 'ಜಾತಿ ಮೀಸಲಾತಿಯಲ್ಲಿ' ಆಯ್ಕೆಗೊಂಡರೆ ಪುನಃ ಮತ್ತೊಮ್ಮೆ "ಸಿಂಧುತ್ವ ಪ್ರಮಾಣ ಪತ್ರ" ತೆಗೆಸಬೇಕಾದ ಅವಶ್ಯಕತೆ ಇರುತ್ತದೆಯೇ; ಅಥವಾ ಹಿಂದಿನ ನೇಮಕಾತಿ ಪ್ರಾಧಿಕಾರದಿಂದ ಪ್ರಸ್ತುತ ನೇಮಕಾತಿ ಪ್ರಾಧಿಕಾರವು ಸಿಂಧುತ್ವ ಪ್ರಮಾಣ ಪತ್ರ ತರಿಸಿಕೊಳ್ಳುವುದೇ; ಇದರ ಕುರಿತು ಸೂಕ್ತ ನಿಯಮಗಳ ಬಗ್ಗೆ ಮಾಹಿತಿ ನೀಡುವುದು;

(ಇ) ಒಂದು ವೇಳೆ ಮುನಃ ಸಿಂಧುತ್ವ ಪ್ರಮಾಣ ಪತ್ರ ತೆಗೆಸಬೇಕಾದರೆ ಈಗಾಗಲೇ ಪಡೆದಿರುವ 'ಸಿಂಧುತ್ವ ಪ್ರಮಾಣ ಪತ್ರಕ್ಕೆ' ಮಾನ್ಯತೆಯುಂಟೇ; ಹಿಂದಿನ ಸಿಂಧುತ್ವ ಪ್ರಮಾಣ ಪತ್ರವನ್ನು ಹೊಸ ನೇಮಕಾತಿಗೆ ಪರಿಗಣಿಸಬಾರದೇಕೆ? (ಇದರ ಬಗ್ಗೆ ಪೂರ್ಣ ಮಾಹಿತಿ ನೀಡುವುದು)

## ಕಾರ್ಯದರ್ಶಿಗಳ ರಾಜ್ಯ ಪ್ರವಾಸ ಕುರಿತು

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೮೬ (೪೬೫೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಪ್ರಮುಖ ಹುದ್ದೆಗಳಲ್ಲಿ ಇರುವ ವಿವಿಧ ಇಲಾಖೆಗಳ ಪ್ರಧಾನ ಕಾರ್ಯದರ್ಶಿಗಳು, ಸರ್ಕಾರದ ಕಾರ್ಯದರ್ಶಿಗಳು ಅಥವಾ ಐ.ಎ.ಎಸ್., ಐ.ಪಿ.ಎಸ್. ಶ್ರೇಣಿಯ ಅಧಿಕಾರಿಗಳು ಇಲಾಖಾವಾರು ಪ್ರಗತಿ ಪರಿಶೀಲನೆ ನಡೆಸುವುದರ ಜೊತೆಗೆ ಕಳೆದ ೬ ತಿಂಗಳುಗಳಲ್ಲಿ ರಾಜ್ಯದಲ್ಲಿ ಕೈಗೊಂಡಿರುವ ಜಿಲ್ಲಾ ಪ್ರವಾಸದ ಸಂಪೂರ್ಣ ವಿವರ ಒದಗಿಸುವುದು?

## ಸರ್ಜಾಪುರ ರಿಂಗ್ ರಸ್ತೆಯ ಕುರಿತು

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೮೭ (೪೬೫೭) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಗೆ ಬರುವ ಸರ್ಜಾಪುರ ರಿಂಗ್ ರಸ್ತೆಯಿಂದ ಸೆಂಟ್ರಲ್ ಮಾಲ್‌ಗೆ ಹೋಗುವ ಸರ್ವಿಸ್ ರಸ್ತೆಯನ್ನು ೨೦೧೩ ರಿಂದ ೨೦೧೭ರವರೆಗೆ ಎಷ್ಟು ಬಾರಿ ಡಾಂಬರೀಕರಣ ಮಾಡಲಾಗಿದೆ; (ಮಾಹಿತಿ ಒದಗಿಸುವುದು)

(ಆ) ಸದರಿ ರಸ್ತೆ ಡಾಂಬರೀಕರಣಕ್ಕಾಗಿ ಬಳಕೆಯಾಗಿರುವ ಅನುದಾನ ಎಷ್ಟು; (ಮಾಹಿತಿ ಒದಗಿಸುವುದು)

(ಇ) ಕಳೆದ ಳ ವರ್ಷಗಳಲ್ಲಿ ಸದರಿ ರಸ್ತೆಯ ನಿರ್ವಹಣೆಗಾಗಿ ಬಳಕೆಯಾಗಿರುವ ಅನುದಾನವೆಷ್ಟು? (ಮಾಹಿತಿ ಒದಗಿಸುವುದು)

## ಚಿತ್ರದುರ್ಗ ಪಟ್ಟಣದ ಅಭಿವೃದ್ಧಿ ಕುರಿತು

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

ಳ೧೮೮ (ಳ೬೩೬) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಪಟ್ಟಣದಲ್ಲಿ ವಿವಿಧ ಅನುದಾನದಡಿ ನಗರಸಭೆಯು ಕಳೆದ ೫ ವರ್ಷಗಳಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳು ಯಾವುವು; ಸದರಿ ಕಾಮಗಾರಿಗಳಿಗೆ ವಿವಿಧ ಯೋಜನೆಗಳಡಿ ಬಳಕೆಯಾಗುತ್ತಿರುವ ಅನುದಾನ ಎಷ್ಟು; (ಮಾಹಿತಿ ಒದಗಿಸುವುದು)

(ಆ) ಅಭಿವೃದ್ಧಿ ಕಾಮಗಾರಿಗಳು ಪೂರ್ಣಗೊಂಡಿದೆಯೇ; ಪ್ರಸ್ತುತ ಯಾವ ಹಂತದಲ್ಲಿವೆ; (ಕಾಮಗಾರಿವಾರು ವಿವರ ನೀಡುವುದು)

(ಇ) ಅಭಿವೃದ್ಧಿ ಕಾಮಗಾರಿಗಳಲ್ಲಿ ಅಕ್ರಮ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ಒದಗಿಸುವುದು)

## ಸ್ಮಾರ್ಟ್ ಸಿಟಿ ಬಗ್ಗೆ

**ಶ್ರೀ ಸೋಮಣ್ಣ ಮ ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

ಳ೧೮೯ (ಳ೭ಳ೫) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಡಿ ಸ್ಮಾರ್ಟ್ ಸಿಟಿ ಕಾಮಗಾರಿ ಆರಂಭಕ್ಕೆ ರಾಜ್ಯ ಸರ್ಕಾರವೇ ಅಡ್ಡಿಯಾಗಿರುವುದು ನಿಜವೇ;

(ಆ) ಸ್ಮಾರ್ಟ್ ಸಿಟಿ ಯೋಜನೆಗೆ ಆಯ್ಕೆಯಾಗಿರುವ ರಾಜ್ಯದ ನಗರಗಳು ಯಾವುವು;

(ಇ) ಸ್ಮಾರ್ಟ್ ಸಿಟಿ ಯೋಜನೆಗೆ ಕೇಂದ್ರ ಸರ್ಕಾರವು ಮಂಜೂರು ಮಾಡಿರುವ ಹಾಗೂ ಇದುವರೆಗೂ ಬಿಡುಗಡೆ ಮಾಡಿರುವ ಅನುದಾನವೆಷ್ಟು;

(ಈ) ಸ್ಮಾರ್ಟ್ ಸಿಟಿ ಕಾಮಗಾರಿಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡುವ ಅಧಿಕಾರ ಹಂಚಿಕೆ ಪ್ರಸ್ತಾವಕ್ಕೆ ಸರ್ಕಾರ ಅನುಮೋದನೆ ನೀಡದೆ ವಿಳಂಬ ನೀತಿಯನ್ನು ಅನುಸರಿಸುತ್ತಿರುವುದು ನಿಜವೇ; ವಿಳಂಬಕ್ಕೆ ಕಾರಣಗಳೇನು;

(ಉ) ವಿಳಂಬ ನೀತಿಯನ್ನು ಬಿಟ್ಟು ಸ್ಮಾರ್ಟ್ ಸಿಟಿ ಯೋಜನೆಯ ಸಮರ್ಪಕ ಅನುಷ್ಠಾನಕ್ಕೆ ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು?

## ಸರ್ಕಾರಿ ಕಛೇರಿಗಳಲ್ಲಿ ಕಡತ ವಿಲೇವಾರಿ ವಿಳಂಬವಾಗಿರುವ ಬಗ್ಗೆ

**ಶ್ರೀ ಸೋಮಣ್ಣ ಮ ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೪೧೯೦ (೪೭೪೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಕಛೇರಿಗಳಲ್ಲಿ ಪತ್ರ ವ್ಯವಹಾರಗಳು, ಕಡತ ವಿಲೇವಾರಿ ಅತೀ ವಿಳಂಬವಾಗಿರುವುದರೊಂದಿಗೆ ಸರ್ಕಾರಿ ವ್ಯವಸ್ಥೆ ಮತ್ತು ಆಡಳಿತ ಯಂತ್ರ ಜಡ್ಡುಕಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ;

(ಆ) ಸರ್ಕಾರಿ/ಅರೆ ಸರ್ಕಾರಿ ಕಛೇರಿಗಳಲ್ಲಿ ಆಡಳಿತವನ್ನು ಕಾಗದರಹಿತಗೊಳಿಸಿ ಪಾರದರ್ಶಕತೆ ತರಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಇ–ಆಫೀಸ್ ತಂತ್ರಾಂಶವನ್ನು ಗ್ರಾಮ ಪಂಚಾಯತ್‌ಗಳು ಸೇರಿದಂತೆ ಎಲ್ಲಾ ಜಿಲ್ಲಾ–ತಾಲ್ಲೂಕು ಮಟ್ಟದ ಕೆಳಹಂತದ ಕಛೇರಿಗಳಲ್ಲಿ ಅನುಷ್ಠಾನಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಸರ್ಕಾರದ ಯಾವ ಇಲಾಖೆ, ನಿಗಮ, ಕಛೇರಿಗಳನ್ನು ಕಾಗದರಹಿತ ಕಛೇರಿಗಳನ್ನಾಗಿ ಮಾಡಲಾಗಿದೆ; ಯಾವ ಯಾವ ಇಲಾಖೆ, ನಿಗಮ, ಸಂಸ್ಥೆ ಒಟ್ಟು ಎಷ್ಟು ಸೇವೆಗಳನ್ನು ಸಕಾಲ ವ್ಯಾಪ್ತಿಗೆ ತರಲಾಗಿದೆ; ಮುಂದೆ ಯಾವ ಯಾವ ಇಲಾಖೆಯ ಯಾವ ಸೇವೆಗಳನ್ನು ಸಕಾಲ ವ್ಯಾಪ್ತಿಗೆ ತರಲಾಗುವುದು;

(ಈ) ನಿಷ್ಕ್ರೀಯಗೊಂಡ ಸರ್ಕಾರಿ ಆಡಳಿತ ಯಂತ್ರಕ್ಕೆ ಚುರುಕು ಮುಟ್ಟಿಸಲು ಇ–ಆಫೀಸ್ ತಂತ್ರಾಂಶವನ್ನು ಪ್ರತೀ ಕಛೇರಿಗೆ ಅಳವಡಿಸಲು ಸಕಾಲ ಸೇವೆಗಳನ್ನು ಪ್ರತಿಯೊಂದು ಇಲಾಖೆಗೆ ವಿಸ್ತರಿಸಲು ಹಾಗೂ ಪ್ರತಿ ಇಲಾಖೆಯ ಎಲ್ಲಾ ಆದೇಶದ ಪ್ರತಿ ಮತ್ತು ಕಡತಗಳ ಚಲನವಲನಗಳನ್ನು ಆನ್–ಲೈನ್ ಮೂಲಕ ಲಭ್ಯವಾಗಿಸುವುದರೊಂದಿಗೆ ಪಾರದರ್ಶಕ ಭ್ರಷ್ಟಾಚಾರ ಮುಕ್ತ ಆಡಳಿತ ವ್ಯವಸ್ಥೆ ಸಾರ್ವಜನಕರಿಗೆ ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?

## ಹಾವೇರಿ ಜಿಲ್ಲೆಯಲ್ಲಿರುವ
## ಪುರಸಭೆ/ನಗರಸಭೆ/ಪಟ್ಟಣ ಪಂಚಾಯತ್‌ಗಳ ಬಗ್ಗೆ

**ಶ್ರೀ ಸೋಮಣ್ಣ ಮ ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೪೭೯೧ (೪೪೭೯) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯಲ್ಲಿರುವ ಪುರಸಭೆ/ನಗರಸಭೆ/ಪಟ್ಟಣ ಪಂಚಾಯಿತಿಗಳಿಗೆ ವಿವಿಧ ಯೋಜನೆಯಡಿಯಲ್ಲಿ ೨೦೧೬–೧೭ನೇ ಸಾಲಿನಲ್ಲಿ ಒದಗಿಸಿರುವ ಅನುದಾನವೆಷ್ಟು; (ವಿವರ ನೀಡುವುದು)

(ಆ) ಅನುದಾನವನ್ನು ಒದಗಿಸಲು ಬಾಕಿ ಇರುವ ಮೊತ್ತವನ್ನು ಆ ಸಂಸ್ಥೆಗಳಿಗೆ ಯಾವಾಗ ಒದಗಿಸಲಾಗುವುದು; ಪ್ರತ್ಯೇಕವಾಗಿ ಪ್ರತಿಯೊಂದಕ್ಕೂ ವಿವರ ನೀಡುವುದು;

(ಇ) ಸರಿಯಾದ ಸಮಯಕ್ಕೆ ಅನುದಾನವನ್ನು ನೀಡದೆ ಇರುವುದರಿಂದ ಕಾಮಗಾರಿಗಳು ಪೂರ್ಣಗೊಳ್ಳದೆ ಅಲ್ಲಿನ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆ;

(ಈ) ಪ್ರಸ್ತುತ ಗಂಭೀರವಾದ ಬರಗಾಲ ಇರುವುದರಿಂದ ಹಾವೇರಿ ಜಿಲ್ಲೆಯಲ್ಲಿ ಬರುವ ಸ್ಥಳೀಯ ಸಂಸ್ಥೆಗಳಲ್ಲಿ ಕುಡಿಯುವ ನೀರಿಗಾಗಿ ತೀವ್ರತರಹ ತೊಂದರೆ ಇರುವುದರಿಂದ ಮುಂಜಾಗ್ರತಾ ಕ್ರಮವಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? (ಹಾವೇರಿ ಜಿಲ್ಲೆಗೆ ಸಂಬಂಧಿಸಿದಂತೆ ಸ್ಥಳೀಯ ಸಂಸ್ಥೆಗಳ ವಿವರ ನೀಡುವುದು)

## ರಾಜ್ಯದ ಸ್ವಾತಂತ್ರ್ಯ ಯೋಧರ ಪಿಂಚಣಿ ಬಗ್ಗೆ

**ಶ್ರೀ ಸೋಮಣ್ಣ ಮ ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೪೯೧೨ (೪೬೫೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರಾಜ್ಯ ಸ್ವಾತಂತ್ರ್ಯ ಯೋಧರ ಪಿಂಚಣಿ ಹಾಗೂ ಕುಟುಂಬ ಪಿಂಚಣಿ ಪಡೆಯುತ್ತಿರುವವರ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಈ ಪಿಂಚಣಿಯನ್ನು ಯೋಧರಿಗೆ ಯಾವ ರೀತಿ ವಿತರಣೆ ಮಾಡಲಾಗುತ್ತದೆ; ರಾಷ್ಟ್ರೀಕೃತ ಬ್ಯಾಂಕಿನಿಂದ ವಯೋವೃದ್ಧರಾದ ಈ ಯೋಧರಿಗೆ ಪಿಂಚಣಿ ಪಡೆಯುವುದು ಕಷ್ಟದಾಯಕವಾಗಿದ್ದು, ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ; ಇದನ್ನು ಸರಳೀಕರಣಗೊಳಿಸುವ ಯೋಚನೆ ಸರ್ಕಾರಕ್ಕೆ ಇದೆಯೇ;

(ಇ) ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನ ಉಡಿಕೇರಿ ಗ್ರಾಮದಲ್ಲಿ ಸ್ವಾತಂತ್ರ್ಯ ಯೋಧರ ಮನೆ ಮನೆಗೆ ಪಿಂಚಣಿ ವಿತರಣೆ ಮಾಡಿದ ಪ್ರಾಯೋಗಿಕ ಕಾರ್ಯಕ್ರಮದ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ;

(ಈ) ಅಖಿಲ ಭಾರತ ಸ್ವಾತಂತ್ರ್ಯ ಹೋರಾಟಗಾರರ ಸಮಿತಿ, ನ್ಯೂ ದೆಹಲಿ ಇದರ ರಾಜ್ಯ ಯುವ ವಿಭಾಗವು ಮನೆ ಮನೆಗೆ ಪಿಂಚಣಿ ಯೋಜನೆ ವಿತರಣೆ ಮಾಡಿದ್ದು ಇದನ್ನು ರಾಜ್ಯಾದ್ಯಂತ ಸರಳೀಕರಣಗೊಳಿಸುವ ಯೋಚನೆ ಸರ್ಕಾರಕ್ಕೆ ಇದೆಯೇ?

## ಪರಿಪೆರಲ್ ರಿಂಗ್ ರಸ್ತೆ ಯೋಜನೆ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೪೯೧೩ (೪೬೧೧) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉದ್ದೇಶಿತ ಕೆಂಪೇಗೌಡ ಬಡಾವಣೆಯಿಂದ ಹಾದು ಹೋಗುವ ಮಾಗಡಿ ರಸ್ತೆ ಮತ್ತು ಮೈಸೂರು ರಸ್ತೆ ಸಂಪರ್ಕಿಸುವ ಪರಿಪೆರಲ್ ರಿಂಗ್ ರಸ್ತೆ ಯಾವ ಹಂತದಲ್ಲಿದೆ; ಇದರ ಒಟ್ಟು ಯೋಜನೆ ಎಷ್ಟು; ಈ ರಸ್ತೆಯನ್ನು ಎಷ್ಟು ಅಗಲ ಹಾಗೂ ಎಷ್ಟು ಉದ್ದದ ರಸ್ತೆ ನಿರ್ಮಿಸಲು ಉದ್ದೇಶಿಸಲಾಗಿದೆ;

(ಆ) ಪರಿಪೆರಲ್ ರಿಂಗ್ ರಸ್ತೆಗೆ ಭೂಸ್ವಾಧೀನ ಪ್ರಕ್ರಿಯೆ ಮತ್ತು ಪರಿಹಾರ ಪ್ರಕ್ರಿಯೆ ಹೇಗೆ ನಡೆಯುತ್ತಿದೆ; ಅಂದರೆ ಪರಿಹಾರವನ್ನು ಹಣದ ರೂಪದಲ್ಲಿ ನೀಡಲಾಗುತ್ತದೆಯೋ ಅಥವಾ ಅನುಪಾತ ನಿವೇಶನವನ್ನು ನೀಡಲಾಗುತ್ತದೆಯೋ;

(ಇ) ಈ ರಸ್ತೆಯು ಸಾರ್ವಜನಿಕರ ಬಳಕೆಗೆ ಯಾವಾಗಿನಿಂದ ಲಭ್ಯವಾಗಲಿದೆ?

## ಕೆಂಪೇಗೌಡ ಬಡಾವಣೆಗೆ ಸ್ವಾಧೀನಪಡಿಸಿಕೊಂಡ ಜಮೀನು ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೪೧೯೪ (೪೬೯೮) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಾಡಪ್ರಭು ಕೆಂಪೇಗೌಡ ಬಡಾವಣೆಗಾಗಿ ಸ್ವಾಧೀನಪಡಿಸಿಕೊಂಡ ಜಮೀನು ಎಷ್ಟು; ಯಾವಾಗ ಸ್ವಾಧೀನಪಡಿಸಲಾಯಿತು; (ವಿವರ ನೀಡುವುದು)

(ಆ) ಸ್ವಾಧೀನಪಡಿಸಿಕೊಂಡ ಜಮೀನಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ವಿತರಿಸಬಹುದಾದ ನಿವೇಶನಗಳು ಎಷ್ಟು; ಯಾವ ಯಾವ ಅಳತೆ ನಿವೇಶನಗಳನ್ನು ರಚಿಸಿ ವಿತರಿಸಲಾಗಿದೆ; ಇನ್ನೂ ವಿತರಿಸದಿದ್ದರೆ, ಯಾವಾಗ ವಿತರಿಸಲಾಗುತ್ತದೆ;

(ಇ) ಈಗಾಗಲೇ ಸ್ವಾಧೀನಪಡಿಸಿಕೊಂಡ ಭೂಮಿಯಿಂದ ನಿವೇಶನ ವಿತರಿಸಲು ಆಕಾಂಕ್ಷಿ ಸಾರ್ವಜನಿಕರಿಂದ ಹಣ ಸಂಗ್ರಹಿಸಲಾಗಿರುವುದೇ; ಸಂಗ್ರಹಿಸಿದ್ದರೆ, ಎಷ್ಟು ಹಣ ಸಂಗ್ರಹಿಸಲಾಗಿದೆ; ಎಲ್ಲಾ ಅಳತೆಯ ನಿವೇಶನಗಳಿಂದ ಬಂದ ಹಣವೆಷ್ಟು;

(ಈ) ನಿವೇಶನಗಳಿಗಾಗಿ ಅರ್ಜಿ ಸಲ್ಲಿಸಲು ಮತ್ತೊಮ್ಮೆ ಸಮಯಾವಕಾಶ ನೀಡಬಹುದೇ;

(ಉ) ಅಧಿಸೂಚನೆಯ ನಂತರ ಕೈ ಬಿಡಲಾದ ಜಮೀನಿನ ವಿವರ ನೀಡುವುದು?

## ನಗರದಲ್ಲಿರುವ ಕಟ್ಟಡಗಳ ಗುತ್ತಿಗೆ ವಿವರ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೪೧೯೫ (೪೬೯೭) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ನೃಪತುಂಗ ರಸ್ತೆಯಲ್ಲಿರುವ ಸೇಂಟ್ ಮಾರ್ಥಾಸ್ ಆಸ್ಪತ್ರೆಯನ್ನು ಗುತ್ತಿಗೆ ಅವಧಿಗೆ ನೀಡಲಾಗಿದೆಯೇ;

(ಆ) ಗುತ್ತಿಗೆ ನೀಡಿದ್ದರೆ, ಯಾರಿಗೆ ನೀಡಲಾಗಿದೆ; ಎಷ್ಟು ವರ್ಷಕ್ಕೆ ನೀಡಲಾಗಿದೆ;

(ಇ) ಬೆಂಗಳೂರಿನ ವಸಂತ ನಗರದಲ್ಲಿರುವ ಮೌಂಟ್ ಕಾರ್ಮೆಲ್ ಕಾಲೇಜಿನ ಮಾಲೀಕತ್ವ ಯಾರದ್ದು; ಇದು ಸರ್ಕಾರಿ ಸ್ವತ್ತಾಗಿದ್ದಲ್ಲಿ, ಖಾಸಗಿ ಒಡೆತನಕ್ಕೆ ಗುತ್ತಿಗೆ ನೀಡಲಾಗಿದೆಯೇ; ನೀಡಿದ್ದರೆ, ಯಾರಿಗೆ ನೀಡಲಾಗಿದೆ; ಎಷ್ಟು ವರ್ಷಕ್ಕೆ ನೀಡಲಾಗಿದೆ; ಈಗಾಗಲೇ ಅವಧಿ ಮುಗಿದಿದ್ದರೆ, ಮೌಂಟ್ ಕಾರ್ಮೆಲ್ ಕಾಲೇಜು ಕಟ್ಟಡದ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು?

## ರಾಜ್ಯದಲ್ಲಿ ಕಳೆದ ೧೦ ವರ್ಷಗಳಿಂದ ಭಯೋತ್ಪಾದನೆ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೪೧೯೬ (೪೬೩೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಹತ್ತು ವರ್ಷಗಳಿಂದ ರಾಜ್ಯದಲ್ಲಿ ನಡೆದ ಭಯೋತ್ಪಾದಕ ಬಾಂಬ್ ಪ್ರಕರಣಗಳ ಸಂಖ್ಯೆ ಎಷ್ಟು;

(ಆ) ಪ್ರತಿ ಬಾಂಬ್ ಪ್ರಕರಣವನ್ನು ತನಿಖೆ ನಡೆಸುತ್ತಿರುವ ಸಂಸ್ಥೆಗಳು ಯಾವುವು;

(ಇ) ಎಷ್ಟು ಬಾಂಬ್ ಪ್ರಕರಣಗಳು ಪತ್ತೆಯಾಗಿವೆ; ಪತ್ತೆಯಾದ ಪ್ರಕರಣಗಳಲ್ಲಿ ಯಾವ ಯಾವ ಸಂಘಟನೆಗಳು, ವ್ಯಕ್ತಿಗಳು ಕಂಡು ಬಂದಿವೆ;

(ಈ) ಇನ್ನೂ ಪತ್ತೆಯಾಗದ ಪ್ರಕರಣಗಳು ಯಾವುವು; ಪತ್ತೆಯಾಗದ ಪ್ರಕರಣಗಳ ತನಿಖೆ ಯಾವ ಹಂತದಲ್ಲಿವೆ? (ಪ್ರಕರಣವಾರು ವಿವರ ನೀಡುವುದು)

## ರಾಜ್ಯದ ವಿವಿಧ ಇಲಾಖೆಗಳಲ್ಲಿ ಮಂಜೂರಾದ, ನೇಮಕಗೊಂಡ ಹಾಗೂ ಖಾಲಿ ಹುದ್ದೆಗಳ ಮಾಹಿತಿ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೪೮೯೭ (೪೭೩೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದಲ್ಲಿ ಇರುವ ವಿವಿಧ ಇಲಾಖೆಗಳು ಎಷ್ಟು; (ವಿವರ ನೀಡುವುದು)

(ಆ) ಪ್ರತಿ ಇಲಾಖೆಗೆ ಮಂಜೂರಾದ A.B.C.D ಕೇಡರಿನ ಹುದ್ದೆಗಳೆಷ್ಟು; ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಇರುವ ಹುದ್ದೆಗಳೆಷ್ಟು; ವರ್ಗಾವಾರು ಅಂಕಿ ಸಂಖ್ಯೆ ನೀಡುವುದು;

(ಇ) ಸರ್ಕಾರ ಕಳೆದ ೩ ವರ್ಷಗಳಲ್ಲಿ ಪ್ರತಿ ಇಲಾಖೆಯಲ್ಲಿ ಎಷ್ಟು ಹುದ್ದೆಗಳನ್ನು ನೇಮಕ ಮಾಡಿಕೊಂಡಿರುವುದು; (ಇಲಾಖಾವಾರು, ವರ್ಗವಾರು ಮಾಹಿತಿ ನೀಡುವುದು)

(ಈ) ಖಾಲಿ ಇರುವ ಇನ್ನುಳಿದ ಹುದ್ದೆಗಳನ್ನು ತುಂಬಿಕೊಳ್ಳಲು ಸರ್ಕಾರ ನಿರ್ಧಾರ ಕೈಗೊಂಡಿರುವುದೆ; ಹಾಗಿದ್ದಲ್ಲಿ, ವಿವರವಾದ ಮಾಹಿತಿ ನೀಡುವುದು?

## ಹುಬ್ಬಳ್ಳಿ–ಧಾರವಾಡ ಅವಳಿ ನಗರದ B.R.T.S ಕಾಮಗಾರಿ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೪೯೧೮ (೪೭೩೮) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್‌ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹುಬ್ಬಳ್ಳಿ–ಧಾರವಾಡ ಅವಳಿ ನಗರಗಳ ಮಧ್ಯ ನಡೆಯುತ್ತಿರುವ B.R.T.S ರಸ್ತೆ ಯೋಜನೆಗೆ ಸರ್ಕಾರ ಯಾವಾಗ ಅನಮೋದನೆ ಕೊಟ್ಟಿದೆ; ಈ ಯೋಜನೆಗೆ ನಿಗದಿಪಡಿಸಿದ ಅಂದಾಜು ವೆಚ್ಚ ಎಷ್ಟು;

(ಆ) ಈ B.R.T.S ರಸ್ತೆ ಕಾಮಗಾರಿ ಯಾವಾಗ ಪ್ರಾರಂಭಿಸಲಾಯಿತು;

(ಇ) ಈ ಕಾಮಗಾರಿಯನ್ನು ಯಾರಿಗೆ ಗುತ್ತಿಗೆ ನೀಡಲಾಗಿದೆ; ಇಲ್ಲಿಯವರೆಗೆ ಅವರಿಗೆ ಬಿಡುಗಡೆ ಮಾಡಿದ ಅನುದಾನವೆಷ್ಟು;

(ಈ) ಇಂತಹದೇ ಯೋಜನೆಯನ್ನು ರಾಜ್ಯದ ಬೇರೆ ಯಾವುದೇ ಮಹಾನಗರದಲ್ಲಿ ಕಾರ್ಯಗತ ಮಾಡಲಾಗಿದೆಯೇ; ಹಾಗಿದ್ದಲ್ಲಿ, ಈ ವ್ಯವಸ್ಥೆಯ ಕುರಿತು ಜನರ ಪ್ರತಿಕ್ರಿಯೆ ಏನಿದೆ ಎಂಬುದರ ಮಾಹಿತಿ ಸಂಗ್ರಹಿಸಲಾಗಿದೆಯೇ; ಹಾಗಿದ್ದರೆ, ವಿವರಣೆ ನೀಡುವುದು;

(ಉ) ಈ ರಸ್ತೆಯನ್ನು ಸಾರ್ವಜನಿಕರಿಗೆ ಯಾವಾಗ ಮುಕ್ತಗೊಳಿಸಲಾಗುವುದು?

## ಪೊಲೀಸ್ ಇಲಾಖೆಯ ಅಧಿಕಾರಿಗಳ ವೃಂದವಾರು ಮಾಹಿತಿ ಬಗ್ಗೆ

**ಶ್ರೀ ಸಂಯುದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) –**

೪೧೯೯ (೪೬೬೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಪೊಲೀಸ್ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಕ್ಸಿಕ್ಯೂಟಿವ್ ಮತ್ತು ನಾನ್ ಎಕ್ಸಿಕ್ಯೂಟಿವ್ ಅಲ್ಪಸಂಖ್ಯಾತರ ಅಧಿಕಾರಿಗಳ ಸಂಖ್ಯೆ ಎಷ್ಟು; (ವೃಂದವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ನಾನ್ ಎಕ್ಸಿಕ್ಯೂಟಿವ್‌ನಲ್ಲಿ ಹೆಚ್ಚು ಅಲ್ಪಸಂಖ್ಯಾತರು ಕಾರ್ಯ ನಿರ್ವಹಿಸುತ್ತಿರುವುದಕ್ಕೆ ಕಾರಣಗಳೇನು? (ಸಂಪೂರ್ಣ ಮಾಹಿತಿ ನೀಡುವುದು)

## ಅಬಕಾರಿ ಇಲಾಖೆಯಲ್ಲಿನ ಬಡ್ತಿ ಅನ್ಯಾಯದ ಬಗ್ಗೆ

**ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) –**

೪೨೦೦ (೪೭೧೦) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಬಕಾರಿ ಇಲಾಖೆಯಲ್ಲಿ ಅಬಕಾರಿ ನಿರೀಕ್ಷಕರ ಹುದ್ದೆಯಿಂದ ಅಬಕಾರಿ ಉಪ ಅಧೀಕ್ಷಕರ (ಡಿವೈಎಸ್‌ಪಿ) ಹುದ್ದೆಗೆ ದಿನಾಂಕ:೨೯–೦೨–೨೦೧೩ ಮತ್ತು ಏಪ್ರಿಲ್–೨೦೧೬ರಲ್ಲಿ ಬಡ್ತಿಯನ್ನು ನೀಡುವ ವೇಳೆ ೩೭೧ (ಜೆ) ಅನುಚ್ಛೇದವನ್ನು ಅನ್ವಯಿಸದೆ ಮತ್ತು ತಾತ್ಕಾಲಿಕ ಸೇವಾ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸದೇ ದೋಷಪೂರಿತವಾಗಿ ಬಡ್ತಿಯನ್ನು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದರೆ, ಇದರಿಂದ ೩೭೧ (ಜೆ) ಮತ್ತು ಜೇಷ್ಠತಾ ಅಭ್ಯರ್ಥಿಗಳು ಬಡ್ತಿಯಿಂದ ವಂಚಿತರಾಗಿದ್ದು, ಅದನ್ನು ಯಾವ ಕಾಲಮಿತಿಯಲ್ಲಿ ಸರಿಪಡಿಸುವಿರಿ;

(ಇ) ತಪ್ಪು ಮಾಡಿದ ಅಧಿಕಾರಿಗಳ ವಿರುದ್ಧ ಯಾವ ಕಾಲಮಿತಿಯೊಳಗೆ ಯಾವ ಕ್ರಮವನ್ನು ಕೈಗೊಳ್ಳಲಾಗುವುದು? (ವಿವರ ನೀಡುವುದು)

## ಬೆಂಗಳೂರಿನಲ್ಲಿರುವ ಸ್ಕೈವಾಕ್‌ಗಳ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೪೨೦೧ (೪೭೩೪) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಇರುವ ಒಟ್ಟು ಸ್ಕೈವಾಕ್‌ಗಳ ಸಂಖ್ಯೆ ಎಷ್ಟು;

(ಆ) ಸ್ಕೈವಾಕ್ ನಿರ್ಮಾಣಕ್ಕೆ ಇರುವ ಮಾನದಂಡವೇನು;

(ಇ) ಪಾದಚಾರಿಗಳ ಸುರಕ್ಷತೆಗಾಗಿ ನಿರ್ಮಾಣವಾಗಬೇಕಿದ್ದ ಸ್ಕೈವಾಕ್‌ಗಳು, ಜಾಹೀರಾತು ಏಜೆನ್ಸಿಗಳ ಲಾಭದ ಉದ್ದೇಶಕ್ಕಾಗಿ ನಿರ್ಮಾಣವಾಗುತ್ತಿರುವುದು ನಿಜವೇ;

(ಈ) ಹಣಕಾಸಿನ ಸಮಸ್ಯೆಯಿದೆ ಎಂಬ ಕಾರಣಕ್ಕೆ ಸಾರ್ವಜನಿಕ ಸಹಭಾಗಿತ್ವದಲ್ಲಿ ಅವುಗಳನ್ನು ನಿರ್ಮಿಸಲು ಸರ್ಕಾರ ತೀರ್ಮಾನಿಸಿದೆಯೇ; ಇಲ್ಲಿಯವರೆಗೆ ಸಾರ್ವಜನಿಕರ ಸಹಭಾಗಿತ್ವದಲ್ಲಿ ನಿರ್ಮಿಸಲಾಗಿರುವ ಸ್ಕೈವಾಕ್‌ಗಳ ಸಂಖ್ಯೆ ಎಷ್ಟು; ಎಲ್ಲೆಲ್ಲಿ ನಿರ್ಮಿಸಲಾಗಿದೆ; (ವಿವರ ನೀಡುವುದು)

(ಉ) ಗುತ್ತಿಗೆ ಪಡೆದ ಏಜೆನ್ಸಿಗಳ ಲಾಭದ ಉದ್ದೇಶದಿಂದ ಪಾದಚಾರಿಗಳಿಗೆ ಅಗತ್ಯವಿರುವ ಸ್ಥಳಗಳ ಬದಲು ಜಾಹೀರಾತು ಪ್ರದರ್ಶನಕ್ಕೆ ಅನುಕೂಲವಾಗುವ ಸ್ಥಳಗಳಲ್ಲಿ ಸ್ಕೈವಾಕ್‌ಗಳ ನಿರ್ಮಾಣ ಮಾಡಲು ಸ್ಥಳ ಆಯ್ಕೆ ಮಾಡಿ ಕೊಟ್ಟಿರುವುದು ಮತ್ತು ಏಜೆನ್ಸಿಗಳ ಪ್ರಭಾವಕ್ಕೆ ಮಣಿದ ಪಾಲಿಕೆ ಅಧಿಕಾರಿಗಳು ಅನುಮತಿ ನೀಡುತ್ತಿರುವುದು ನಿಜವೆ;

(ಊ) ಪಾದಚಾರಿಗಳಿಗೆ ತೀವ್ರ ತೊಂದರೆಯಾಗುತ್ತಿರುವ ಪ್ರದೇಶಗಳಲ್ಲಿ ಸ್ಕೈವಾಕ್ ನಿರ್ಮಿಸುವಂತೆ ಸ್ಥಳ ಗುರುತಿಸುವವರು ಯಾರು;

ಋ) ಈ ಹಿಂದೆ ಇದ್ದ ಜಾಹೀರಾತು ಬಾಡಿಗೆ ಈಗ ತೆಗೆದು ಹಾಕಿರುವುದಕ್ಕೆ ಕಾರಣವೇನು ಮತ್ತು ೩೦ ವರ್ಷಗಳ ಕಾಲ ಜಾಹೀರಾತು ಅಳವಡಿಸಿಕೊಳ್ಳಲು ಪಾಲಿಕೆ ಅನುಮತಿ ನೀಡಿರುವುದರಿಂದ ಪಾಲಿಕೆ ಬೊಕ್ಕಸಕ್ಕೆ ನಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

## ಹಳೇ ವಾಹನಗಳ ವಿಲೇವಾರಿ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೪೨೦೨ (೪೭೪೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಕಳೆದ ೩ ವರ್ಷಗಳಲ್ಲಿ ಪೊಲೀಸ್ ಠಾಣೆಗಳ ಮುಂದೆ ವಿಲೇವಾರಿಯಾಗದೆ ರಾಶಿ ರಾಶಿ ನಿಂತಿರುವ ಹಳೇ ವಾಹನಗಳ ಸಂಖ್ಯೆ ಎಷ್ಟು; ಠಾಣಾವಾರು ವಿವರ ನೀಡುವುದು; (ದ್ವಿಚಕ್ರ, ತ್ರಿಚಕ್ರ ಮತ್ತು ನಾಲ್ಕು ಚಕ್ರ ವಾಹನಗಳ ವಿವರ ನೀಡುವುದು)

(ಆ) ಈ ವಾಹನಗಳನ್ನು ಯಾವ ಯಾವ ಅಪರಾಧ ಪ್ರಕರಣಗಳಲ್ಲಿ ಆರೋಪಿಗಳಿಂದ ವಶಪಡಿಸಿಕೊಳ್ಳಲಾಗಿದೆ; (ವಿವರ ನೀಡುವುದು)

(ಇ) ಈ ವಾಹನಗಳ ವಿಲೇವಾರಿಗೆ ಇರುವ ಕಾನೂನಿನ ಮಾನದಂಡವೇನು?

**ವಿಗ್ರಹಗಳ ಕಳವು ಪ್ರಕರಣಗಳು**

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೪೨೦೩ (೪೭೪೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ರಾಜ್ಯದ ಐತಿಹಾಸಿಕ ದೇವಾಲಯಗಳಿಂದ ವಿಗ್ರಹಗಳು ಕಳವಾದ ಪ್ರಕರಣಗಳ ಸಂಖ್ಯೆ ಎಷ್ಟು;

(ಆ) ಇದರಲ್ಲಿ ಪತ್ತೆಯಾದ ವಿಗ್ರಹಗಳ ಸಂಖ್ಯೆ ಎಷ್ಟು; ಅವು ಯಾವುವು;

(ಇ) ಒಟ್ಟಾರೆ ರಾಷ್ಟ್ರೀಯ ಸರಾಸರಿ ತೆಗೆದುಕೊಂಡಾಗ ಪ್ರಾಚೀನ ವಿಗ್ರಹ ಕಳವು ಪ್ರಕಣಗಳಲ್ಲಿ ರಾಜ್ಯದಲ್ಲಿ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು;

(ಈ) ಇದರಲ್ಲಿ ಪತ್ತೆಯಾದ ವಿಗ್ರಹಗಳ ಸಂಖ್ಯೆ ಎಷ್ಟು; ಅವು ಯಾವುವು;

(ಉ) ಪುರಾತನ ವಿಗ್ರಹಗಳಿಗೆ ಕಾಳಸಂತೆಯಲ್ಲಿ ಭಾರಿ ಬೇಡಿಕೆ ಇದ್ದು, ವಿದೇಶಗಳಲ್ಲಂತೂ ಇದಕ್ಕೆ ಭಾರಿ ಬೇಡಿಕೆಯಿದ್ದು ಕೋಟಿಗಟ್ಟಲೇ ಹಣಕೊಟ್ಟು ಇಂತಹ ವಿಗ್ರಹಗಳನ್ನು ಹೊಂದುವುದು ಪ್ರತಿಷ್ಠೆಯಾಗಿದ್ದು ಇಂತಹ ದಂಧೆ ನಡೆಸಲೆಂದೇ ಕಾಳಸಂತೆಕೋರರು ವೆಬ್ ಸೈಟ್‌ಗಳನ್ನು ರಚಿಸಿಕೊಂಡು ವಿಗ್ರಹಗಳ ಹರಾಜು ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ಭದ್ರತಾ ಸಿಬ್ಬಂದಿ ಕೊರತೆ ಕಾರಣ ಎಲ್ಲಾ ವಿಗ್ರಹಗಳ ಮೇಲೂ ನಿಗಾವಿಡಲಾಗುತ್ತಿಲ್ಲ ಎಂಬುದು ಪ್ರಾಚ್ಯವಸ್ತು ಮತ್ತು ಪುರಾತನ

ಇಲಾಖೆಯೂ ತನ್ನ ಅಸಹಾಯಕತೆ ವ್ಯಕ್ತಪಡಿಸುತ್ತಿದ್ದು, ರಾಜ್ಯದಲ್ಲಿ ಐತಿಹಾಸಿಕ ದೇವಾಲಯಗಳಲ್ಲಿನ ಪುರಾತನ ವಿಗ್ರಹಗಳ ಭದ್ರತೆಗೆ ಸರ್ಕಾರ ತೆಗೆದುಕೊಂಡ ಮುನ್ನೆಚರಿಕೆಯ ಕ್ರಮಗಳೇನು? (ವಿವರ ನೀಡುವುದು)

**ರಾಜ್ಯ ಸರ್ಕಾರಿ ನೌಕರರ**
**ನೂತನ ಪಿಂಚಣಿ ಯೋಜನೆ (ಎನ್.ಪಿ.ಎಸ್.) ಬಗ್ಗೆ**

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) –**

**ಮತ್ತು**

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೨೦೪ (೪೬೫೮+೪೬೭೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರಿ ನೌಕರರಿಗೆ ನೂತನ ಪಿಂಚಣಿ ಯೋಜನೆಯನ್ನು ಜಾರಿ ಮಾಡಲು ಕೇಂದ್ರ ಸರ್ಕಾರವು ಕಡ್ಡಾಯಗೊಳಿಸಿದೆಯೇ; ರಾಜ್ಯದಲ್ಲಿ ಎಷ್ಟು ಸರ್ಕಾರಿ ನೌಕರರು ಈ ಯೋಜನೆಗೆ ಒಳಪಡುತ್ತಾರೆ ಹಾಗೂ ಯಾವ ವರ್ಷದಿಂದ ಜಾರಿಗೆ ತರಲಾಗಿದೆ;

(ಆ) ಈ ಯೋಜನೆಯಲ್ಲಿ ನೌಕರರ ಹಣವನ್ನು ಎಲ್ಲಿ ಹೂಡಿಕೆ ಮಾಡಲಾಗುತ್ತಿದೆ; ಈ ಹಣಕ್ಕೆ ಭದ್ರತೆ ಇದೆಯೇ;

(ಇ) ಹಲವು ರಾಜ್ಯಗಳಲ್ಲಿ ಈ ಯೋಜನೆಯನ್ನು ರದ್ದುಗೊಳಿಸಿ, ಹಳೆ ಪಿಂಚಣಿ ಯೋಜನೆಯನ್ನು ಜಾರಿಗೆ ತಂದಿರುವಂತೆ ರಾಜ್ಯ ಸರ್ಕಾರಿ ನೌಕರರಿಗೆ ಜಾರಿ ಮಾಡಿರುವ ನೂತನ ಪಿಂಚಣಿ ಯೋಜನೆಯನ್ನು ಹಿಂಪಡೆದು ಹಳೆ ಪಿಂಚಣಿ ವ್ಯವಸ್ಥೆಯನ್ನು ಜಾರಿಗೆ ತರುವ ಬಗ್ಗೆ ಸರ್ಕಾರವು ವಹಿಸಿರುವ ಕ್ರಮಗಳೇನು?

## ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕು, ಕೊಪ್ಪ ಪೊಲೀಸ್ ಠಾಣಾ ವ್ಯಾಪ್ತಿಯ ದರೋಡೆ ಪ್ರಕರಣಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) –**

೪೨೦೫ (೪೬೭೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮದ್ದೂರು ತಾಲ್ಲೂಕು, ಕೊಪ್ಪ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕಳೆದ ಐದು ವರ್ಷಗಳಿಂದ ದಾಖಲಾದ ಒಟ್ಟು ಡಕಾಯಿತಿ ಮತ್ತು ದರೋಡೆ ಪ್ರಕರಣಗಳೆಷ್ಟು; (ವಿವರ ನೀಡುವುದು)

(ಆ) ಇದರಲ್ಲಿ ಇತ್ಯರ್ಥವಾದ ಪ್ರಕರಣಗಳೆಷ್ಟು; ಇತ್ಯರ್ಥವಾಗದೆ ಬಾಕಿ ಇರುವ ಪ್ರಕರಣಗಳೆಷ್ಟು;

(ಇ) ಬಾಕಿ ಪ್ರಕರಣಗಳನ್ನು ಶೀಘ್ರವಾಗಿ ಭೇದಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಇತ್ತೀಚೆಗೆ ಮದ್ದೂರಿನಿಂದ ಕೊಪ್ಪಗೆ ಹೋಗುವ ರಸ್ತೆಯಲ್ಲಿ ದರೋಡೆ ಪ್ರಕರಣಗಳು ಹೆಚ್ಚಾಗುತ್ತಿದ್ದು, ಇದನ್ನು ತಡೆಗಟ್ಟಲು ಪೊಲೀಸ್ ಇಲಾಖೆ ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಈ ರೀತಿ ದರೋಡೆ ಪ್ರಕರಣಗಳನ್ನು ತಡೆಗಟ್ಟಲು ಇಲಾಖೆಯು ಕೈಗೊಳ್ಳುವ ಕ್ರಮಗಳೇನು?

## ಸರ್ಕಾರಿ ಇಲಾಖೆಗಳಲ್ಲಿನ ಖಾಲಿ ಹುದ್ದೆ ಭರ್ತಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) –**

೪೨೦೬ (೪೬೫೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ಅಧೀನದಲ್ಲಿ ಬರುವ ಸರ್ಕಾರಿ ಇಲಾಖೆಗಳ ಸಂಖ್ಯೆ ಎಷ್ಟು;

(ಆ) ಈ ಇಲಾಖೆಗಳಲ್ಲಿ ಮಂಜೂರಾಗಿರುವ ಒಟ್ಟು ಹುದ್ದೆಗಳೆಷ್ಟು; ಭರ್ತಿಯಾಗಿರುವ ಹುದ್ದೆಗಳು ಎಷ್ಟು; ಮತ್ತು ಖಾಲಿ ಇರುವ ಹುದ್ದೆಗಳೆಷ್ಟು; (ವಿವರ ನೀಡುವುದು)

(ಇ) ಹುದ್ದೆಗಳು ಖಾಲಿ ಇರುವುದರಿಂದ ಸಿಬ್ಬಂದಿಗಳಿಗೆ ಕಾರ್ಯಭಾರ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಪಟ್ಟಣ ಪಂಚಾಯಿತಿ, ನಗರಸಭೆಗಳಲ್ಲಿ ಪೌರ ಕಾರ್ಮಿಕರ ಕೊರತೆ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೨೦೭ (೪೬೪೭) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸ್ಥಳೀಯ ಸಂಸ್ಥೆಗಳಾದ ಪಟ್ಟಣ ಪಂಚಾಯತ್, ನಗರಸಭೆ ಹಾಗೂ ಪುರಸಭೆಗಳ ಅಭಿವೃದ್ಧಿಯಲ್ಲಿ ಅಡ್ಡಿಯುಂಟಾಗುತ್ತಿರುವುದಕ್ಕೆ ಪೌರ ಕಾರ್ಮಿಕರ ಕೊರತೆಯು ಕೂಡ ಒಂದು ಕಾರಣವೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ನಗರಾಡಳಿತ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕೆಲಸ ಮಾಡಲು ಪೌರ ಕಾರ್ಮಿಕರ ಸಮಸ್ಯೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಾದರೇ; ಈ ಬಗ್ಗೆ ಸರ್ಕಾರವು ಕೈಗೊಂಡಿರುವ ಪರಿಹಾರ ಕ್ರಮವೇನು?

## ವಿವಿಧ ಬಗೆಯ ಕ್ರಿಮಿನಲ್ ಕೇಸುಗಳು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೪೨೦೮ (೪೬೮೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೧೫–೧೬, ೨೦೧೬–೧೭ ಹಾಗೂ ೨೦೧೭–೧೮ನೇ ಸಾಲುಗಳಲ್ಲಿ ದಾಖಲಾಗಿರುವ ವಿವಿಧ ಬಗೆಯ ಕ್ರಿಮಿನಲ್ ಕೇಸುಗಳು ಎಷ್ಟು; ಅವು ಯಾವುವು; (ವಿವರ ನೀಡುವುದು)

(ಆ) ಆ ಕೇಸುಗಳ ಪೈಕಿ ಎಷ್ಟರಲ್ಲಿ ೯೦ ದಿನಗಳೊಳಗೆ, ಒಂದು ವರ್ಷದ ಒಳಗೆ ಹಾಗೂ ಒಂದು ವರ್ಷದ ನಂತರ ಚಾರ್ಜ್‌ಶೀಟ್ ಹಾಕಲಾಗಿದೆ; ಎಷ್ಟು ಪ್ರಕರಣಗಳಲ್ಲಿ ಚಾರ್ಜ್‌ಶೀಟ್ ಹಾಕಿರುವುದಿಲ್ಲ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಚಾರ್ಜ್‌ಶೀಟ್ ಹಾಕಿದ ಎಷ್ಟು ಪ್ರಕರಣಗಳಲ್ಲಿ ವಿಚಾರಣೆ ಮುಗಿದಿದೆ; ಎಷ್ಟು ಪ್ರಕರಣಗಳಲ್ಲಿ ಇನ್ನೂವರೆಗೆ ವಿಚಾರಣೆ ಪ್ರಾರಂಭವಾಗಿರುವುದಿಲ್ಲ; (ತಾಲ್ಲೂಕುವಾರು/ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಶಿಕ್ಷೆಯಾಗದಿರುವ ಎಷ್ಟು ಪ್ರಕರಣಗಳಲ್ಲಿ ಅಪೀಲನ್ನು ದಾಖಲು ಮಾಡಲಾಗಿದೆ? (ತಾಲ್ಲೂಕುವಾರು/ಜಿಲ್ಲಾವಾರು ವಿವರ ನೀಡುವುದು)

## ಪೋಕ್ಸೋ ಕಾಯ್ದೆಯಡಿ ದಾಖಲಾದ ಪ್ರಕರಣಗಳು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೪೨೦೯ (೪೬೮೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಯಾವ ಯಾವ ತಾಲ್ಲೂಕುಗಳಲ್ಲಿ ೨೦೧೫–೧೬, ೨೦೧೬–೧೭ ಮತ್ತು ೨೦೧೭–೧೮ನೇ ಸಾಲುಗಳಲ್ಲಿ ಪೋಕ್ಸೋ ಕಾಯ್ದೆಯಡಿ ಮತ್ತು ಭಾರತೀಯ ದಂಡ ಸಂಹಿತೆ ಕಲಂ ೩೭೬ರ ಅಡಿ ಎಷ್ಟು ಪ್ರಕರಣಗಳು ದಾಖಲಾಗಿವೆ;

(ಆ) ಆ ಪ್ರಕರಣಗಳ ಪೈಕಿ ಎಷ್ಟರಲ್ಲಿ ಚಾರ್ಜ್‌ಶೀಟ್ ಹಾಕಲಾಗಿದೆ; ಎಷ್ಟು ಪ್ರಕರಣಗಳು ಇತ್ಯರ್ಥಗೊಂಡಿವೆ; ಎಷ್ಟು ಪ್ರಕರಣಗಳಲ್ಲಿ ಆರೋಪಿಗಳು ಖುಲಾಸೆಗೊಂಡಿರುತ್ತಾರೆ; ಎಷ್ಟು ಜನರಿಗೆ ಶಿಕ್ಷೆಯಾಗಿರುತ್ತದೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಎಷ್ಟು ಪ್ರಕರಣಗಳಲ್ಲಿ ಸಂತ್ರಸ್ತೆಯರಿಗೆ ಪರಿಹಾರ ನೀಡಲಾಗಿದೆ; ಎಷ್ಟು ಮೊಬಲಗನ್ನು ಪರಿಹಾರವಾಗಿ ನೀಡಲಾಗಿದೆ? (ಪ್ರಕರಣವಾರು ವಿವರ ನೀಡುವುದು)

## ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ಉದ್ಯಾನವನಗಳ ನಿರ್ಮಾಣ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೪೨೧೦ (೪೬೩೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ, ಸರ್ಕಾರ ಮತ್ತು ಸ್ಥಳೀಯ ಸಂಸ್ಥೆಗಳ ವತಿಯಿಂದ ಎಷ್ಟು ಉದ್ಯಾನವನಗಳನ್ನು ನಿರ್ಮಾಣ ಮಾಡಿ ಅಭಿವೃದ್ಧಿಪಡಿಸಲಾಗಿದೆ;

(ಆ) ಹಾಗಿದ್ದಲ್ಲಿ, ಎಷ್ಟು ಎಕರೆ ಭೂಮಿಯಲ್ಲಿ ಅಭಿವೃದ್ಧಿಪಡಿಸಲಾಗಿದೆ; ಈ ಉದ್ಯಾನವನಗಳಲ್ಲಿ ನಾಗರಿಕರಿಗೆ ಒದಗಿಸಿರುವ ಸೌಲಭ್ಯಗಳಾವುವು; (ತಾಲ್ಲೂಕುವಾರು ಮತ್ತು ಜಿಲ್ಲಾವಾರು ವಿವರ ನೀಡುವುದು)

(ಇ) ಈ ಉದ್ಯಾನವನಗಳ ಸಂರಕ್ಷಣೆಗಾಗಿ ಸರ್ಕಾರ ಮತ್ತು ಸ್ಥಳೀಯ ಸಂಸ್ಥೆಗಳು ಖರ್ಚು ಮಾಡುತ್ತಿರುವ ಹಣವೆಷ್ಟು? (ಉದ್ಯಾನವನವಾರು ವಿವರ ನೀಡುವುದು)

## ಸರ್ಕಾರಿ ನೌಕರರಿಗೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ ಕಡ್ಡಾಯಮಾಡುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೪೨೧೧ (೪೬೬೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ನೌಕರರು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕಾಗಿರುವುದು ಕಡ್ಡಾಯವೇ;

(ಆ) ಹಾಗಿದ್ದಲ್ಲಿ, ಇಲ್ಲಿಯವರೆಗೂ ಸದರಿ ಪರೀಕ್ಷೆಗೆ ಹಾಜರಾದ ನೌಕರರ ಸಂಖ್ಯೆ ಎಷ್ಟು; ಹಾಗೂ ಉತ್ತೀರ್ಣರಾದವರ ಸಂಖ್ಯೆ ಎಷ್ಟು;

(ಇ) ಸದರಿ ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ ಪ್ರೋತ್ಸಾಹ ಧನ ನೀಡಲು ಸರ್ಕಾರ ನಿರ್ಧರಿಸಿದೆಯೇ;

(ಈ) ನಿರ್ಧರಿಸಿದ್ದಲ್ಲಿ, ೨೦೧೨–೧೩ ರಿಂದ ಇಲ್ಲಿಯವರೆಗೂ ಎಷ್ಟು ನೌಕರರಿಗೆ ಪ್ರೋತ್ಸಾಹ ಧನ ನೀಡಲಾಗಿದೆ? (ವರ್ಷಾವಾರು ಮಾಹಿತಿ ನೀಡುವುದು)

# ರಾಜ್ಯದಲ್ಲಿ ವಿದೇಶಿ ಪ್ರಜೆಗಳು ಕಾನೂನು ಬಾಹಿರ ಕೃತ್ಯಗಳಲ್ಲಿ ತೊಡಗಿರುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೪೨೧೨ (೪೬೬೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿದೇಶಿ ಪ್ರಜೆಗಳು ಕಾನೂನು ಬಾಹಿರ ಕೃತ್ಯಗಳಲ್ಲಿ ತೊಡಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ೨೦೧೨ ರಿಂದ ಇಲ್ಲಿಯವರೆಗೆ ಅವರ ವಿರುದ್ಧ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ವರ್ಷಾವಾರು ಮಾಹಿತಿ ನೀಡುವುದು)

(ಇ) ವೀಸಾ ಅವಧಿ ಮುಗಿದಿದ್ದರೂ ಸಹ, ಅಕ್ರಮವಾಗಿ ನೆಲೆಸಿರುವ ವಿದೇಶಿ ಪ್ರಜೆಗಳ ಸಂಖ್ಯೆ ಎಷ್ಟು;

(ಈ) ಈ ಅಕ್ರಮ ವಲಸಿಗರನ್ನು ಗಡಿಪಾರು ಮಾಡಲು ಸರ್ಕಾರ ನಿರ್ಧರಿಸಿದೆಯೇ;

(ಉ) ನಿರ್ಧರಿಸಿದ್ದಲ್ಲಿ, ಇವರ ಗಡಿಪಾರಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಊ) ಇಲ್ಲಿಯವರೆಗೂ ಎಷ್ಟು ಜನ ಅಕ್ರಮ ವಲಸಿಗರನ್ನು ಗಡಿಪಾರು ಮಾಡಲಾಗಿದೆ?

## ರಾಜ್ಯದಲ್ಲಿ ಮಹಿಳೆ ಮತ್ತು ಮಕ್ಕಳ ನಾಪತ್ತೆ ಪ್ರಕರಣಗಳ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೪೨೧೩ (೪೬೬೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಹಿಳೆ ಮತ್ತು ಮಕ್ಕಳ ನಾಪತ್ತೆ ಪ್ರಕರಣ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ೨೦೧೨ ರಿಂದ ಇಲ್ಲಿಯವರೆಗೆ ದಾಖಲಾದ ನಾಪತ್ತೆ ಪ್ರಕರಣಗಳೆಷ್ಟು; (ಜಿಲ್ಲಾವಾರು, ವರ್ಷಾವಾರು ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಪ್ರಕರಣಗಳಿಗೆ ಸಂಬಂಧಿಸಿದಂತೆ ಪತ್ತೆಯಾದ ಹಾಗೂ ಪತ್ತೆಯಾಗದ ಪ್ರಕರಣಗಳೆಷ್ಟು; (ಜಿಲ್ಲಾವಾರು, ವರ್ಷಾವಾರು ಸಂಪೂರ್ಣ ವಿವರ ನೀಡುವುದು)

(ಈ) ಪತ್ತೆಯಾಗದ ಪ್ರಕರಣಗಳ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ರಾಜ್ಯ ಸರ್ಕಾರದ ಸೇವೆಯಲ್ಲಿರುವ ನೌಕರರ ವೇತನ ತಾರತಮ್ಯದ ಬಗ್ಗೆ

**ಶ್ರೀ ಡಿ.ಎಸ್.ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

**ಮತ್ತು**

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೪೨೧೪ (೪೬೨೯+೪೭೬೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರದ ಸೇವೆಯಲ್ಲಿರುವ ನೌಕರರಿಗೂ ರಾಜ್ಯ ಸರ್ಕಾರದ ಸೇವೆಯಲ್ಲಿರುವ ನೌಕರರಿಗೂ ವೇತನದಲ್ಲಿ ತಾರತಮ್ಯವಿರುವುದು ನಿಜವೇ; (ತತ್ಸಮಾನ ಹುದ್ದೆಗಳ ಹೋಲಿಕೆಗಳೊಂದಿಗೆ, ಉದಾರಣೆಗಳೊಂದಿಗೆ ಮಾಹಿತಿ ನೀಡುವುದು)

(ಆ) ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದ ನೌಕರರ ವೇತನದಲ್ಲಿ ಬಹಳ ದೊಡ್ಡ ವ್ಯತ್ಯಾಸಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರದ ಮುಂದಿರುವ ಕ್ರಮಗಳೇನು;

(ಇ) ರಾಜ್ಯ ಸರ್ಕಾರದ ನೌಕರರ ವೇತನ ಪರಿಷ್ಕರಣೆಗಾಗಿ ನೇಮಕಗೊಂಡಿರುವ ೬ನೇ ವೇತನ ಆಯೋಗ ಮುಂಬರುವ ಚುನಾವಣಾ ನೀತಿ ಸಂಹಿತೆ ಜಾರಿಗೆಯಾಗುವಂತಹ ಪೂರ್ವದಲ್ಲಿ ಆಯೋಗದ ವರದಿ ಜಾರಿಗೆ ತರಲಾಗುವುದೇ? (ವಿವರ ನೀಡುವುದು)

## ಪೌರ ಕಾರ್ಮಿಕರಿಗೆ ನೀಡುತ್ತಿರುವ ವೇತನ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೪೨೧೫ (೪೬೧೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಗರ ಸಭೆ/ಪಟ್ಟಣ ಪಂಚಾಯತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರ ಸಂಖ್ಯೆ ಎಷ್ಟು; ಇವರಿಗೆ ನೀಡುತ್ತಿರುವ ವೇತನ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಗುತ್ತಿಗೆ ನೌಕರರನ್ನು ಖಾಯಂ ನೌಕರರೆಂದು ಪರಿಗಣಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ; ಹಾಗಿದ್ದಲ್ಲಿ, ಎಷ್ಟು ನೌಕರರನ್ನು ಖಾಯಂಗೊಳಿಸಲಾಗಿದೆ; ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು;

(ಇ) ಬಳ್ಳಾರಿ ಜಿಲ್ಲೆಯ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳಲ್ಲಿ ಕೆಲಸ ಮಾಡುತ್ತಿರುವ ಪೌರ ಕಾರ್ಮಿಕರ ಸಂಖ್ಯೆ ಎಷ್ಟು; ಅವರಿಗೆ ಗುತ್ತಿಗೆದಾರರು ನೀಡುತ್ತಿರುವ ವೇತನ ಎಷ್ಟು;

(ಈ) ಗುತ್ತಿಗೆದಾರರು ಪ್ರತಿ ತಿಂಗಳು ೨೬ ದಿನಗಳಿಗೆ ಮಾತ್ರ ವೇತನ ನೀಡುತ್ತಿರುವುದು, ಭಾನುವಾರಗಳ ವೇತನ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಬಂದಿದ್ದಲ್ಲಿ, ಇದು ಕಾರ್ಮಿಕ ಕಾಯ್ದೆಯ ಸ್ಪಷ್ಟ ಉಲ್ಲಂಘನೆಯಾಗುವುದಿಲ್ಲವೆ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ವೇತನ ತಾರತಮ್ಯ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೪೨೧೬ (೪೬೧೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೊಲೀಸ್ ಪೇದೆಯಿಂದ ಮುಖ್ಯ ಪೇದೆಯವರೆಗೆ ಸಾರ್ವತ್ರಿಕ ರಜೆಗಳಲ್ಲಿ ಕರ್ತವ್ಯ ನಿರ್ವಹಿಸಿದವರಿಗೆ ತಿಂಗಳ ಪೂರ್ಣ ವೇತನ ನೀಡಲಾಗುತ್ತಿದೆಯೇ; ಅದೇ ರೀತಿ ಎ.ಎಸ್.ಐ.ನಿಂದ ಎಸ್.ಐ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ಸಾರ್ವತ್ರಿಕ ರಜೆಯ ಅರ್ಧ ವೇತನ ನೀಡಲಾಗುತ್ತಿದೆಯೇ;

(ಆ) ಎ.ಎಸ್.ಐ.ನಿಂದ ಎಸ್.ಐ. ವರೆಗೆ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ಸಾರ್ವತ್ರಿಕ ರಜೆಯಲ್ಲಿ ಕರ್ತವ್ಯ ನಿರ್ವಹಿಸಿದ ಪೂರ್ಣ ಪ್ರಮಾಣದ ವೇತನ ನೀಡದಿರುವ ತಾರತಮ್ಯವನ್ನು ಹೋಗಲಾಡಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

(ಇ) ಪೊಲೀಸ್ ಸಿಬ್ಬಂದಿಗಳಿಗೆ ಅಧಿವೇಶನದ ಸಂದರ್ಭದಲ್ಲಿ ಭತ್ಯೆ ನೀಡಲಾಗುತ್ತಿದೆಯೇ;

(ಈ) ಹಾಗಿದ್ದಲ್ಲಿ, ಶಾಸಕರ ಮತ್ತು ಇತರೆ ಗಣ್ಯ ವ್ಯಕ್ತಿಗಳ ಬಳಿ ಕೆಲಸ ಮಾಡುತ್ತಿರುವ ಪೊಲೀಸ್ ಸಿಬ್ಬಂದಿಗಳಿಗೆ ಏಕೆ ನೀಡಲಾಗುತ್ತಿಲ್ಲ; ಈ ಸೌಲಭ್ಯವನ್ನು ಎಲ್ಲಾ ಶಾಸಕರು/ಮಂತ್ರಿಗಳ ಬಳಿ ಕರ್ತವ್ಯ ನಿರ್ವಹಿಸುತ್ತಿರುವ ಪೊಲೀಸರಿಗೆ ನೀಡಲು ಯಾವ ಕ್ರಮ ಜರುಗಿಸಲಾಗುವುದು?

## ಭಾರಿ ಮಳೆಯಿಂದಾಗಿ ಆಗಿರುವ ನಷ್ಟದ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೪೨೧೭ (೪೬೬೪) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಬೆಂಗಳೂರಿನಲ್ಲಿ ಬಿದ್ದ ಭಾರಿ ಮಳೆಯಿಂದಾಗಿ ಮನೆಗಳನ್ನು ಕಳೆದುಕೊಂಡವರ ಸಂಖ್ಯೆ ಎಷ್ಟು; ಸತ್ತವರ ಸಂಖ್ಯೆ ಎಷ್ಟು;

(ಆ) ಮನೆ ಕಳೆದುಕೊಂಡವರಿಗೆ ಹಾಗೂ ಸತ್ತವರಿಗೆ ನಿಗದಿಪಡಿಸಿರುವ ಪರಿಹಾರದ ಮೊತ್ತ ಎಷ್ಟು;

(ಇ) ಮಳೆ ಹಾನಿಯಿಂದಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಉಂಟಾಗಿರುವ ನಷ್ಟದ ಮೊತ್ತ ಎಷ್ಟು?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಸ್ಲಂ ನಿವಾಸಿಗಳಿಗೆ ಹಂಚಿಕೆ ಆಗಿರುವ ನಿವೇಶನದ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೪೨೧೮ (೪೬೬೩) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪ರಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸ್ಲಂ ನಿವಾಸಿಗಳಿಗೆ ನೀಡಿದ ಹಕ್ಕು ಪತ್ರಗಳ ಸಂಖ್ಯೆ ಎಷ್ಟು;

(ಆ) ಯಾವ ಯಾವ ಸ್ಲಂಗಳಲ್ಲಿ ಎಷ್ಟೆಷ್ಟು ಮನೆಗಳನ್ನು ಕಟ್ಟಿಕೊಡಲಾಗಿದೆ;

(ಇ) ಸ್ಲಂ ನಿವಾಸಿಗಳಿಗೆ ಮನೆಗಳನ್ನು ಕಟ್ಟಿಕೊಳ್ಳಲು ನಿಗದಿಪಡಿಸಿರುವ ಹಣ ಎಷ್ಟು? (ಸಂಪೂರ್ಣ ವಿವರ ನೀಡುವುದು)

## ಅಭಿವೃದ್ಧಿ ಕಾಮಗಾರಿಗಳ ಅನುದಾನ ದುರ್ಬಳಕೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೨೧೯ (೪೬೨೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ಕಾರವಾರ ನಗರ ಸಭೆಯಲ್ಲಿ ವಿವಿಧ ಕಾಮಗಾರಿಗಳಲ್ಲಿ ಆಗಿರುವ ಅವ್ಯವಹಾರವನ್ನು ಲೋಕಾಯುಕ್ತರಿಂದ ತನಿಖೆ ಮಾಡಿಸಬೇಕೆಂದು ಒತ್ತಾಯಿಸಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ; (ವಿವರ ನೀಡುವುದು)

(ಆ) ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಇರುವ ನಗರಸಭೆ, ಪುರಸಭೆ, ಪಟ್ಟಣ ಪಂಚಾಯುತ್‌ಗಳಿಗೆ ೨೦೧೩–೧೪ನೇ ಸಾಲಿನಿಂದ ೨೦೧೬–೧೭ನೇ ಸಾಲಿನವರೆಗೆ ಯಾವ ಯಾವ ಶೀರ್ಷಿಕೆಯಲ್ಲಿ, ಯಾವ ಯಾವ ಯೋಜನೆಯಡಿ ಅನುದಾನ ಬಂದಿರುತ್ತದೆ ಹಾಗೂ ಸದರಿ ಅನುದಾನ ಯಾವ ಯಾವ ಅಭಿವೃದ್ಧಿ ಕಾಮಗಾರಿಗಳಿಗೆ ಬಳಕೆ ಮಾಡಲಾಗಿದೆ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ಕೆಲವೊಂದು ತಾಲ್ಲೂಕುಗಳಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಬಂದ ಅನುದಾನ ಬಳಕೆ ಮಾಡಿಕೊಳ್ಳುವುದರಲ್ಲಿ ಸಂಬಂಧಿಸಿದ ನಗರಸಭೆ,

ಪುರಸಭೆ, ಪಟ್ಟಣ ಪಂಚಾಯತ್, ಅಧಿಕಾರಿಗಳ ಹಾಗೂ ಅಭಿಯಂತರರ ಶಾಮೀಲಾತಿಯಿಂದ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಲೋಕಾಯುಕ್ತ ತನಿಖೆಗೆ ವಹಿಸಲಾಗುವುದೇ? (ವಿವರ ನೀಡುವುದು)

**ಹೊಸದಾಗಿ ನಿರ್ಮಾಣ ಮಾಡುವ ಬಡಾವಣೆಗಳ ಕುರಿತು**

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೪೨೨೦ (೪೭೫೦) ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ಕಳೆದ ೦೩ ವರ್ಷಗಳಲ್ಲಿ ನಿರ್ಮಾಣ ಮಾಡಿರುವ ಬಡಾವಣೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಬಡಾವಣೆಗಳ ನಿರ್ಮಾಣಕ್ಕಾಗಿ ರೈತರಿಂದ ಸ್ವಾಧೀನಪಡಿಸಿಕೊಳ್ಳಲಾದ ಜಮೀನಿನ ಪ್ರದೇಶಗಳಾವುವು; ಈ ರೀತಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನಿನ ರೈತರಿಗೆ ನೀಡಲಾಗಿರುವ ಪರಿಹಾರದ ಮೊತ್ತವೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ರೈತರಿಂದ ಸ್ವಾಧೀನಪಡಿಸಿಕೊಳ್ಳಲಾದ ಜಮೀನಿನಲ್ಲಿ ನಿರ್ಮಾಣ ಮಾಡಿರುವ ನಿವೇಶನಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಈ) ಬೆಂಗಳೂರು ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಿರ್ಮಿಸಲಾದ ಬಡಾವಣೆಗಳಲ್ಲಿ ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ; ಉಳಿದ ನಿವೇಶನಗಳ ಸಂಖ್ಯೆ ಎಷ್ಟು; (ಬಡಾವಣೆವಾರು ವಿವರ ನೀಡುವುದು)

(ಉ) ಫಲಾನುಭವಿಗಳನ್ನು ಆಯ್ಕೆ ಮಾಡಲು ಸರ್ಕಾರವು ಅನುಸರಿಸುತ್ತಿರುವ ಮಾನದಂಡಗಳೇನು?

## ಕೊಳಚೆ ನೀರು ಶುದ್ಧೀಕರಣ ಘಟಕ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೪೨೨೧ (೪೭೪೮) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಜಲಮಂಡಳಿಯು ಎಷ್ಟು ಕೊಳಚೆ ನೀರು ಶುದ್ಧೀಕರಣ ಘಟಕಗಳನ್ನು ಹೊಂದಿದೆ; ಹಾಗೂ ಇವುಗಳು ಸಂಸ್ಕರಿಸಬಹುದಾದ ನೀರಿನ ಪ್ರಮಾಣ ಎಷ್ಟು;

(ಆ) ಒಂದು ದಿನಕ್ಕೆ ಬೃಹತ್ ಬೆಂಗಳೂರು ವ್ಯಾಪ್ತಿಯಲ್ಲಿ ಎಷ್ಟು ಕೊಳಚೆ ನೀರು ಉತ್ಪತ್ತಿಯಾಗುತ್ತದೆ; ಇದರಲ್ಲಿ ಎಷ್ಟು ನೀರನ್ನು ಸಂಸ್ಕರಿಸಲಾಗುತ್ತಿದೆ;

(ಇ) ಬೆಂಗಳೂರು ನಗರದಲ್ಲಿ ನಿತ್ಯ ಕೊಳಚೆ ನೀರನ್ನು ಸಂಸ್ಕರಿಸಿ ಉಳಿದ ಕೊಳಚೆ ನೀರನ್ನು ಸಮೀಪದ ಕೆರೆಗಳಿಗೆ ಬಿಡಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಕೊಳಚೆ ನೀರು ಸಂಸ್ಕರಿಸಲು ಹಾಕಿಕೊಂಡಿರುವ ಯೋಜನೆಗಳಾವುವು; ಇದನ್ನು ಎಷ್ಟು ವರ್ಷಗಳಲ್ಲಿ ಅನುಷ್ಠಾನಗೊಳಿಸಲಾಗುವುದು?

## ಮಾದಕ ವಸ್ತು ಸಾಗಣೆ/ಮಾರಾಟಗಾರರಿಗೆ ಮಕ್ಕಳು ಬಲಿಯಾಗುವುದನ್ನು ತಡೆಯುವ ಬಗ್ಗೆ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೪೨೨೨ (೪೭೪೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಾದಕ ವಸ್ತುಗಳನ್ನು ಶಾಲಾ ವಯಸ್ಸಿನ ಮಕ್ಕಳಿಗೆ ಬಹಳ ಸುಲಭವಾಗಿ ತಲುಪಿಸುವ ಜಾಲ ರಾಜ್ಯದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಪ್ರಮುಖ ಜಿಲ್ಲೆಗಳ ಹೊರವಲಯದಲ್ಲಿ ಗಾಂಜ ಬೆಳೆಯುವ ಮತ್ತು ಮಕ್ಕಳ ಮೂಲಕ ಸರಬರಾಜು ಮಾಡಿಸುವ ದಂಧೆ ಸಕ್ರೀಯವಾಗಿರುವುದನ್ನು ತಡೆಯಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಮಾದಕ ವಸ್ತುಗಳ ಮಾರಾಟಗಾರರ ದಂಧೆಯ ಜಾಲಕ್ಕೆ ಬಲಿಯಾಗಿ ಕೊಲೆ, ಹಲ್ಲೆ, ಅಪಹರಣಗಳಲ್ಲಿ ನಾಪತ್ತೆಯಾದ ಮಕ್ಕಳುಗಳ ಪ್ರಕರಣಗಳಲ್ಲಿ ಪೊಲೀಸರು ಎಷ್ಟು ಪ್ರಕರಣಗಳನ್ನು ದಾಖಲಿಸಿದ್ದಾರೆ;

(ಈ) ಇಂತಹ ಪ್ರಕರಣಗಳಲ್ಲಿ ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ?

## ಬೆಂಗಳೂರು ನಗರದ ಪಾರ್ಕಿಂಗ್ ಸಮಸ್ಯೆ ಬಗ್ಗೆ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೪೨೨೩ (೪೭೪೯) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಪಾರ್ಕಿಂಗ್ ಸಮಸ್ಯೆಯು ಅತಿ ದೊಡ್ಡ ಸಮಸ್ಯೆಯಾಗಿ ಸಾರ್ವಜನಿಕರಿಗೆ ತೊಂದರೆಯುನ್ನುಂಟು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಪ್ರತಿ ವರ್ಷ ವಾಹನಗಳು ಹೆಚ್ಚಳವಾಗುತ್ತಿದ್ದು, ವಾಣಿಜ್ಯ ಪ್ರದೇಶಗಳಲ್ಲಿ ಹಾಗೂ ಸಾಮಾನ್ಯ ವಸತಿ ಪ್ರದೇಶಗಳಲ್ಲಿ ವಾಹನಗಳ ಹೆಚ್ಚಳದಿಂದ, ಎಲ್ಲೆಂದರಲ್ಲಿ ವಾಹನಗಳನ್ನು ನಿಲ್ಲಿಸುತ್ತಿರುವುದು ಸಾರ್ವಜನಿಕ ಆಕ್ರೋಶಕ್ಕೆ ಕಾರಣವಾಗಿರುವುದನ್ನು ತಡೆಯಲು ಸರ್ಕಾರ ಚಿಂತಿಸಿದೆಯೇ;

(ಇ) ಈ ಸಮಸ್ಯೆಯನ್ನು ಸರ್ಕಾರವು ಬಗೆಹರಿಸಲು ಯಾವ ಯಾವ ಕಾರ್ಯಕ್ರಮ ಹಾಕಿ ಕೊಂಡಿದೆ?

## ಬೆಂಗಳೂರಿನ ರಸ್ತೆಗಳನ್ನು ನೋ ಪಾರ್ಕಿಂಗ್ ಎಂದು ಗುರುತಿಸಿರುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) –**

೪೨೨೪ (೪೬೭೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

A) How many roads in Bengaluru have been declared as no-parking area;

B) Please give the names of the roads and the stretch (area in terms of Meters) marked as no-parking zones;

C) How many no-parking boards have been installed by the Police in Bengaluru City; (Please give jurisdiction-wise numbers)

D) Please furnish statistics pertaining to towing of vehicles in Bengaluru City Since 2017; Give a break-up of two-wheelers and four-wheelers towed away;

E) What are the current no-parking penalty and towing charges for different categories of vehicles;

F) How many towing vehicles are there with Bengaluru Traffic Police; What are the towing charges being paid to the operators of these vehicles;

G) What is/are the criteria/parameters for deciding no-parking zone ? (please give copies of orders/ circulars)

## ಬೆಂಗಳೂರು ನಗರದಲ್ಲಿ ಮಳೆಯಿಂದ ಹಾಳಾಗಿರುವ ರಸ್ತೆಗಳ ದುರಸ್ಥಿ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) –**

೪೨೨೫ (೪೬೭೮) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭ರ ಅಕ್ಟೋಬರ್ ಮಾಹೆಯಲ್ಲಿ ಬೆಂಗಳೂರು ನಗರದಲ್ಲಿ ಬಿದ್ದ ಭಾರಿ ಮಳೆಯಿಂದಾಗಿ ಎಲ್ಲಾ ವಾರ್ಡ್‍ಗಳಲ್ಲಿನ ರಸ್ತೆಗಳು ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಇದುವರೆವಿಗೂ ಎಷ್ಟು ಗುಂಡಿಗಳನ್ನು ಮುಚ್ಚಲಾಗಿರುತ್ತದೆ; (ವಿಧಾನಸಭಾವಾರು ವಿವರವನ್ನು ನೀಡುವುದು)

(ಇ) ಬಾಕಿ ಇರುವ ಗುಂಡಿಗಳನ್ನು ಎಷ್ಟು ದಿನಗಳೊಳಗಾಗಿ ಮುಚ್ಚಲಾಗುವುದು?

## ವಿಧಾನಸೌಧ ನಿರ್ಮಿಸಲು ಬಳಕೆಯಾದ ಕಲ್ಲುಗಳ ಮಾಹಿತಿ ನೀಡುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) –**

೪೨೨೬ (೪೬೭೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಧಾನಸೌಧ ಕಟ್ಟಡವನ್ನು ಯಾವಾಗ ಕಟ್ಟಲಾಯಿತು; ಕಟ್ಟಡಕ್ಕೆ ಬೇಕಾದ ಕಲ್ಲುಗಳನ್ನು ಎಲ್ಲಿಂದ ತರಲಾಯಿತು;

(ಆ) ವಿಧಾನಸೌಧ ಕಟ್ಟಡಕ್ಕೆ ಬಳಕೆಯಾದ ಒಟ್ಟು ಕಲ್ಲಿನ ಪ್ರಮಾಣವೆಷ್ಟು; (ವಿವರ ನೀಡುವುದು)

(ಇ) ವಿಧಾನಸೌಧ ಕಟ್ಟಡವನ್ನು ಕಟ್ಟಲು ತಗುಲಿದ ವೆಚ್ಚವೆಷ್ಟು; ಇದುವರೆವಿಗೂ ಕಟ್ಟಡ ನಿರ್ವಹಣೆಗಾಗಿ ವ್ಯಯಿಸಲಾದ ಹಣವೆಷ್ಟು;

(ಈ) ಕಟ್ಟಡದಲ್ಲಿ ಬಳಸಲಾದ ಕಲ್ಲಿನ ನಿರ್ವಹಣೆಗೆ ಆಸಿಡ್ ವಾಷ್ ಮಾಡಬೇಕೆಂಬುದು ನಿಜವೇ; ಹಾಗಿದ್ದರೆ, ಎಷ್ಟು ವರ್ಷಗಳಿಗೊಮ್ಮೆ ಆಸಿಡ್ ವಾಷ್ ನಡೆಸಬೇಕೆಂಬುದರ ವಿವರ ನೀಡುವುದು;

(ಉ) ಕೊನೆಯ ಬಾರಿ ಯಾವಾಗ ಆಸಿಡ್ ವಾಷ್ ಮಾಡಲಾಯಿತು; ಪ್ರತಿ ಬಾರಿ ಆಸಿಡ್ ವಾಷ್‌ಗೆ ತಗಲುವ ವೆಚ್ಚ ಎಷ್ಟು? (ವಿವರ ನೀಡುವುದು)

## ಆಸ್ತಿ ತೆರಿಗೆ ನಿಗದಿಪಡಿಸಿರುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) –**

೪೨೨೭ (೪೬೩೪) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ೨೦೧೪ರ ಏಪ್ರಿಲ್ ಮಾಹೆಯಿಂದ ೨೦೧೭ರ ಮಾರ್ಚ್ ವರೆಗೆ ಬೃಹತ್ ಕಟ್ಟಡಗಳಲ್ಲಿ ನಿರ್ಮಿಸಿರುವ ವಸತಿ ಸಂಕೀರ್ಣಗಳಲ್ಲಿರುವ ಎಷ್ಟು ಫ್ಲಾಟ್‌ಗಳಿಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ನಗರ ಯೋಜನೆಯಿಂದ ಮತ್ತು ೦೮ ವಲಯಗಳ ಮೂಲಕ ವಾಸ ಯೋಗ್ಯ ಪ್ರಮಾಣ ಪತ್ರ ನೀಡಲಾಗಿದೆ;

(ಆ) ಈ ವಸತಿ ಸಂಕೀರ್ಣಗಳಲ್ಲಿರುವ ಫ್ಲಾಟ್‌ಗಳನ್ನು ಆಸ್ತಿ ತೆರಿಗೆ ವ್ಯಾಪ್ತಿಗೆ ಸೇರಿಸಲಾಗಿದೆಯೇ; ಇದರಿಂದ ಮಹಾನಗರ ಪಾಲಿಕೆಗೆ ಬರ ಬೇಕಾಗಿರುವ ತೆರಿಗೆಯ ಮೊತ್ತವೆಷ್ಟು;

(ಇ) ಇದುವರೆವಿಗೂ ಈ ಫ್ಲಾಟ್‌ಗಳಿಂದ ವಸೂಲಾದ ತೆರಿಗೆಯ ಮೊತ್ತ ಎಷ್ಟು?

## ಪೊಲೀಸ್ ಇಲಾಖೆಯಲ್ಲಿ ಆಂತರಿಕ ಇಲಾಖೆ ಬಡ್ತಿ ಕುರಿತು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೨೨೮ (೪೭೧೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೊಲೀಸ್ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಪಿ.ಸಿ/ಎಚ್.ಸಿ./ ಎ.ಎಸ್.ಐ.ಗಳಿಗೆ ಅವರ ವಿದ್ಯಾರ್ಹತೆ, ಸೇವಾ ಅನುಭವ, ದಕ್ಷತೆ ಆಧಾರದ ಮೇಲೆ ವಿಶೇಷ ನೇಮಕಾತಿ ಪರೀಕ್ಷೆಯನ್ನು ಏರ್ಪಡಿಸಿ, ಅದರಲ್ಲಿ ಉತ್ತೀರ್ಣರಾದವರಿಗೆ, ಇಲಾಖಾ ಆಂತರಿಕ ಬಡ್ತಿಗೆ ಶೇಕಡಾವಾರು ಹುದ್ದೆಗಳನ್ನು ನಿಗಧಿಪಡಿಸಿ, ನೇರವಾಗಿ ಪಿ.ಎಸ್.ಐ ಹುದ್ದೆಗೆ ಬಡ್ತಿ ನೀಡುತ್ತಿದ್ದ ಪದ್ಧತಿಯನ್ನು ನಿಲ್ಲಿಸಲಾಗಿದೆಯೇ;

(ಆ) ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಸೂಕ್ತ ವಿದ್ಯಾರ್ಹತೆ ಸೇವಾ ದಕ್ಷತೆ ಹೊಂದಿರುವ ಇವರಿಗೆ ವಿಶೇಷ ನೇಮಕಾತಿ ಪರೀಕ್ಷೆಯನ್ನು ಏರ್ಪಡಿಸುವ ಮೂಲಕ ಬಡ್ತಿ ನೀಡುವ ಪದ್ಧತಿಯನ್ನು ಮುಂದುವರೆಸಲು ಕ್ರಮ ತೆಗೆದುಕೊಳ್ಳಲಾಗುವುದೇ;

(ಇ) ಪೊಲೀಸ್ ಇಲಾಖೆಯ ವಿವಿಧ ವಿಭಾಗಗಳಲ್ಲಿ (ಸಿವಿಲ್, ಸಿ.ಒ.ಡಿ., ಎಸ್.ಐ.ಟಿ., ಎ.ಎಸ್., ಐ.ಎಸ್.ಎಫ್., ಇಂಟಲಿಜೆನ್ಸ್, ಎಫ್.ಎಸ್.ಎಲ್., ವೈರ್‌ಲೆಸ್ ಸಿ.ಎ.ಆರ್., ಡಿ.ಎ.ಆರ್., ಕೆ.ಎಸ್.ಆರ್.ಪಿ., ಇತ್ಯಾದಿ) ಖಾಲಿ ಇರುವ ಪೊಲೀಸ್ ಸಬ್ ಇನ್‌ಸ್ಪೆಕ್ಟರ್ ಹುದ್ದೆಗಳ ಸಂಖ್ಯೆ ಎಷ್ಟು; ಈ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು; ಈ ಹುದ್ದೆಗಳಲ್ಲಿ ಕೆಲವು ಪ್ರಮಾಣದ ಶೇಕಡಾವಾರು ಹುದ್ದೆಗಳನ್ನು ನಿಗದಿಪಡಿಸಿ ಮೇಲ್ಕಂಡ ವಿಧಾನದ ಮೂಲಕ ಬಡ್ತಿ ನೀಡಲು ಕ್ರಮ ತೆಗೆದುಕೊಳ್ಳಲಾಗುವುದೆ?

## ಮೈಸೂರು ನಗರದಲ್ಲಿ ತ್ಯಾಜ್ಯ ವಿಲೇವಾರಿ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೨೨೯ (೪೭೧೭) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ನಗರದಲ್ಲಿ ಪ್ರತಿದಿನ ಸಂಗ್ರಹವಾಗುತ್ತಿರುವ ತ್ಯಾಜ್ಯದ ಪ್ರಮಾಣ ಎಷ್ಟು; ಇವುಗಳಲ್ಲಿ ಎಷ್ಟು ಟನ್ ತ್ಯಾಜ್ಯವನ್ನು ಸಂಸ್ಕರಿಸಲಾಗುತ್ತಿದೆ; ಹಾಗೆ ವಿಲೇವಾರಿಯಾಗುತ್ತಿರುವ ತ್ಯಾಜ್ಯ ಎಷ್ಟು;

(ಆ) ಎಷ್ಟು ತ್ಯಾಜ್ಯ ಸಂಸ್ಕರಣಾ ಘಟಕಗಳಿವೆ; ಅವುಗಳ ಸಾಮರ್ಥ್ಯ ಎಷ್ಟು; ಸೂಯೆಜ್ ಫಾರಂ ಸುತ್ತಮುತ್ತಲ ಬಡಾವಣೆಗಳಲ್ಲಿ ತ್ಯಾಜ್ಯದ ಕೊಳೆತದಿಂದ ದುರ್ವಾಸನೆ, ಸೊಳ್ಳೆ, ನೊಣಗಳ ಕಾಟ ಉಂಟಾಗಿ ಜನತೆಯ ಆರೋಗ್ಯಕ್ಕೆ ಧಕ್ಕೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸೂಯೆಜ್ ಫಾರಂ ತ್ಯಾಜ್ಯ ಸಂಸ್ಕರಣಾ ಘಟಕದ ಸಾಮರ್ಥ್ಯವನ್ನು ಹೆಚ್ಚಿಸಲು ಕ್ರಮ ತೆಗೆದುಕೊಳ್ಳಲಾಗುವುದೇ?

## ನಂಜನಗೂಡು ರಥ ಬೀದಿಯ ಅಭಿವೃದ್ಧಿ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೨೩೦ (೪೭೧೬) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಂಜನಗೂಡು ರಥ ಬೀದಿಯ ಅಭಿವೃದ್ಧಿ ಕಾಮಗಾರಿ ಆರಂಭವಾಗಿದೆಯೇ; ಅಂದಾಜು ವೆಚ್ಚ, ಕಾಮಗಾರಿಯ ರೂಪರೇಷೆಗಳು, ಇದುವರೆಗೆ ಆಗಿರುವ ಕಾಮಗಾರಿಗಳ ವಿವರಗಳನ್ನು ಒದಗಿಸುವುದು; ರಥ ಬೀದಿಯ ಒತ್ತುವರಿಯನ್ನು ತೆರವು ಮಾಡಲು ಕ್ರಮ ಜರುಗಿಸಲಾಗಿದೆಯೇ;

(ಆ) ದೇವಾಲಯ ಸಂಕೀರ್ಣದಲ್ಲಿ ಉದ್ಯಾನವನ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಲಾಗಿದೆಯೇ; ಇದರ ಅಂದಾಜು ವೆಚ್ಚ, ಕಾಮಗಾರಿಯ ರೂಪರೇಷೆಗಳೇನು; ಇದುವರೆಗೆ ಆಗಿರುವ ಕಾಮಗಾರಿಗಳೆಷ್ಟು; (ವಿವರ ಒದಗಿಸುವುದು)

(ಇ) ನಂಜನಗೂಡು ಪಟ್ಟಣದ ಹೊಳೆಯ ಪಕ್ಕದಲ್ಲಿ ಉದ್ದಕ್ಕೂ ಸ್ವಚ್ಛತಾ ಅಭಿಯಾನ ಕೈಗೊಂಡು, ಮರಗಳನ್ನು, ಮರದ ತೋಪನ್ನು ಬೆಳೆಸಲು ಕ್ರಮ ತೆಗೆದುಕೊಳ್ಳಲಾಗುವುದೇ?

## ಪೌರ ಕಾರ್ಮಿಕರ ನಕಲಿ ದಾಖಲೆ ಸೃಷ್ಟಿಸಿ ವಂಚಿಸಿರುವ ಬಗ್ಗೆ

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು)–**

೪೨೩೧ (೪೬೩೭) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಪೌರ ಕಾರ್ಮಿಕರ ನಕಲಿ ದಾಖಲೆ ಸೃಷ್ಠಿಸಿ ಹಣ ವಂಚಿಸಿರುವ ಪ್ರಕರಣ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸರ್ಕಾರಕ್ಕೆ ವಂಚಿಸಿರುವ ಮೊತ್ತವೆಷ್ಟು;

(ಇ) ಸದರಿ ವಂಚನೆ ಪ್ರಕರಣದಲ್ಲಿ ಭಾಗಿಯಾದ ಅಧಿಕಾರಿಗಳು ಮತ್ತು ಗುತ್ತಿಗೆದಾರರು ಯಾರು;

(ಈ) ಈ ಅಧಿಕಾರಿಗಳು ಮತ್ತು ಗುತ್ತಿಗೆದಾರರ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಹಾನಿಗೊಳಗಾದ ಮನೆಗಳಿಗೆ ಪರಿಹಾರದ ಬಗ್ಗೆ

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು)–**

೪೨೩೨ (೪೬೩೮) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಮಳೆಯಿಂದ ಮನೆಗಳು ಹಾನಿಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದರೆ, ಎಷ್ಟು ಮನೆಗಳಿಗೆ ಪರಿಹಾರ ನೀಡಲಾಗಿದೆ; ಪರಿಹಾರ ನೀಡಲು ಬಾಕಿಯಿರುವ ಮನೆಗಳ ಸಂಖ್ಯೆ ಎಷ್ಟು;

(ಇ) ಹಾನಿಗೊಳಗಾದ ಮನೆಗಳಿಗೆ ಪರಿಹಾರವನ್ನು ಯಾವ ಮಾನದಂಡದಲ್ಲಿ ನಿಗಧಿಪಡಿಸಲಾಗಿದೆ;

(ಈ) ಸಂತ್ರಸ್ಥರಿಗೆ ದೊರೆತ ಪರಿಹಾರ ಮೊತ್ತದಿಂದ ಮನೆ ದುರಸ್ಥಿಪಡಿಸಲು ಸಾಧ್ಯವೆ?

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ(ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಳಗಾವಿ – ಪ್ರತಿಗಳು–750